ಸಂಪುಟ: 03 | ಸಂಚಿಕೆ: 253 | ದಿನಾಂಕ: 19-08-2026 | ಬುಧವಾರ | ಪುಟ: 4 | ಬೆಲೆ: 2.00ರೂ.

ಸಂಪಾದಕರು, ಮಾಲೀಕರು: ರಾಧಿಕಾ ಎ.ಆರ್.

RNI:KARKAN/2023/88508, Postal Reg No:L2/RNP-1287/TMR/2025-27

# ಕರ್ನಾಟಕ ಸಕ್ಸಸ್ ನಂ1

KARNATAKA SUCCESS NO1 Kannada Daily

ಕನ್ನಡ ದಿನಪತ್ರಿಕೆ

ಇದು ಸ್ವಾಭಿಮಾನಿಗಳ ಧ್ವನಿ

Email: radhikaarno1@gmail.com Ph: 9380988530

## ಆ.21ರಂದು ಗೊರವನಹಳ್ಳಿ ಶ್ರೀ ಮಹಾಲಕ್ಷ್ಮಿ ದೇವಾಲಯದಲ್ಲಿ ವಿಶೇಷ ಪೂಜೆ

**ತುಮಕೂರು:** ಜಿಲ್ಲೆಯ ಕೊರಟಗೆರೆ ತಾಲ್ಲೂಕು ಗೊರವನಹಳ್ಳಿ ಶ್ರೀ ಮಹಾಲಕ್ಷ್ಮಿ ದೇವಾಲಯದಲ್ಲಿ ಶ್ರಾವಣ ಮಾಸದ 2ನೇ ಶುಕ್ರವಾರ ಆಗಸ್ಟ್ 21ರಂದು ವರಮಹಾಲಕ್ಷ್ಮಿ ಹಬ್ಬದ ಪ್ರಯುಕ್ತ ಶ್ರೀ ಮಹಾಲಕ್ಷ್ಮಿ ಅಮ್ಮನವರಿಗೆ ವಿಶೇಷ ಹೂವಿನ ಅಲಂಕಾರ, ಪಂಚಾಮೃತ ಅಭಿಷೇಕ, ಮಹಾ ಮಂಗಳಾರತಿ ಸೇರಿದಂತೆ ವಿಶೇಷ ಪೂಜಾ ಸೇವೆಗಳು ಜರುಗಲಿವೆ.

ವಿಶೇಷ ಪೂಜಾ ಕಾರ್ಯಕ್ರಮದ ಪ್ರಯುಕ್ತ ಮಹಾ ಮಂಗಳಾರತಿ ನಂತರ ಭಕ್ತಾದಿಗಳಿಗೆ ಪ್ರಸಾದ ವಿನಿಯೋಗ, ಕುಡಿಯುವ ನೀರಿನ ವ್ಯವಸ್ಥೆ, ಸರತಿ ಸಾಲಿನಲ್ಲಿ ಅಮ್ಮನವರ ದರ್ಶನ ವ್ಯವಸ್ಥೆ ಮಾಡಲಾಗುವುದು. ಅಲ್ಲದೆ, ದಾಸೋಹ ನಿಲಯದಲ್ಲಿ ಬೆಳಗ್ಗೆ 7 ರಿಂದ ರಾತ್ರಿ 10 ಗಂಟೆಯವರೆಗೆ ನಿರಂತರವಾಗಿ ತಿಂಡಿ ಮತ್ತು ಊಟದ ವ್ಯವಸ್ಥೆ ಕಲ್ಪಿಸಲಾಗಿದೆ. ಮಹಿಳಾ ಭಕ್ತಾದಿಗಳಿಗೆ ಮಾತೆ ಕಮಲಮ್ಮ ಧ್ಯಾನಮಂದಿರದಲ್ಲಿ ಅರಿಶಿನ-ಕುಂಕುಮ,

# ಬಿಡದಿ ಟೌನ್‌ಶಿಪ್ ವಿರೋಧಿಸಿ ಜೆಡಿಎಸ್ ರಣಕಹಳೆ

**ಬೆಂಗಳೂರು:** ಬಿಡದಿ ಉಪನಗರ ಯೋಜನೆ ವಿರೋಧಿಸಿ ರೈತರು ನಡೆಸುತ್ತಿರುವ ಹೋರಾಟಕ್ಕೆ ಬೆಂಬಲ ನೀಡಿರುವ ಜೆಡಿಎಸ್ ಇಂದು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು, ಜೆಡಿಎಸ್ ರಾಜ್ಯಾಧ್ಯಕ್ಷ ಹಾಗೂ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ನೇತೃತ್ವದಲ್ಲಿ ನಗರದ ಸ್ವಾತಂತ್ರ್ಯ ಉದ್ಯಾನವನದಲ್ಲಿ ಬೃಹತ್ ಪ್ರತಿಭಟನಾ ಸಮಾವೇಶ ನಡೆಸಿತು.

ಸಂಸದ ಮಲ್ಲೇಶ್‌ಬಾಬು, ಜೆಡಿಎಸ್ ಕೋರ್‌ಕಮಿಟಿ ಅಧ್ಯಕ್ಷ ಎಂ.ಕೃಷ್ಣಾರೆಡ್ಡಿ, ಮಾಜಿ ಸಚಿವರಾದ ಲೀಲಾದೇವಿ ಆರ್.ಪ್ರಸಾದ್, ಬಂಡೆಪ್ಪ ಕಾಶಂಪೂರ್, ವಿಧಾನಪರಿಷತ್ ಸದಸ್ಯರಾದ ಟಿ.ಎ.ಶರವಣ, ಜವರಾಯಿಗೌಡ, ಎಸ್.ಎಲ್.ಬೋಜೇಗೌಡ, ಮಾಜಿ ಶಾಸಕರಾದ ರಮೇಶ್‌ಗೌಡ, ಚೌಡರೆಡ್ಡಿ, ತಿಪ್ಪೇಸ್ವಾಮಿ, ಡಾ.ಅನ್ನದಾನಿ, ಜೆಡಿಎಸ್ ರಾಜ್ಯ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್‌ಕುಮಾರಸ್ವಾಮಿ ಮೊದಲಾದವರ ನೇತೃತ್ವದಲ್ಲಿ ಬಿಡದಿ ಟೌನ್‌ಶಿಪ್ ವಿರೋಧಿಸುವ ಬಹಿರಂಗ ಸಭೆ ನಡೆಯಿತು.

ಹಸಿರು ಶಾಲು ಪ್ರದರ್ಶಿಸಿ, ರೈತ ಗೀತೆ ಹಾಡುವ ಮೂಲಕ ಬಹಿರಂಗ ಭೆಯನ್ನು ಆರಂಭಿಸಲಾಯಿತು. ರಾಜ್ಯ ಸರ್ಕಾರದ ವಿರುದ್ಧ ಫಲಕಗಳನ್ನು ಪ್ರದರ್ಶಿಸಿ ಘೋಷಣೆಗಳನ್ನು ಕೂಗಿ ಬಿಡದಿ ಉಪನಗರ ಯೋಜನೆಯನ್ನು ರದ್ದುಪಡಿಸುವಂತೆ ಆಗ್ರಹಿಸಲಾಯಿತು. ಬಿಡದಿ ಭಾಗದ ಅಪಾರ ಸಂಖ್ಯೆಯ ರೈತರು ಬಹಿರಂಗ ಸಮಾವೇಶದಲ್ಲಿ ಭಾಗವಹಿಸಿದ್ದರು.ರೈತರ ವಿರೋಧದ ನಡುವೆಯೂ ಬಿಡದಿ ಉಪನಗರ ಯೋಜನೆ ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರ ಮುಂದಾಗಿದ್ದು, ರೈತರ ವಿರೋಧಿ ಧೋರಣೆ ಅನುಸರಿಸುತ್ತಿದೆ. ಕೂಡಲೇ ಬಿಡದಿ ಉಪನಗರ ಯೋಜನೆಯನ್ನು ಕೈಬಿಟ್ಟು ರೈತರ ಹಿತ ಕಾಪಾಡಬೇಕೆಂದು ಬಹಿರಂಗ ಸಭೆಯಲ್ಲಿ ರಾಜ್ಯ ಸರ್ಕಾರವನ್ನು ಆಗ್ರಹಿಸಲಾಯಿತು.

ಮಾಜಿ ಶಾಸಕ ವೈ.ಎಸ್.ವಿ.ದತ್ತ ಮಾತನಾಡಿ, ಬಿಡದಿ ಉಪನಗರ ಯೋಜನೆ ಅನುಷ್ಠಾನಗೊಳಿಸುವುದರಿಂದ ಬಡವರಿಗೆ ಏನೂ ಲಾಭವಿಲ್ಲ. ಈ ಯೋಜನೆಯ ಫಲಾನುಭವಿಗಳು, ರೈತರು, ಬಡವರು, ಹಿಂದುಳಿದ ವರ್ಗದವರು, ಪರಿಶಿಷ್ಟ ಜಾತಿ ಮತ್ತು ಪಂಗಡದವರು ಯಾರೂ ಅಲ್ಲ. ಶ್ರೀಮಂತರು ಮತ್ತು ಬಂಡವಾಳಶಾಹಿಗಳಿಗೆ ಅನುಕೂಲ ಮಾಡಿಕೊಡಲು ಈ ಯೋಜನೆ ಜಾರಿಗೆ ತರಲು ಸರ್ಕಾರ ಮುಂದಾಗಿದೆ ಎಂದು ಆರೋಪಿಸಿದರು.



ಫಲವತ್ತಾದ ಕೃಷಿ ಭೂಮಿಯನ್ನು ಸ್ವಾದೀನಪಡಿಸಿಕೊಂಡು ರೈತರಿಗೆ ಬೀದಿಗೆ ತಳ್ಳುವ ಹುನ್ನಾರ ನಡೆಸಲಾಗುತ್ತಿದೆ. ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿಯವರು ಮುಖ್ಯಮಂತ್ರಿಯಾಗಿದ್ದಾಗ ಈ ಯೋಜನೆ ಮಾಡಲು ಮುಂದಾಗಿದ್ದರು. ಆಗ ರೈತರ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ಉಪನಗರ ಯೋಜನೆಯನ್ನು ರದ್ದುಪಡಿಸಿದ್ದರು. ಆದರೂ ಸರ್ಕಾರ ಉಪನಗರ ಯೋಜನೆ ಅನುಷ್ಠಾನಗೊಳಿಸಲು ಮುಂದಾಗಿದೆ. ಈ ಯೋಜನೆ ಕೈ ಬಿಡುವವರೆಗೂ ಹೋರಾಟ ನಿಲ್ಲುವುದಿಲ್ಲ ಎಂದು ಅವರು ಹೇಳಿದರು.

### ಜೆಡಿಎಸ್‌ನಿಂದ 'ವಿಧಾನ ಸೌಧ ಚಲೋ'

**ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಜೆಡಿಎಸ್ ಮಂಗಳವಾರ ಸಾರ್ವಜನಿಕ ಸಭೆ ಹಾಗೂ ವಿಧಾನಸೌಧ ಚಲೋ ಪ್ರತಿಭಟನೆಯನ್ನು ನಡೆಸಿತು. ಕಾಂಗ್ರೆಸ್ ಸರ್ಕಾರದ ಪ್ರಸ್ತಾವಿತ ಬಿಡದಿ ಟೌನ್ ಶಿಪ್ ಯೋಜನೆಗಾಗಿ ಭೂಸ್ವಾಧೀನ ಮಾಡುವ ಕ್ರಮವನ್ನು ವಿರೋಧಿಸಿ ಈ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು.**

**ಜೆಡಿಎಸ್ ವರಿಷ್ಠ ಹಾಗೂ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ, ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ, ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಸೇರಿದಂತೆ ಪಕ್ಷದ ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಇತರ ಹಿರಿಯ ನಾಯಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.**

## ಕಡೇಪಾಳ್ಯ ಶ್ರೀ ಸಿದ್ದೇಶ್ವರಸ್ವಾಮಿಗೆ ಅದ್ದೂರಿ ಶ್ರಾವಣ ರುದ್ರಾಭಿಷೇಕ

**ಗುಬ್ಬಿ:** ತಾಲೂಕಿನ ಕಡೇಪಾಳ್ಯ ಗ್ರಾಮದಲ್ಲಿರುವ ಶ್ರೀ ಸಿದ್ದೇಶ್ವರ ಸ್ವಾಮಿಯವರ ಶ್ರಾವಣ ಮಾಸದ 9ನೇ ವರ್ಷದ ರುದ್ರಾಭಿಷೇಕ ಕಾರ್ಯಕ್ರಮವು ಶ್ರೀ ಕ್ಷೇತ್ರ ಅಣಪ್ಪನಹಳ್ಳಿ ಶನೇಶ್ವರ ಮಠದ ಶ್ರೀ ಸೋಮಶೇಖರ ಸ್ವಾಮೀಜಿಯವರ ನೇತೃತ್ವದಲ್ಲಿ ವಿಧಿವತ್ತಾಗಿ, ಶ್ರದ್ಧಾಭಕ್ತಿಯಿಂದ ಹಾಗೂ ಸಂಭ್ರಮದಿಂದ ನೆರವೇರಿತು.



ಕಾರ್ಯಕ್ರಮದಲ್ಲಿ ಶ್ರೀ ಸಿದ್ದೇಶ್ವರಸ್ವಾಮಿಗೆ ವಿಶೇಷ ಪೂಜೆ, ರುದ್ರಾಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಲಾಯಿತು. ಸಾವಿರಾರು ಭಕ್ತರು ಪಾಲ್ಗೊಂಡು ಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಆಶೀರ್ವಚನ ನೀಡಿದ ಶ್ರೀ ಶ್ರೀ ಸೋಮಶೇಖರ ಸ್ವಾಮೀಜಿಯವರು, ?ಕಡೇಪಾಳ್ಯದ ಜನರಿಗೆ ಆರೋಗ್ಯ, ಆಯುಷ್ಯ ಹಾಗೂ ಐಶ್ವರ್ಯವನ್ನು ಕರುಣಿಸಿ, ಎಲ್ಲರೂ ನೆಮ್ಮದಿಯಿಂದ ಜೀವನ ನಡೆಸುವಂತೆ ಶ್ರೀ ಸಿದ್ದೇಶ್ವರ ಸ್ವಾಮಿಯಲ್ಲಿ ಪ್ರಾರ್ಥಿಸುತ್ತೇನೆ? ಎಂದರು.

ಸಂಜೆ ನಡೆದ ಸಾಂಸ್ಕೃತಿಕ ಕಾರ್ಯಕ್ರಮವನ್ನು ನೆಲಮಂಗಲದ ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯರು ಹಾಗೂ ಕರ್ನಾಟಕ ಅಗ್ನಿವಂಶ ಕ್ಷತ್ರಿಯ ತಿಗಳರ ಸಂಘದ ಕಾರ್ಯಾಧ್ಯಕ್ಷ ಡಿ. ಅರ್ಜುನ್ ಉದ್ಘಾಟಿಸಿದರು. ಜಾನಪದ ಗಾಯಕ ಕೆಸ್ತೂರು ಗೋವಿಂದರಾಜು ಹಾಗೂ ರಂಗಭೂಮಿ ಕಲಾವಿದರಾದ ಟಿ. ಗೊಲ್ಲಹಳ್ಳಿ ಜಿ.ಡಿ. ತಿಮ್ಮೇಗೌಡ್ರು ಸೇರಿದಂತೆ ಹಲವು ಕಲಾವಿದರು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಮೆರುಗು ತಂದರು.

ದೇವಸ್ಥಾನದ ಅಧ್ಯಕ್ಷ ಶಿವಣ್ಣ ಎಸ್., ಖಜಾಂಚಿ ಮೊಗ್ಗಿನ ಶಿವಣ್ಣ, ಶ್ರೀ ಸಿದ್ದೇಶ್ವರ ಸ್ವಾಮಿಯ ಪ್ರಧಾನ ಅರ್ಚಕ ಶಿವರಾಜು ಜಿ., ಹೊಸಹಳ್ಳಿಯ ಶ್ರೀ ಗಂಗಾಧರ ದೇವರು,

ಶ್ರೀ ರೇಣುಕಾರಾಧ್ಯ, ಕೆಚ್ಚೆದೆಯ ಅಗ್ನಿವಂಶ ಕ್ಷತ್ರಿಯರ ಸೇನೆಯ ಪದಾಧಿಕಾರಿಗಳು, ಯುವ ಮುಖಂಡರಾದ ಭರತ್, ರಘೇಶ್, ಸಿದ್ದೇಶ್ ಸೇರಿದಂತೆ ಶ್ರೀ ಸಿದ್ದೇಶ್ವರ ಸ್ವಾಮಿಯ ಭಕ್ತರು ಹಾಗೂ ಕಡೇಪಾಳ್ಯ ಗ್ರಾಮಸ್ಥರು ಉಪಸ್ಥಿತರಿದ್ದರು.

## ಬಂಜಾರ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

**ತುಮಕೂರು:** ಜಿಲ್ಲೆಯ ಬಂಜಾರ ಸಮುದಾಯದ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.95ಕ್ಕಿಂತ ಹೆಚ್ಚು ಅಂಕ ಪಡೆದ 12 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಶ್ರೀ ಸೇವಾಲಾಲ್ ಸಹಕಾರ ಪತ್ತಿನ ಬ್ಯಾಂಕ್ ಮತ್ತು ಜಿಲ್ಲಾ ಬಂಜಾರ ಸೇವಾ ಸಂಘದ ವತಿಯಿಂದ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ತುಮಕೂರು ನಗರದ ಸರಸ್ವತಿಪುರಂನಲ್ಲಿರುವ ಜಿಲ್ಲಾ ಬಂಜಾರ ಭವನದಲ್ಲಿ ಈ ಕಾರ್ಯಕ್ರಮ ವಿಜೃಂಭಣೆಯಿಂದ ನಡೆಯಿತು.



ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಸ್ಮರಣಿಕೆ, ಪ್ರಶಸ್ತಿ ಪತ್ರ ಮತ್ತು ನಗದು ಬಹುಮಾನ ನೀಡಿ ಪ್ರೋತ್ಸಾಹಿಸಲಾಯಿತು. ಶೈಕ್ಷಣಿಕವಾಗಿ ಉತ್ತಮ ಸಾಧನೆ ಮಾಡಿರುವ ವಿದ್ಯಾರ್ಥಿಗಳು ಇಡೀ ಸಮಾಜಕ್ಕೆ ಮಾದರಿಯಾಗಬೇಕು. ಶಿಕ್ಷಣವೊಂದೇ ಸಮುದಾಯದ ಅಭಿವೃದ್ಧಿಗೆ ಮೂಲ ಅಡಿಪಾಯ ಎಂದು ವೇದಿಕೆಯ ಗಣ್ಯರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಜಿಲ್ಲಾ ಬಂಜಾರ ಸಂಘದ ಜಿಲ್ಲಾಧ್ಯಕ್ಷ ನಾರಾಯಣ ನಾಯ್ಕ ಡಿ, ಪ್ರಧಾನ ಕಾರ್ಯದರ್ಶಿ ಶಂಕರ್ ಬಿ, ಸಂಘಟನಾ ಕಾರ್ಯದರ್ಶಿ ಕೆ.ಎಲ್. ಸ್ವಾಮಿ ಲಾಲ್, ಶ್ರೀ ಸೇವಾಲಾಲ್ ಸಹಕಾರ ಪತ್ತಿನ ಬ್ಯಾಂಕ್ ಅಧ್ಯಕ್ಷ ಬಿ.ಎಸ್. ಕುಬೇಂದ್ರ ನಾಯ್ಕ, ಉಪಾಧ್ಯಕ್ಷ ಶಂಕರ್ ಆರ್ ನಾಯ್ಕ, ಮಾಜಿ ತಾಲೂಕು ಪಂಚಾಯಿತಿ ಅಧ್ಯಕ್ಷೆ ಇಂದಿರಾ ದೇನಾ ನಾಯ್ಕ, ಮಹಿಳಾ ಸಂಘದ ಜಿಲ್ಲಾಧ್ಯಕ್ಷೆ ಶಾಂತ ಜಯರಾಮ್ ನಾಯ್ಕ ಸೇರಿದಂತೆ ಸಂಘಗಳ ಪದಾಧಿಕಾರಿಗಳು, ನಿರ್ದೇಶಕರು ಮತ್ತು ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

ಕೌಶಿಕ್ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿ ಅಧ್ಯಕ್ಷ ಧನಂಜಯ್ ಮತ್ತು ಸಂಸ್ಥೆಯ ಸಿಬ್ಬಂದಿ ವರ್ಗವೂ ಕಾರ್ಯಕ್ರಮದಲ್ಲಿ ಭಾಗವಹಿಸಿ ವಿದ್ಯಾರ್ಥಿಗಳನ್ನು ಅಭಿನಂದಿಸಿದರು.

ಕಾರ್ಯಕ್ರಮದಲ್ಲಿ ಪೋಷಕರು, ಶಿಕ್ಷಕರು ಮತ್ತು ಸಮುದಾಯದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ವಿದ್ಯಾರ್ಥಿಗಳ ಸಾಧನೆಯನ್ನು ಮುಕ್ತಕಂಠದಿಂದ ಶ್ಲಾಘಿಸಿದರು.

ಪ್ರತಿಭೆ ಗುರುತಿಸಿ ಪ್ರೋತ್ಸಾಹಿಸುವ ಇಂತಹ ಕಾರ್ಯಕ್ರಮಗಳು ಮುಂದಿನ ಪೀಳಿಗೆಗೆ ಪ್ರೇರಣೆಯಾಗಲಿವೆ ಎಂದು ಪಾಲ್ಗೊಂಡವರು ಹೇಳಿದರು.

## ಹುಳಿಗೆರೆ ಲಕ್ಷ್ಮಿದೇವಿ ದೇವಸ್ಥಾನದ ಜೀರ್ಣೋದ್ಧಾರಕ್ಕೆ 2 ಲಕ್ಷ ನೆರವು



**ಶಿರಾ:** ತುಮಕೂರು-2 ಜಿಲ್ಲೆಯ ಶಿರಾ-2 ಯೋಜನಾ ವ್ಯಾಪ್ತಿಯ ಕೋಟೆ ವಲಯದ ಮದಲೂರು ಕಾರ್ಯಕ್ಷೇತ್ರದ ಹುಳಿಗೆರೆ ಗ್ರಾಮದ ಶ್ರೀ ಲಕ್ಷ್ಮಿದೇವಿ ದೇವಸ್ಥಾನದ ಜೀರ್ಣೋದ್ಧಾರ ಕಾರ್ಯಕ್ಕೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ?2 ಲಕ್ಷ ಮೊತ್ತದ ಡಿಡಿಯನ್ನು ವಿತರಿಸಲಾಯಿತು.

ಯೋಜನೆಯ ಪ್ರಾದೇಶಿಕ ನಿರ್ದೇಶಕರಾದ ಶಿನಪ್ಪ ಎಂ. ಅವರು ದೇವಸ್ಥಾನದ ಅಭಿವೃದ್ಧಿ ಸೇವಾ ಟ್ರಸ್ಟ್‌ನ ಪದಾಧಿಕಾರಿಗಳಿಗೆ ಡಿಡಿಯನ್ನು ಹಸ್ತಾಂತರಿಸಿದರು.

ಈ ಸಂದರ್ಭದಲ್ಲಿ ಯೋಜನಾಧಿಕಾರಿ ರಮೇಶ್, ಶ್ರೀ ಲಕ್ಷ್ಮಿದೇವಿ ದೇವಸ್ಥಾನದ ಅಭಿವೃದ್ಧಿ ಸೇವಾ ಟ್ರಸ್ಟ್ ಅಧ್ಯಕ್ಷ ರಾಮಕೃಷ್ಣಪ್ಪ, ಕೋಶಾಧಿಕಾರಿ ಮಂಜುನಾಥ್, ಊರಿನ ಮುಖಂಡರಾದ ಸೂರ್ಯಗೌಡ, ಹೆಚ್.ಟಿ. ರಾಜಣ್ಣ, ವಲಯ ಮೇಲ್ವಿಚಾರಕರಾದ ನಳಿನ, ಸೇವಾಪ್ರತಿನಿಧಿ ಭಾಗ್ಯಮ್ಮ ಸೇರಿದಂತೆ ಗ್ರಾಮಸ್ಥರು ಹಾಗೂ ಸ್ವಸಹಾಯ ಸಂಘಗಳ ಸದಸ್ಯರು ಉಪಸ್ಥಿತರಿದ್ದರು.

ದೇವಸ್ಥಾನದ ಜೀರ್ಣೋದ್ಧಾರ ಕಾರ್ಯಕ್ಕೆ ನೆರವು ನೀಡಿರುವುದಕ್ಕೆ ಗ್ರಾಮಸ್ಥರು ಹಾಗೂ ದೇವಸ್ಥಾನ ಅಭಿವೃದ್ಧಿ ಸೇವಾ ಟ್ರಸ್ಟ್‌ನ ಪದಾಧಿಕಾರಿಗಳು ಯೋಜನೆಯ ಅಧಿಕಾರಿಗಳಿಗೆ ಕೃತಜ್ಞತೆ ಸಲ್ಲಿಸಿದರು.

### ಶ್ರೀ ಬಸವೇಶ್ವರ ಸ್ವಾಮಿ ದೇವಸ್ಥಾನ ವಿಗ್ರಹ ಮತ್ತು ಕಳಸ ಪ್ರತಿಷ್ಟಾಪನೆ ಕಾರ್ಯಕ್ರಮ

## ಮೇಕೆದಾಟು ಯೋಜನೆ ಶೀಘ್ರ ಅನುಷ್ಠಾನಗೊಳಿಸಿ: ನಂಜಾವಧೂತ ಶ್ರೀ

**ಶಿರಾ:** ರಾಜ್ಯದ ಮಹತ್ವಕಾಂಕ್ಷೆಯ ಮೇಕೆದಾಟು ನೀರಾವರಿ ಯೋಜನೆ ಶೀಘ್ರ ಅನುಷ್ಠಾನಗೊಳಿಸಿ, ಬೆಂಗಳೂರು ಸೇರಿದಂತೆ ರಾಜ್ಯದ ಹಲವಾರು ಜಿಲ್ಲೆಗಳ ತುಮಕೂರು ಜಿಲ್ಲೆ ಹಾಗೂ ಶಿರಾ ತಾಲೂಕಿನ ಕುಡಿಯುವ ನೀರಿನ ಸಮಸ್ಯೆಯನ್ನು ನಿವಾರಿಸುವಂತಹ ಇಚ್ಛಾಸಕ್ತಿ ರಾಜ್ಯ ಸರ್ಕಾರ ಹೊಂದಬೇಕು ಎಂದು ಸ್ಪಟಿಕಪುರಿ ಮಹಾಸಂಸ್ಥಾನ ಮಠ ಪೀಠಾಧ್ಯಕ್ಷರಾದ ಶ್ರೀ ನಂಜಾವಧೂತ ಸ್ವಾಮೀಜಿ ಹೇಳಿದರು.

ಶಿರಾ ತಾಲೂಕಿನ ಯಂಜಲಗೆರೆ ಗ್ರಾಮದಲ್ಲಿ ಸೋಮವಾರ ನಡೆದ ಶ್ರೀ ಬಸವೇಶ್ವರ ಸ್ವಾಮಿ ದೇವಸ್ಥಾನ ವಿಗ್ರಹ ಮತ್ತು ಕಳಸ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು.

ಫೀಡರ್ ಕೆನಾಲ್ ಗೆ ನಮ್ಮ ವಿರೋಧವಿಲ್ಲ ಆದರೆ ತುಮಕೂರು ಜಿಲ್ಲೆ 24 ಟಿಎಂಸಿ ನೀರು ಅಲೋಕಶನ್ ಆಗಿದ್ದು, ಈ ನೀರನ್ನು ಜಿಲ್ಲೆಗೆ ಸಮರ್ಪಕವಾಗಿ ಕೊಟ್ಟು ಹೆಚ್ಚುರಿ ನೀರನ್ನು ಬೇರೆ ಜಿಲ್ಲೆಗೆ ಹರಿಸುವಂತಹ ಕೆಲಸ ಮಾಡಲಿ. ಶಿರಾ ತಾಲೂಕಿನ ಮದಲೂರು ಕೆರೆಗೆ ಹೇಮಾವತಿ ನೀರು ಹರಿದ ಕಾರಣ ಆಂಧ್ರಪ್ರದೇಶದಲ್ಲಿ ಅಂತರ್ಜಲ ಹೆಚ್ಚಾಗಿದೆ, ಆದ್ದರಿಂದ ತಾಲೂಕಿನ ಅಂತರ್ಜಲ ಹೆಚ್ಚಬೇಕಾದರೆ, ಕುಡಿಯುವ ನೀರಿನ ಸಮಸ್ಯೆ ನೀಗಬೇಕೆಂದರೆ ಎಲ್ಲಾ ಕೆರೆಗಳಿಗೂ ನೀರು ಹರಿಸುವ ಕೆಲಸ ಮಾಡಬೇಕು. 371 ಜೆ ಕಲಂ ಪ್ರಕಾರ ಕಲ್ಯಾಣ ಕರ್ನಾಟಕದ ಯುವಕರಿಗೆ ಹೆಚ್ಚು ಉದ್ಯೋಗ ಸಿಗುತ್ತಿವೆ, ಆದರೆ ಮಧ್ಯ ಕರ್ನಾಟಕದ ಪ್ರತಿಭಾವಂತ ವಿದ್ಯಾರ್ಥಿಗಳು ಅವಕಾಶ ವಂಚಿತರಾಗುತ್ತಿದ್ದಾರೆ. ಆದಕಾರಣ ನಂಜುಂಡಪ್ಪ ವರದಿ ಅನುಷ್ಠಾನ ಮಾಡಿ ಹಿಂದುಳಿದ ತಾಲೂಕುಗಳ ಅಭಿವೃದ್ಧಿಗೆ ಹೆಚ್ಚು ಗಮನಹರಿಸಿ ತಾರತಮ್ಯ ನಿವಾರಿಸುವಂತಹ ಕೆಲಸ ಸರ್ಕಾರ ಮಾಡಬೇಕು ಎಂದರು.



ಕಳಸ ಪ್ರತಿಷ್ಠಾಪನ ಮಹೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದ ಮಾಜಿ ಶಾಸಕ ಡಾ.ಸಿ.ಎಂ. ರಾಜೇಶ್ ಗೌಡ ಭಾರತೀಯ ಸಂಸ್ಕೃತಿಯಲ್ಲಿ ಧಾರ್ಮಿಕ ದೇವತಾ ಕಾರ್ಯಗಳಿಗೆ ಅತ್ಯಂತ ಉನ್ನತವಾದ ಸ್ಥಾನವಿದೆ. ಅನಾದಿ ಕಾಲದಿಂದಲೂ ಮಾನವನು ತನ್ನ ದೈನಂದಿನ ಜೀವನದ ಭಾಗವಾಗಿ ದೇವರನ್ನು ಆರಾಧಿಸುತ್ತಾ ಬಂದಿದ್ದಾನೆ. ದೇವತಾ ಕಾರ್ಯಗಳು ಎಂದರೆ ಕೇವಲ ಆಚರಣೆಗಳಲ್ಲ, ಅವು ಮಾನವನ ಮನಸ್ಸನ್ನು ಶುದ್ಧೀಕರಿಸುವ ಮತ್ತು ಸಮಾಜವನ್ನು ಒಟ್ಟಾಗಿ ಜೋಡಿಸುವ ಪವಿತ್ರ ವಿಧಿವಿಧಾನಗಳಾಗಿವೆ,ಧಾರ್ಮಿಕ ದೇವತಾ ಕಾರ್ಯಗಳು ಮನುಷ್ಯನಲ್ಲಿ ಭಕ್ತಿ, ಶ್ರದ್ಧೆ ಮತ್ತು ಸಂಸ್ಕೃತಿಯನ್ನು ಬೆಳೆಸುತ್ತವೆ. ಇವುಗಳನ್ನು ಕೇವಲ ಮೂಢನಂಬಿಕೆಯಾಗಿ ನೋಡದೆ, ಅವುಗಳ ಹಿಂದಿರುವ ವೈಜ್ಞಾನಿಕ ಮತ್ತು ಸಾಮಾಜಿಕ ಮಹತ್ವವನ್ನು ಅರಿತು ಆಚರಿಸಬೇಕು. ಆಗ ಮಾತ್ರ ಸಮಾಜದಲ್ಲಿ ಶಾಂತಿ ಮತ್ತು ಸುಖ-ಸಮೃದ್ಧಿ ನೆಲೆಸಲು ಸಾಧ್ಯವಾಗುತ್ತದೆ. ಆದ್ದರಿಂದ ನಾವು ಎಲ್ಲರೂ ಒಗ್ಗಟ್ಟಾಗಿ ಇಂತಹ ಕಾರ್ಯದಲ್ಲಿ ಭಾಗವಹಿಸಬೇಕು ಅದೇ ರೀತಿ ರಾಜ್ಯದಲ್ಲಿ ಹಾಗೂ ಸಿರಾ ತಾಲೂಕಿನಲ್ಲಿ ಇನ್ನು ಮುಂದೆಯಾದರು ಶ್ರೀ ಬಸವೇಶ್ವರ ಸ್ವಾಮಿ ಆಶೀರ್ವಾದದಿಂದ ಉತ್ತಮ ಮಳೆಯಾಗಿ ಎಲ್ಲ ರೈತರ ಬದುಕು ಸುಂದರವಾಗಿರಲಿ ಎಂದು ದೇವರಲ್ಲಿ ಪ್ರಾರ್ಥನೆ ಸಲ್ಲಿಸಿದರು.

ಶಿರಾ ಕನಕ ಬ್ಯಾಂಕ್ ಅಧ್ಯಕ್ಷ, ಬಿಜೆಪಿ ಮುಖಂಡ ಬಿ.ಕೆ. ಮಂಜುನಾಥ್, ಶಿರಾ ಜೆಡಿಎಸ್ ನಾಯಕ ಆರ್. ಉಗ್ರೇಶ್, ತಾಲೂಕು ಜೆಡಿಎಸ್ ಅಧ್ಯಕ್ಷ ಸತ್ಯ ಪ್ರಕಾಶ್, ಕಾಡುಗೊಲ್ಲ ಅಭಿವೃದ್ಧಿ ನಿಗಮ ಮಾಜಿ ಅಧ್ಯಕ್ಷ ಚಂಗಾವರ ಮಾರಣ್ಣ, ಮುಖಂಡರಾದ ಜಯಪ್ರಕಾಶ್, ಮೂರ್ತಿ ಯಂಜಲಗೆರೆ, ರಾಕೇಶ್ ಬಾಬು, ತಿಪ್ಪೇಶ್ ಗೌಡ, ಬಾಲೆಗೌಡ, ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷೆ ಈ ರ ಸಿದ್ದಮ್ಮ, ವೈ.ಕೆ.ತಿಪ್ಪೇಸ್ವಾಮಿ, ಚಿಕ್ಕಸಿದ್ದಪ್ಪ, ಒಬಣ್ಣ, ಶಾಸಮಾರು ಶ್ರೀಧರ,ಮಧುಸೂದನ್, ಪ್ರೇಮಣ್ಣ, ಜೆ ನಾಗೇಗೌಡ, ಡಿ ನರಸಿಂಹಮೂರ್ತಿ, ಪುನೀತ್, ಕುಮಾರ್ .ವೈ.ಆರ್, ವೈ.ಟಿ. ಶಿವಕುಮಾರ್, ಶಿವಲಿಂಗಪ್ಪ, ಕೃಷ್ಣಯ್ಯ ವೈ .ಎಲ್, ಗಾ ಈರಣ್ಣ ,ಚಂದ್ರಧರ, ಸಚಿನ್, ಕಂಚೆಗೌಡ ಸೇರಿದಂತೆ ಯಂಜಲಗೆರೆ, ಕೆ.ಕೆ ಪಾಳ್ಯ, ಎಂ.ಕೆ ಪಾಳ್ಯ ಗ್ರಾಮಸ್ಥರು ಹಾಗೂ ಸಾವಿರಾರು ಭಕ್ತರು ಉಪಸ್ಥಿತರಿದ್ದರು.

### ತುಮಕೂರಿನಲ್ಲಿ 'ದಿ.ಚೆನ್ನುಡಿ' ಬೆಳ್ಳಿ ಸಂಚಿಕೆ ಹಾಗೂ 'ಸುಯೋಗಿನಿ' ಕೃತಿ ಲೋಕಾರ್ಪಣೆ

## 'ಮಹಿಳಾ ಸಬಲೀಕರಣಕ್ಕೆ ಸಾಹಿತ್ಯದ ಪ್ರೋತ್ಸಾಹ ಅತ್ಯಗತ್ಯ'

**ತುಮಕೂರು:** ಸಮಾಜದ ದೈನಂದಿನ ವಿದ್ಯಮಾನಗಳ ಸತ್ಯಾಸತ್ಯತೆಗಳ ಪರಾಮರ್ಶೆ ಮಾಧ್ಯಮಗಳಿಂದ ಮಾತ್ರ ಸಾಧ್ಯವಿದ್ದು, ಸ್ವಾತಂತ್ರ್ಯ ಪೂರ್ವದಿಂದಲೂ ಪತ್ರಿಕೆಗಳು ತಮ್ಮದೇ ಆದ ವಿಶಿಷ್ಟ ಅಸ್ತಿತ್ವವನ್ನು ಹೊಂದಿವೆ ಎಂದು ತುಮಕೂರಿನ ಉಪವಿಭಾಗಾಧಿಕಾರಿಗಳಾದ ನಾಹಿದಾ ಜಮ್ ಜಮ್ ಅಭಿಪ್ರಾಯಪಟ್ಟಿದ್ದಾರೆ.

ನಗರದಲ್ಲಿ ನಡೆದ 'ದಿ.ಚೆನ್ನುಡಿ' ಪತ್ರಿಕೆಯ ಬೆಳ್ಳಿ ಸಂಚಿಕೆ ಬಿಡುಗಡೆ ಹಾಗೂ 'ಸುಯೋಗಿನಿ' ಕೃತಿ ಲೋಕಾರ್ಪಣೆ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಾರ್ವಜನಿಕರು ಮತ್ತು ಯುವಜನರು ಪತ್ರಿಕೆಗಳನ್ನು ಓದುವ ಉತ್ತಮ ಅಭ್ಯಾಸವನ್ನು ರೂಢಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ಇದೇ ವೇಳೆ ಡಾ. ಸುಲೋಚನ ಜಿ.ಎಸ್. ಅವರ ಲೇಖನಗಳ ಸಂಗ್ರಹವಾದ 'ಸುಯೋಗಿನಿ' ಕೃತಿಯನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲೂ ಮುನ್ನಡೆ ಸಾಧಿಸಬೇಕು ಮತ್ತು ಮಹಿಳಾ ಸಬಲೀಕರಣದ ಚಿಂತನೆಗಳನ್ನು ಬಿಂಬಿಸುವ ಇಂತಹ ಮತ್ತಷ್ಟು ಕೃತಿಗಳು ಪ್ರಕಟಗೊಳ್ಳಬೇಕು ಎಂದು ಶುಭ ಹಾರೈಸಿದರು.



ಕಾರ್ಯಕ್ರಮದಲ್ಲಿ ಕೃತಿಯ ಲೇಖಕಿ ಡಾ. ಸುಲೋಚನ ಜಿ.ಎಸ್. ಮಾತನಾಡಿ, "ತುಮಕೂರಿನಲ್ಲಿ ಸರ್ಕಾರದ ಅತ್ಯುನ್ನತ ಹುದ್ದೆಗಳಾದ ಜಿಲ್ಲಾಧಿಕಾರಿ, ಉಪವಿಭಾಗಾಧಿಕಾರಿ, ಮಹಾನಗರ ಪಾಲಿಕೆ ಆಯುಕ್ತರು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಲ್ಲರೂ ಮಹಿಳೆಯರೇ ಆಗಿರುವುದು ನನ್ನ ಈ ಲೇಖನಗಳ ರಚನೆಗೆ ಪ್ರಮುಖ ಪ್ರೇರಣೆಯಾಗಿದೆ. ಈ ಕೃತಿಯು ಮಹಿಳೆಯರ ಮನೆ-ಮನೆಗಳ ಕಥೆಗಳು ಹಾಗೂ ಸಶಕ್ತೀಕರಣದ ಬರಹಗಳನ್ನು ಒಳಗೊಂಡಿದೆ" ಎಂದರು.

ತುಮಕೂರು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಎಲ್. ಯೋಗೇಶ್ ಮಾತನಾಡಿ, ಗೃಹಿಣಿಯರಿಂದ ಹಿಡಿದು ಸಮಾಜದ ವಿವಿಧ ವಲಯಗಳಲ್ಲಿ ವೃತ್ತಿ ನಿರ್ವಹಿಸುತ್ತಿರುವ ಪ್ರತಿಯೊಬ್ಬ ಹೆಣ್ಣುಮಮಗಳೂ ಈ ಕೃತಿಯನ್ನು ಓದುವ ಮೂಲಕ ಸ್ಫೂರ್ತಿ ಪಡೆಯಬಹುದು ಎಂದರು.

ಕಾರ್ಯಕ್ರಮದಲ್ಲಿ ಚಾಲುಕ್ಯ ಆಸ್ಪತ್ರೆಯ ಮಕ್ಕಳ ತಜ್ಞ ಡಾ. ನಾಗಭೂಷಣ್, ಕನಕದಾಸ ಪಿಯು ಕಾಲೇಜು ಪ್ರಾಂಶುಪಾಲ ಡಾ. ಪರಮೇಶ್ವರ್, ಸ್ನೇಹ ಮನೋವಿಕಾಸ ಕೇಂದ್ರದ ಡಾ. ಲೋಕೇಶ್ ಬಾಬು, ಪ್ರಕಾಶಕ ಚನ್ನಬಸವ ಎಂ, ನಿವೃತ್ತ ಪ್ರಾಚಾರ್ಯ ಪ್ರೊ. ಕೆ. ಚಂದ್ರಣ್ಣ, ಪತ್ರಕರ್ತ ಯೋಗೀಶ್ ಟಿ., ರಾಜ್ಯ ಪ್ರಶಸ್ತಿ ಪುರಸ್ಕೃತ ಫೋಟೋ ಜರ್ನಲಿಸ್ಟ್ ಶಾಂತರಾಜು ಸೇರಿದಂತೆ ಅನೇಕ ಗಣ್ಯರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಸಮಾರಂಭದ ಅಂಗವಾಗಿ ಯಕ್ಷದೀವಿಗೆ ಬಳಗದಿಂದ 'ಏಕಾದಶಿ ಮಹಾತ್ಮೆ' ಬಯಲಾಟ ಯಕ್ಷಗಾನ ಪ್ರದರ್ಶನ ಹಾಗೂ ಶ್ಯಾಡೋಸ್ ರಾಜ್ ಡ್ಯಾನ್ಸ್ ಅಕಾಡೆಮಿಯಿಂದ ಆಕರ್ಷಕ ನೃತ್ಯ ಪ್ರದರ್ಶನ ಜರುಗಿತು.

## ಬಸ್ ತಡೆದಿದ್ದಕ್ಕೆ ವಿದ್ಯಾರ್ಥಿಗಳು-ಪೊಲೀಸರ ನಡುವೆ ವಾಗ್ವಾದ




ತುಮಕೂರು: ಸಮರ್ಪಕ ಬಸ್ ವ್ಯವಸ್ಥೆ ಕಲ್ಪಿಸುವಂತೆ ಆಗ್ರಹಿಸಿ ವಿದ್ಯಾರ್ಥಿಗಳು ಎಬಿವಿಪಿ ನೇತೃತ್ವದಲ್ಲಿ ತುಮಕೂರು ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಪ್ರತಿಭಟನೆ ನಡೆಸಿದರು. ಕೊರಟಗೆರೆ, ಪಾವಗಡ, ಮಧುಗಿರಿ ಹಾಗೂ ಚಿಕ್ಕನಾಯಕನಹಳ್ಳಿ ಭಾಗಗಳಿಗೆ ಅಗತ್ಯಕ್ಕೆ ತಕ್ಕಂತೆ ಬಸ್‌ಗಳನ್ನು ಹೆಚ್ಚಿಸುವಂತೆ ವಿದ್ಯಾರ್ಥಿಗಳು ಒತ್ತಾಯಿಸಿದರು....

ಪ್ರತಿಭಟನೆ ವೇಳೆ ವಿದ್ಯಾರ್ಥಿಗಳು ಕೆಎಸ್‌ಆರ್‌ಟಿಸಿ ಬಸ್‌ಗಳನ್ನು ತಡೆದು ಆಕ್ರೋಶ ವ್ಯಕ್ತಪಡಿಸಿದರು. ಬಸ್ ತಡೆದಿದ್ದಕ್ಕೆ ಪೊಲೀಸರು ಹಾಗೂ ವಿದ್ಯಾರ್ಥಿಗಳ ನಡುವೆ ವಾಗ್ವಾದ ನಡೆಯಿತು. ಉಚಿತ ಬಸ್ ಪಾಸ್ ನೀಡಲಾಗಿದೆ, ಆದರೆ ವಿದ್ಯಾರ್ಥಿಗಳು ಕಾಲೇಜುಗಳಿಗೆ ತೆರಳಲು ಸಮರ್ಪಕ ಬಸ್ ವ್ಯವಸ್ಥೆಯೇ ಇಲ್ಲ ಎಂದು ವಿದ್ಯಾರ್ಥಿಗಳು ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ಕಾಂಗ್ರೆಸ್ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ಹೊರಹಾಕಿದರು.

ಎಬಿವಿಪಿ ತುಮಕೂರು ವಿಭಾಗ ಸಂಚಾಲಕ ಹೆಚ್. ಆರ್. ಗುರುಪ್ರಸಾದ್ ಮಾತನಾಡಿ, ಸಮರ್ಪಕ ಬಸ್ ವ್ಯವಸ್ಥೆ ಕಲ್ಪಿಸುವಂತೆ ಹಲವು ಬಾರಿ ಮನವಿ ಮಾಡಿದ್ದರೂ ಯಾವುದೇ ಪ್ರಯೋಜನವಾಗಿಲ್ಲ. ಉಚಿತ ಬಸ್ ಪಾಸ್ ನೀಡಿದರೂ ಬಸ್‌ಗಳ ಕೊರತೆಯಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದೆ.

ಪ್ರತಿಭಟನಾನಿರತ ವಿದ್ಯಾರ್ಥಿಗಳ ಮೇಲೆ ಪೊಲೀಸರು ದೌರ್ಜನ್ಯ ನಡೆಸಿರುವುದನ್ನು ಖಂಡಿಸುತ್ತೇವೆ ಎಂದು ಆಕ್ರೋಶ ವ್ಯಕ್ತಪಡಿಸಿದರು..

ವಿದ್ಯಾರ್ಥಿಗಳ ಪ್ರತಿಭಟನೆ ತೀವ್ರಗೊಳ್ಳುತ್ತಿದ್ದಂತೆ ಸ್ಥಳಕ್ಕೆ ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿ ಆಗಮಿಸಿ ವಿದ್ಯಾರ್ಥಿಗಳ ಮನವಿ ಸ್ವೀಕರಿಸಿದರು. ವಿದ್ಯಾರ್ಥಿಗಳ ಸಮಸ್ಯೆಗಳಿಗೆ ಸ್ಪಂದಿಸುವ ಭರವಸೆ ನೀಡಿದ ಬಳಿಕ ಪ್ರತಿಭಟನೆಯನ್ನು ಕೈ ಬಿಡಲಾಯಿತು ಪ್ರತಿಭಟನೆಯಲ್ಲಿ ನೂರಾರು ವಿದ್ಯಾರ್ಥಿಗಳು ಭಾಗಿಯಾಗಿದ್ದರು

# 'ವಾಜಪೇಯಿ ವಿರುದ್ಧವೂ ಕೇಸ್ ದಾಖಲಿಸಿ': ವಂದೇ ಮಾತರಂ ವಿವಾದ ಕುರಿತು ಖರ್ಗೆ ತಿರುಗೇಟು

**ನವದೆಹಲಿ:** ಪಕ್ಷದ ಪ್ರಧಾನ ಕಚೇರಿಯಲ್ಲಿ ಮತ್ತು ನಂತರ ಗೋವಾದಲ್ಲಿ ನಡೆದ ಪಕ್ಷದ ಕಾರ್ಯಕ್ರಮದಲ್ಲಿ ವಂದೇ ಮಾತರಂ ಪಠಣದ ಕುರಿತು ಎದ್ದಿರುವ ವಿವಾದಗಳ ಮಧ್ಯೆ, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಂಗಳವಾರ ಯಾವ ಆಧಾರದ ಮೇಲೆ ಪಕ್ಷದ ನಾಯಕರಾದ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ವಿರುದ್ಧ ದೂರು ದಾಖಲಾಗಿದೆ ಎಂದು ಪ್ರಶ್ನಿಸಿದ್ದಾರೆ.

ರಾಷ್ಟ್ರಗೀತೆಯನ್ನು ಅದರ ಹಿಂದಿನ ಆವೃತ್ತಿಯಲ್ಲಿ ಹಾಡುವುದು ಅಪರಾಧವಾಗಿದ್ದರೆ, ಮಹಾತ್ಮ ಗಾಂಧಿ, ಮಾಜಿ ಪ್ರಧಾನಿಗಳಾದ ಜವಾಹರಲಾಲ್ ನೆಹರು ಮತ್ತು ಅಟಲ್ ಬಿಹಾರಿ ವಾಜಪೇಯಿ ವಿರುದ್ಧವೂ ದೂರು ದಾಖಲಿಸಬೇಕು ಎಂದು ಅವರು ಹೇಳಿದರು.

ಶನಿವಾರ ಪಕ್ಷದ ಪ್ರಧಾನ ಕಚೇರಿಯಲ್ಲಿ ನಡೆದ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ವಂದೇ ಮಾತರಂ ಗೀತೆಯನ್ನು ಅರ್ಧಕ್ಕೆ ನಿಲ್ಲಿಸುವಂತೆ ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಸೂಚಿಸಿದ್ದಾರೆ ಎಂದು ಬಿಜೆಪಿ ವಾಗ್ದಾಳಿ ನಡೆಸಿದ್ದು, ಅವರ ವಿರುದ್ಧ ದೂರು ದಾಖಲಾದ ನಂತರ ಖರ್ಗೆ ಈ ಹೇಳಿಕೆ ನೀಡಿದ್ದಾರೆ.



ಸ್ವಾತಂತ್ರ್ಯೋತ್ಸವದ ಸಂದರ್ಭದಲ್ಲಿ ಖರ್ಗೆ ಪಕ್ಷದ ಪ್ರಧಾನ ಕಚೇರಿಯಲ್ಲಿ ತ್ರಿವರ್ಣ ಧ್ವಜ ಹಾರಿಸಿ, ನಂತರ ವಂದೇ ಮಾತರಂ ಹಾಡಿದರು.

ಗಾಯಕರು ಪೂರ್ಣ ಆವೃತ್ತಿಯೊಂದಿಗೆ ಮುಂದುವರಿಯುತ್ತಿರುವುದನ್ನು ಮೊದಲು ಗಮನಿಸಿದವರು ಸೋನಿಯಾ ಗಾಂಧಿ ಎಂದು ವರದಿಯಾಗಿದೆ. ಅವರು ಖರ್ಗೆ ಕಡೆಗೆ ಸನ್ನೆ ಮಾಡಿ ನಂತರ ಗಾಯಕರೊಂದಿಗೆ ಸಂವಹನ ನಡೆಸಿ ನಿಲ್ಲಿಸುವಂತೆ ಸೂಚಿಸಿದರು ಎನ್ನಲಾಗಿದೆ. ಆದರೆ, ಬಹಳ ಹೊತ್ತಿನಿಂದ ನಿಂತಿದ್ದ ಖರ್ಗೆಗೆ ಕುರ್ಚಿ ವ್ಯವಸ್ಥೆ ಮಾಡುವಂತೆ ಸೋನಿಯಾ ಗಾಂಧಿ ಸನ್ನೆ ಮಾಡಿದ್ದರು ಎಂದು ಕಾಂಗ್ರೆಸ್ ಹೇಳಿದೆ.

'ಇದು ಸುಳ್ಳುಗಳ ಕಂತೆ. ಸೋನಿಯಾ ಗಾಂಧಿ ಹಾಗೆ ಮಾಡಿಲ್ಲ. ನಮ್ಮ ಕಾಂಗ್ರೆಸ್ ಅಧ್ಯಕ್ಷರು ಆರೋಗ್ಯವಾಗಿಲ್ಲ; ಅವರು ಹೆಚ್ಚು ಹೊತ್ತು ನಿಲ್ಲಲು ಸಾಧ್ಯವಿಲ್ಲ... ಆದ್ದರಿಂದ ಸೋನಿಯಾ ಗಾಂಧಿ ಅವರು ಖುರ್ಚಿ ವ್ಯವಸ್ಥೆ ಮಾಡುವಂತೆ ಸನ್ನೆ ಮಾಡಿದರು. ವಂದೇ ಮಾತರಂ ಹಾಡುವುದನ್ನು ನಿಲ್ಲಿಸುವಂತೆ ಅಲ್ಲ' ಎಂದು ಕಾಂಗ್ರೆಸ್ ನಾಯಕ ಉದಿತ್ ರಾಜ್ ಹೇಳಿದ್ದಾರೆ. ಕಾಂಗ್ರೆಸ್ ಪ್ರಧಾನ ಕಚೇರಿಯಲ್ಲಿ ವಂದೇ ಮಾತರಂ ಗೀತೆಗೆ ಅಡ್ಡಿಪಡಿಸಲು ಯತ್ನಿಸಿದ ಆರೋಪದ ಮೇಲೆ ಎಫ್ಐಆರ್ ದಾಖಲಿಸುವಂತೆ ಕೋರಿ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ವಿರುದ್ಧ ಸೋಮವಾರ ದೆಹಲಿ ಪೊಲೀಸರಿಗೆ ದೂರು ದಾಖಲಿಸಲಾಗಿದೆ.

ಸುದ್ದಿಗಾರರೊಂದಿಗೆ ಮಾತನಾಡಿದ ಖರ್ಗೆ, 'ಸರಿ, ನೋಡಿ, ಅವರು ಏನೆಂದು ದೂರು ನೀಡಿದ್ದಾರೆ? ನಾವು ಮಹಾತ್ಮ ಗಾಂಧಿ ಹಾಡಿದ ವಂದೇ ಮಾತರಂ ಅನ್ನು ಹಾಡಿದ್ದೇವೆ. ಜವಾಹರಲಾಲ್ ನೆಹರು ಹಾಡಿದ್ದನ್ನು ನಾವು ಹಾಡಿದ್ದೇವೆ. ಕಳೆದ 18 ವರ್ಷಗಳಿಂದ, ವಾಜಪೇಯಿ ನೇತೃತ್ವದ ಅವರ ಕೇಂದ್ರ ಸರ್ಕಾರ ಹಾಡಿದ್ದನ್ನು ಒಳಗೊಂಡಂತೆ, ಅವರು ಹಾಡಿದ್ದನ್ನು ನಾವು ಹಾಡಿದ್ದೇವೆ. ಮತ್ತು ಇಷ್ಟು ವರ್ಷಗಳಿಂದ ಹಾಡುತ್ತಿರುವ ಅದೇ ವಂದೇ ಮಾತರಂ ಗೀತೆಯನ್ನೇ ಅವರು (ಪ್ರಧಾನಿ ನರೇಂದ್ರ ಮೋದಿ) 12 ವರ್ಷಗಳ ಕಾಲ, ಮುಖ್ಯಮಂತ್ರಿಯಾಗಿ ಹಾಡಿದ್ದಾರೆ' ಎಂದು ಹೇಳಿದರು.

'ಇದು ಅಪರಾಧವಾಗಿದ್ದರೆ, ಅವರು 18 ವರ್ಷಗಳಿಂದ ಈ ಅಪರಾಧವನ್ನು ಮಾಡುತ್ತಿದ್ದಾರೆ. ಇದು ಅಪರಾಧವಾಗಿದ್ದರೆ, ಮಹಾತ್ಮ ಗಾಂಧಿಯವರ ವಿರುದ್ಧ ಪ್ರಕರಣ ದಾಖಲಿಸಿ. ಇದು ಅಪರಾಧವಾಗಿದ್ದರೆ, ನೆಹರೂ ವಿರುದ್ಧವೂ ಪ್ರಕರಣ ದಾಖಲಿಸಿ' ಎಂದು ಅವರು ಹೇಳಿದರು.

ಅನೇಕ ವಿಮರ್ಶಕರು ಹುಟ್ಟುವ ಮೊದಲೇ ಕಾಂಗ್ರೆಸ್ ಸದ್ಯದ ರಾಷ್ಟ್ರೀಯ ಗೀತೆಗಳ ಕುರಿತು ನಿರ್ಣಯವನ್ನು ಅಂಗೀಕರಿಸಿತ್ತು ಎಂದು ಖರ್ಗೆ ಹೇಳಿದರು.

# ಉಪ ಮುಖ್ಯಮಂತ್ರಿಗಳಿಂದ ಚಿತ್ರಕಲಾ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ

**ತುಮಕೂರು:** ಉಪ ಮುಖ್ಯಮಂತ್ರಿ ಡಾ: ಜಿ. ಪರಮೇಶ್ವರ ಅವರು ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಆಗಸ್ಟ್ 15ರಂದು ಜರುಗಿದ 80ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಚಿತ್ರಕಲಾ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಿದರು.

ಅಂತರ್ಜಲ ನಿರ್ದೇಶನಾಲಯ ಹಾಗೂ ಜಿಲ್ಲಾ ಅಂತರ್ಜಲ ಕಚೇರಿ, ಶಾಲಾ ಶಿಕ್ಷಣ ಇಲಾಖೆಗಳ ಸಹಯೋಗದಲ್ಲಿ ಅಂತರ್ಜಲ ಸಂರಕ್ಷಣೆ, ನೀರಿನ ಮಿತಬಳಕೆ, ಅಂತರ್ಜಲ ಮರುಪೂರಣ ಕುರಿತು ಸರ್ಕಾರಿ/ಅನುದಾನಿತ/ಖಾಸಗಿ ಶಾಲೆಗಳ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಶಾಲಾ/ತಾಲೂಕು/ಜಿಲ್ಲಾ ಮಟ್ಟದ ಚಿತ್ರಕಲಾ




ಸ್ಪರ್ಧೆಯನ್ನು ಆಯೋಜಿಸಲಾಗಿತ್ತು.

ಜಿಲ್ಲಾ ಮಟ್ಟದಲ್ಲಿ ವಿಜೇತರಾದ ಕೊರಟಗೆರೆ ತಾಲೂಕು ಬುಕ್ಕಾಪಟ್ಟಣ ಸರ್ಕಾರಿ ಪ್ರೌಢಶಾಲೆಯ ಪಿ. ಅವಿನಾಶ್, ತುಮಕೂರು ತಾಲೂಕು ತಿಮ್ಮಸಂದ್ರದ ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಯ ಟಿ.ಬಿ. ದೀಪಕಾ ಹಾಗೂ ಚಿಕ್ಕನಾಯಕನಹಳ್ಳಿ ತಾಲೂಕು ಹುಳಿಯಾರಿನ ಸರ್ಕಾರಿ ಉರ್ದು ಪ್ರೌಢಶಾಲೆಯ ಗುಲ್ನಾಜ್ ಬಾನು ಅವರಿಗೆ ಕ್ರಮವಾಗಿ ಪ್ರಥಮ(10,000 ರೂ.), ದ್ವಿತೀಯ(7,500 ರೂ.), ಹಾಗೂ ತೃತೀಯ(5,000 ರೂ.) ಬಹುಮಾನವನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ. ಮಹೇಶ್, ಬಿಎಂಟಿಸಿ ಉಪಾಧ್ಯಕ್ಷ ನಿಕೇತ್ ರಾಜ್ ಎಂ., ಶಾಸಕರಾದ ಜಿ.ಬಿ. ಜ್ಯೋತಿಗಣೇಶ್ ಹಾಗು ಬಿ. ಸುರೇಶ್ ಗೌಡ, ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಜಿಲ್ಲಾ ಅಂತರ್ಜಲ ಕಚೇರಿಯ ಹಿರಿಯ ಭೂ ವಿಜ್ಞಾನಿ ಕೆ.ಎಸ್. ನಾಗವೇಣಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



ಹತ್ತನೇ ತರಗತಿಯ ಫಲಿತಾಂಶದಲ್ಲಿ ಅತಿಹೆಚ್ಚು ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳಿಗೆ ಮಧುಗಿರಿ ತಾಲ್ಲೂಕಿನ ಬಡವನಹಳ್ಳಿಯ ಶ್ರೀ ಲಕ್ಷ್ಮಿ ರಂಗನಾಥ ಪತ್ತಿನ ಸಹಕಾರ ಸಂಘದ ವತಿಯಿಂದ ಪಿ.ಎಂ. ಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯ ಆವರಣದಲ್ಲಿ ಆಯೋಜಿಸಿದ್ದ 80ನೇ ಸ್ವತಂತ್ರ ದಿನಾಚರಣೆ ಅಂಗವಾಗಿ ಸನ್ಮಾನ ಮಾಡಿ ಗೌರವಿಸಲಾಯಿತು. ಅಧ್ಯಕ್ಷ ಶಿವಣ್ಣ ಆರ್.ಸಿ. ಭೀಮ ರಾಜು. ಶಿವರಾಜು. ನರಸಿಂಹಮೂರ್ತಿ, ಆಶಾ, ಪುನೀತ್ ಬಿ., ಮೋಹನ್ ಇತರರಿದ್ದರು.

# ವಿದ್ಯಾರ್ಥಿನಿಯರು ಶಿಕ್ಷಣದ ಅವಕಾಶ ಸದುಪಯೋಗಪಡಿಸಿಕೊಳ್ಳಿ: ಡಾ. ಟಿ.ಬಿ. ಜಯಚಂದ್ರ



**ಶಿರಾ:** ನಗರದ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯಕ್ಕೆ ಸ್ವಾತಂತ್ರ್ಯ ದಿನಾಚರಣೆದಂದು ಶಿರಾ ನಗರಸಭೆ ವತಿಯಿಂದ ಸುಮಾರು ?7 ಲಕ್ಷ ವೆಚ್ಚದಲ್ಲಿ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ ಎಂದು ದೆಹಲಿ ವಿಶೇಷ ಪ್ರತಿನಿಧಿ ಹಾಗೂ ಶಿರಾ ಕ್ಷೇತ್ರದ ಶಾಸಕ ಡಾ. ಟಿ.ಬಿ. ಜಯಚಂದ್ರ ತಿಳಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿನಿಯರಿಗೆ ಉತ್ತಮ ವಾತಾವರಣದಲ್ಲಿ ಶಿಕ್ಷಣ ಪಡೆಯಲು ಅಗತ್ಯವಿರುವ ಬೆಡ್, ಬೆಡ್‌ಶೀಟ್, ದಿಂಬು ಸೇರಿದಂತೆ ಇನ್ನಷ್ಟು ಸೌಲಭ್ಯಗಳನ್ನು ಮುಂದಿನ ದಿನಗಳಲ್ಲಿ ಕಲ್ಪಿಸಿಕೊಡಲಾಗುವುದು ಎಂದರು.

ಹೆಣ್ಣುಮಕ್ಕಳಿಗೆ ಶಿಕ್ಷಣ ಹಾಗೂ ವಸತಿ ಸೌಲಭ್ಯ ದೊರೆಯಬೇಕು ಎಂಬ ಉದ್ದೇಶದಿಂದ ಸರ್ಕಾರ ವಸತಿ ನಿಲಯಗಳನ್ನು ನಿರ್ಮಿಸಿದೆ. ಇಂದು ಶಿರಾ ನಗರದಲ್ಲಿ ಎಲ್ಲ ವರ್ಗದ ಮಕ್ಕಳಿಗೂ ಶಿಕ್ಷಣ ಪಡೆಯಲು ಉತ್ತಮ ಅವಕಾಶಗಳಿವೆ. ವಿದ್ಯಾರ್ಥಿಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಶ್ರದ್ಧೆಯಿಂದ ವಿದ್ಯಾಭ್ಯಾಸ ಮಾಡಬೇಕು ಎಂದು ಸಲಹೆ ನೀಡಿದರು.

ಬಡತನವನ್ನು ದಡ್ಡತನ ಎಂದು ಭಾವಿಸಬಾರದು. ಬಡತನವು ನಮ್ಮನ್ನು ಮಾನಸಿಕವಾಗಿ ಕುಗ್ಗಿಸುವಂತಾಗಬಾರದು. ಕಷ್ಟಗಳನ್ನು ಮೆಟ್ಟಿನಿಂತು ಉತ್ತಮ ಶಿಕ್ಷಣ ಪಡೆಯುವ ಮೂಲಕ ಜೀವನದಲ್ಲಿ ಸಾಧನೆ ಮಾಡಬೇಕು ಎಂದು ವಿದ್ಯಾರ್ಥಿನಿಯರಿಗೆ ಕಿವಿಮಾತು ಹೇಳಿದರು. ಶಿರಾ ತಾಲೂಕಿನಲ್ಲಿ ಮುಂದಿನ ದಿನಗಳಲ್ಲಿ ಕೈಗಾರಿಕೆಗಳು ದೊಡ್ಡ ಪ್ರಮಾಣದಲ್ಲಿ ಆರಂಭವಾಗಲಿದ್ದು, ಇದರಿಂದ ಸ್ಥಳೀಯರಿಗೆ ಉದ್ಯೋಗಾವಕಾಶಗಳು ದೊರೆಯಲಿವೆ. ಶಿರಾವನ್ನು ಸುಸಜ್ಜಿತ ಹಾಗೂ ಅಭಿವೃದ್ಧಿ ಹೊಂದಿದ ನಗರವನ್ನಾಗಿ ರೂಪಿಸುವ ಜವಾಬ್ದಾರಿಯನ್ನು ಹೊತ್ತುಕೊಂಡು ಕೆಲಸ ಮಾಡುತ್ತಿದ್ದೇನೆ. ಇದಕ್ಕೆ ಅಧಿಕಾರಿಗಳು ಹಾಗೂ ವಿವಿಧ ಸಂಘ-ಸಂಸ್ಥೆಗಳು ಸಹಕಾರ ನೀಡುತ್ತಿದ್ದು, ಇದರ ಪ್ರಯೋಜನ ಗ್ರಾಮೀಣ ಪ್ರದೇಶದಿಂದ ಬಂದಿರುವ ವಿದ್ಯಾರ್ಥಿನಿಯರಿಗೂ ದೊರೆಯಬೇಕು ಎಂದರು. ವಿದ್ಯಾರ್ಥಿಗಳು ಉತ್ತಮ ಅಂಕಗಳೊಂದಿಗೆ ಉತ್ತೀರ್ಣರಾಗುವ ಮೂಲಕ ಮುಂದಿನ ಶಿಕ್ಷಣ ಹಾಗೂ ಉದ್ಯೋಗಾವಕಾಶಗಳನ್ನು ಪಡೆದುಕೊಳ್ಳಬೇಕು. ಶೈಕ್ಷಣಿಕ ಸಾಧನೆಯ ಮೂಲಕವೇ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯ ಎಂದು ಡಾ. ಜಯಚಂದ್ರ ಹೇಳಿದರು.

ಕಾರ್ಯಕ್ರಮದಲ್ಲಿ ಕಾರ್ಯನಿರ್ವಹಣಾಧಿಕಾರಿ ಹರೀಶ್, ಶಿರಾ ನಗರಸಭೆ ಆಯುಕ್ತ ಕೆ. ರುದ್ರೇಶ್, ನಗರಸಭೆ ಅಧ್ಯಕ್ಷ ಜಿಷನ್ ಮಹಮ್ಮದ್, ತಾಲೂಕು ಕಲ್ಯಾಣಾಧಿಕಾರಿ ಕುಮುದಾ ಸೇರಿದಂತೆ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಆ.25ರಂದು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ: ಎಚ್.ಎನ್. ಕಲಾವತಮ್ಮ



**ಶಿರಾ:** ರಾಜ್ಯ ಸರ್ಕಾರ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತರ ಮತ್ತು ಸಹಾಯಕಿಯರ ಫೆಡರೇಷನ್‌ನ ಶಿರಾ ತಾಲೂಕು ಅಧ್ಯಕ್ಷೆ ಎಚ್.ಎನ್. ಕಲಾವತಮ್ಮ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ಆರನೇ ಗ್ಯಾರಂಟಿಯನ್ನು ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಗೂ ಜಾರಿಗೊಳಿಸಬೇಕು. ಕನಿಷ್ಠ ವೇತನ ನಿಗದಿಪಡಿಸಬೇಕು. ಅಂಗನವಾಡಿ ಕೇಂದ್ರಗಳ ಕಾರ್ಯಗಳನ್ನು ಹೊರತುಪಡಿಸಿ ಬೇರೆ ಇಲಾಖೆಗಳ ಕೆಲಸಗಳಿಗೆ ಕಾರ್ಯಕರ್ತೆಯರನ್ನು ನಿಯೋಜಿಸುವುದನ್ನು ನಿಲ್ಲಿಸಬೇಕು ಎಂದು ಒತ್ತಾಯಿಸಿದರು.

ಬಿಎಲ್‌ಒ ಸೇರಿದಂತೆ ಇತರೆ ಕೆಲಸಗಳಿಂದ ಅಂಗನವಾಡಿ ಕಾರ್ಯಕರ್ತೆಯರನ್ನು ಕೈಬಿಡಬೇಕು. ಎಸ್‌ಐಆರ್ ಕೆಲಸ ನಿರ್ವಹಿಸುವ ಸಂದರ್ಭದಲ್ಲಿ ಎದುರಾಗುವ ಸಮಸ್ಯೆಗಳಿಗೆ ಕಾರ್ಯಕರ್ತೆಯರನ್ನು ನೇರ ಹೊಣೆಗಾರರನ್ನಾಗಿ ಮಾಡಬಾರದು. ಎಸ್‌ಐಆರ್ ಕರ್ತವ್ಯದಲ್ಲಿರುವಾಗ ಅನಾರೋಗ್ಯಕ್ಕೆ ಒಳಗಾದರೆ ಆಸ್ಪತ್ರೆ ವೆಚ್ಚವನ್ನು ಸರ್ಕಾರವೇ ಭರಿಸಬೇಕು ಎಂದು ಒತ್ತಾಯಿಸಿದರು.

ಜಾತಿ ಪ್ರಮಾಣಪತ್ರ, ಗೃಹಲಕ್ಷ್ಮಿ ಸೇರಿದಂತೆ ಅಂಗನವಾಡಿ ಇಲಾಖೆಗೆ ಸಂಬಂಧಿಸದ ಕೆಲಸಗಳನ್ನು ಕಾರ್ಯಕರ್ತೆಯರಿಂದ ಮಾಡಿಸಬಾರದು. 2011ರಿಂದ ನಿವೃತ್ತಿಯಾಗಿರುವ ಕಾರ್ಯಕರ್ತೆಯರ ಹುದ್ದೆಗಳಿಗೆ ಸಂಬಂಧಿಸಿದಂತೆ ಹೈಕೋರ್ಟ್ ಆದೇಶವಿದ್ದರೂ ಸಹಾಯಕರಿಗೆ ಸಿಗಬೇಕಾದ ಸೌಲಭ್ಯಗಳನ್ನು ಸರ್ಕಾರ ಈವರೆಗೆ ಸಮರ್ಪಕವಾಗಿ ನೀಡಿಲ್ಲ. ಈ ಬಗ್ಗೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದರು.

ಅಂಗನವಾಡಿ ಕಾರ್ಯಕರ್ತೆಯರ ಟಿಎ, ಡಿಎ ಹಾಗೂ ಪ್ರಭಾರ ಭತ್ಯೆಯನ್ನು ಹೆಚ್ಚಿಸಬೇಕು. ಇತ್ತೀಚಿನ ದಿನಗಳಲ್ಲಿ ಮೊಟ್ಟೆಯ ದರ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಮಕ್ಕಳಿಗೆ ನೀಡುವ ಮೊಟ್ಟೆಯ ದರವನ್ನು ಪರಿಷ್ಕರಿಸಿ ಹೆಚ್ಚಿಸಬೇಕು. ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗಳನ್ನು ಶೀಘ್ರ ಭರ್ತಿ ಮಾಡಬೇಕು ಎಂದು ಆಗ್ರಹಿಸಿದರು.

ಆ.25ರಂದು ಪ್ರತಿಭಟನೆ: ಈ ಎಲ್ಲ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಆಗಸ್ಟ್ 25, 2026ರಂದು ತುಮಕೂರು ಜಿಲ್ಲಾಧಿಕಾರಿ ಕಚೇರಿ ಎದುರು ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಂದ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್.ಎನ್. ಕಲಾವತಮ್ಮ ತಿಳಿಸಿದರು.

ಈ ಸಂಧರ್ಭದಲ್ಲಿ ಉಪಸ್ಥಿತರಿದ್ದ ಪ್ರಧಾನ ಕಾರ್ಯದರ್ಶಿ ಮೀನಾಕ್ಷಿ ಖಜಾಂಚಿ, ವನಜಾಕ್ಷಿ, ಸುಮನ, ಎನ್ ಕೆಂಪಮ್ಮ, ಡಿ ಹೆಚ್ ಈರಮ್ಮ, ಎನ್ ನಾಗವೇಣಿ, ಟಿ ಸಿ ಸೌಭಾಗ್ಯ ,ಕೆ ಜಿ ಭಾಗ್ಯಮ್ಮ ,ರಂಗಮ್ಮ ಟಿ, ಜಿ ಸೌಮ್ಯ, ಶಶಿಕಲಾ, ಟಿ ಆರ್ ಶೈಲಜಾ, ಈ ಲತಾ,ಎಂ ಅನುಸುಯಮ್ಮ , ತಾಲೂಕು ಬೂತ್ ಮಟ್ಟದ ಪದಾಧಿಕಾರಿಗಳು ಇದ್ದರು.

# 'ರೈತರ ನೆರವಿಗೆ ಸರ್ಕಾರ ಧಾವಿಸಲಿ'

**ಶಿರಾ:** ಹೈನುಗಾರಿಕೆ ರೈತರಿಗೆ ವರದಾನವಾಗಿದ್ದು, ರಾಸುಗಳಿಗೆ ಗುಣಮಟ್ಟದ ಮೇವು ನೀಡಿ, ಗುಣಮಟ್ಟದ ಹಾಲನ್ನು ಡೈರಿಗಳಿಗೆ ಹಾಕುವ ಮೂಲಕ ಉತ್ಪಾದಕರು ಆರ್ಥಿಕವಾಗಿ ಸಬಲರಾಗಬೇಕು. ರಾಜ್ಯದಲ್ಲಿ ಅನ್ನದಾತ ಸಂಕಷ್ಟದಲ್ಲಿದ್ದು ಸರ್ಕಾರ ರೈತರ ನೆರವಿಗೆ ಧಾವಿಸುವ ಅವಶ್ಯಕತೆ ಇದೆ ಎಂದು ತುಮಕೂರು ಹಾಲು ಒಕ್ಕೂಟದ ನಿರ್ದೇಶಕ ಎಸ್ .ಆರ್.ಗೌಡ ಹೇಳಿದರು.

ಶಿರಾ ತಾಲೂಕಿನ ಹುಯಿಲ್ ದೊರೆ ಗ್ರಾಮದಲ್ಲಿ ಸೋಮವಾರ ನಡೆದ ಹುಯಿಲ್ ದೊರೆ ಹಾಲು ಉತ್ಪಾದಕರ ಮಹಿಳಾ ಸಂಘದ ನೂತನ ಕಟ್ಟಡ ಶಂಕುಸ್ಥಾಪನೆ ಹಾಗೂ ವಾರ್ಷಿಕ ಮಹಾಸಭೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ತಾಲೂಕಿನ ಹಲವಾರು ಹಾಲು ಉತ್ಪಾದಕರ ಮಹಿಳಾ ಸಂಘ ಯಶಸ್ವಿಯತ್ತ ಮುನ್ನಡೆಯಲು ಮಹಿಳಾ ಸದಸ್ಯರ ಪ್ರಾಮಾಣಿಕ ಸೇವೆ ಹಾಗೂ ಉತ್ಪಾದಕರ ನಡುವಿನ ಸ್ನೇಹಮಯ ಸಮನ್ವಯತೆ ಕಾರಣ ಎಂದರು.

ಹುಯಿಲ್ ದೊರೆ ಮಹಿಳಾ ಹಾಲು ಉತ್ಪಾದಕರ ಸಂಘದ ಅಧ್ಯಕ್ಷೆ ನಾಗರತ್ನಮ್ಮ, ಉಪಾಧ್ಯಕ್ಷ ಎಂ. ಎನ್ ಶಾಂತಮ್ಮ,ವಿಸ್ತರಣಾಧಿಕಾರಿ ಚೈತ್ರ, ಸಮಾಲೋಚಕ ಪ್ರವೀಣ್, ಬಾಬಾ ಫಕ್ರುದ್ದೀನ್ ಪಿ.ಎಂ, ಹಾಲು ಉತ್ಪಾದಕರ ಸಂಘದ ನಿರ್ದೇಶಕರುಗಳಾದ ನಾಗಮಣಿ ವಿನೋದ ಪ್ರೇಮ, ಕಮಲಮ್ಮ ನೀಲಮ್ಮ ಸುಕನ್ಯಾ ಪುಟ್ಟಮ್ಮ ಗೀತಾ ಸವಿತಾ ಜಯಮ್ಮ ಪುಟ್ಟಮ್ಮ, ಕಾರ್ಯದರ್ಶಿ ಎನ್.ಕೆ. ಚೈತ್ರ ಶ್ರೀ, ಮುಖಂಡರಾದ ಸೋಮಶೇಖರ್, ಪ್ರಕಾಶ್, ಡೈರಿ ರಂಗನಾಥ್ ಸೇರಿದಂತೆ ಹಲವಾರು ಮುಖಂಡರು, ಹಾಲು ಉತ್ಪಾದಕರು ಗ್ರಾಮಸ್ಥರು ಉಪ ಉಪಸ್ಥಿತರಿದ್ದರು.



# ಮಾದಿಗ ಸಮುದಾಯದ ಮಕ್ಕಳಿಗೆ ಉನ್ನತ ಶಿಕ್ಷಣ ಅವಶ್ಯ: ಕಡಬ ಶಂಕರ್

## ಹಲಸಿನ ನಾಗೇನಹಳ್ಳಿ ಗ್ರಾಮದಲ್ಲಿ ಡಾ. ಬಿ ಆರ್ ಅಂಬೇಡ್ಕರ್ ಯುವಕ ಸಂಘ ನಾಮಫಲಕ ಅನಾವರಣ

**ಗುಬ್ಬಿ:** ಡಾ. ಬಿ ಆರ್ ಅಂಬೇಡ್ಕರ್ ರವರ ಕನಸನ್ನು ನೆನಸು ಮಾಡಲು ದಲಿತ ಜನಾಂಗದವರು ಮಕ್ಕಳನ್ನು ಶಿಕ್ಷಣವಂತರನ್ನಾಗಿ ಮಾಡಬೇಕು ಎಂದು ದಲಿತ ಸಂಘರ್ಷ ಸಮಿತಿ ತಾಲೂಕು ಸಂಚಾಲಕ ಕಡಬ ಶಂಕರ್ ತಿಳಿಸಿದರು.

ತಾಲೂಕಿನ ಹಲಸಿನ ನಾಗೇನಹಳ್ಳಿ ಗ್ರಾಮದಲ್ಲಿ ಡಾ. ಬಿ ಆರ್ ಅಂಬೇಡ್ಕರ್ ಯುವಕ ಸಂಘ ನಾಮಫಲಕ ಅನಾವರಣಗೊಳಿಸಿ ಮಾತನಾಡಿ, ಮೊದಲು ಮಕ್ಕಳಿಗೆ ಉನ್ನತ ಶಿಕ್ಷಣ ನೀಡಿ ಉದ್ಯೋಗವಕಾಶ ಕಲ್ಪಿಸಿ ಕೊಟ್ಟಾಗ ಮಾತ್ರ ಮಾದಿಗ ಸಮುದಾಯ ಅಭಿವೃದ್ಧಿಯಾಗಲು ಸಾಧ್ಯವಾಗುತ್ತದೆ ಎಂದರು. ಮುಖಂಡ ಅದಲಗೆರೆ ಈಶ್ವರಯ್ಯ ಮಾತನಾಡಿ ಪ್ರತಿ ಗ್ರಾಮಗಳಲ್ಲಿ ಯುವ ಸಂಘಟನೆ ಸ್ಥಾಪನೆಯಾಗುವುದರಿಂದ ಜನಾಂಗಕ್ಕೆ ಆಗುವ ಅನ್ಯಾಯವನ್ನು ತಡೆದು ಆರ್ಥಿಕ, ಸಾಮಾಜಿಕ ಅಭಿವೃದ್ಧಿಗೆ ಸಹಕರಿಸಬಹುದು ಎಂದು ತಿಳಿಸಿದರು.

ಕುಂದರನಹಳ್ಳಿ ನಟರಾಜ್ ಮಾತನಾಡಿ ಸಮುದಾಯದ ಯುವಜನತೆ ಅಂಬೇಡ್ಕರ್ ಅವರ ಶಿಕ್ಷಣ ಸಂಘಟನೆ ಹೋರಾಟ ಸಿದ್ಧಾಂತವನ್ನು ಪ್ರೇರಣೆ ಮಾಡಿಕೊಂಡು ಧೈರ್ಯವಾಗಿ



ಮುನ್ನುಗ್ಗಬೇಕು ಎಂದರು. ಇದೇ ಸಂಧರ್ಭದಲ್ಲಿ ದಸಂಸ ಪದಾಧಿಕಾರಿಗಳಾದ ಕಲ್ಲೂರು ರವಿಕುಮಾರ್, ಕೋಟೆ ಕಲ್ಲೇಶ್, ಡಿ ಎಂ ಲಕ್ಷ್ಮಣ್, ಗ್ಯಾರಹಳ್ಳಿ ಯೋಗೀಶ್, ಮಂಚಿಹಳ್ಳಿ ಶಿವಸ್ವಾಮಿ, ಆಟೋ ರಾಮು, ಚೇಳೂರು ಸೋಮಶೇಖರ್, ಮಾರಯ್ಯ, ಕುಮಾರಸ್ವಾಮಿ, ಶ್ರೀ ರಾಮ್, ಯೋಗೀಶ್, ಮಂಜುನಾಥ್, ಭರತ್, ಚಂದು, ನರಸಿಂಹಮೂರ್ತಿ, ಭಾಗ್ಯಮ್ಮ, ಚೈತ್ರ, ರೂಪ ಸೇರಿದಂತೆ ಇನ್ನಿತರರು ಇದ್ದರು.

# ಅಪರಿಚಿತ ವ್ಯಕ್ತಿ ಸಾವು

**ತುಮಕೂರು:** ನಗರ ಪೊಲೀಸ್ ಠಾಣೆ ವ್ಯಾಪ್ತಿ ಜಿಲ್ಲಾ ಆಸ್ಪತ್ರೆ ಆವರಣ ಉಗ್ರಾಣದ ಬಳಿ ಆಗಸ್ಟ್ 9ರಂದು ಸುಮಾರು 40 ವರ್ಷದ ಅಪರಿಚಿತ ವ್ಯಕ್ತಿಯ ಶವವೊಂದು ಪತ್ತೆಯಾಗಿದ್ದು, ವಾರಸುದಾರರು ಯಾರೆಂದು ತಿಳಿದು ಬಂದಿರುವುದಿಲ್ಲ.

ಮೃತನು 168 ಸೆಂ.ಮೀ ಎತ್ತರ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ, ಕೋಲು ಮುಖ, ಬಲಗೈಯಲ್ಲಿ ಮಲ್ಲಿ ಎಂದು ಕನ್ನಡದಲ್ಲಿ ಹಚ್ಚೆ ಇರುತ್ತದೆ. ಮೃತನ ಮೈಮೇಲೆ ನೀಲಿ ಬಣ್ಣದ ತುಂಬು ತೋಳಿನ ಜೀನ್ಸ್ ಷರ್ಟ್, ಕಾಫಿ ಬಣ್ಣದ ಟೀ ಷರ್ಟ್ ಹಾಗೂ ಕಪ್ಪು ಬಣ್ಣದ ಪ್ಯಾಂಟ್ ಇರುತ್ತದೆ.

ಮೃತನ ವಾರಸುದಾರರು ಯಾರಾದರೂ ಇದ್ದಲ್ಲಿ ದೂ.ವಾ.ಸಂ. 0816-2278388, ಮೊ.ಸಂ. 9480802945-30-00ಯನ್ನು ಸಂಪರ್ಕಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

# ಚಿಕಿತ್ಸೆ ಫಲಕಾರಿಯಾಗದೆ ಅಪರಿಚಿತ ವ್ಯಕ್ತಿ ಸಾವು

**ತುಮಕೂರು:** ಕೊರಟಗೆರೆ ಪೊಲೀಸ್ ಠಾಣೆ ವ್ಯಾಪ್ತಿ ಅಕ್ಕಿರಾಂಪುರ ಗ್ರಾಮ ಬಸ್ ನಿಲ್ದಾಣದ ಸಮೀಪದಲ್ಲಿ ಆಗಸ್ಟ್ 5ರಂದು ಅಸ್ವಸ್ಥನಾಗಿದ್ದ ಸುಮಾರು 65 ವರ್ಷದ ವ್ಯಕ್ತಿಯನ್ನು ಕೊರಟಗೆರೆ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿದ್ದು, ಚಿಕಿತ್ಸೆ ನೀಡುವಷ್ಟರಲ್ಲಿ ವ್ಯಕ್ತಿಯು ಸಾವನ್ನಪ್ಪಿರುತ್ತಾನೆ. ಮೃತನ ವಾರಸುದಾರರು ಯಾರೆಂದು ತಿಳಿದು ಬಂದಿರುವುದಿಲ್ಲ.

ಮೃತನು 180 ಸೆಂ.ಮೀ ಎತ್ತರ, ತೆಳ್ಳನೆ ಶರೀರ, ಎಣ್ಣೆಗೆಂಪು ಮೈಬಣ್ಣ, ಕೋಲು ಮುಖ, ಬಲ ಎದೆಯ ಕೆಳಭಾಗ ಹೆಸರುಕಾಳು ಗಾತ್ರದ ಕಪ್ಪು ಮಚ್ಚೆ ಇರುತ್ತದೆ. ಮೃತನ ಮೈಮೇಲೆ ನೀಲಿ ಬಣ್ಣದ ಲುಂಗಿ, ಬಿಸ್ಕತ್ ಬಣ್ಣದ ತುಂಬು ತೋಳಿನ ಷರ್ಟ್ ಹಾಗೂ ಮಾಸಲು ಬಣ್ಣದ ಟವಲ್ ಇರುತ್ತದೆ.

ಮೃತನ ವಾರಸುದಾರರು ಯಾರಾದರೂ ಇದ್ದಲ್ಲಿ ದೂ. ವಾ.ಸಂ. 08138-232136, 0816-2278000, 08137-282378, ಮೊ.ಸಂ. 9480802988-54-00ಯನ್ನು ಸಂಪರ್ಕಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

# ಇಂದು ವಿದ್ಯುತ್ ವ್ಯತ್ಯಯ

ತುಮಕೂರು: ಬೆಸ್ಕಾಂ ಶಿರಾ ನಗರ ಉಪವಿಭಾಗ ವ್ಯಾಪ್ತಿಯಲ್ಲಿ ದುರಸ್ತಿ ಕಾಮಗಾರಿ ಕೈಗೊಂಡಿರುವುದರಿಂದ ಆಗಸ್ಟ್ 19ರಂದು ಬೆಳಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಮೇಕೆರಹಳ್ಳಿ,

ಎಸ್‌ಕೆಜಿ ಆಯಿಲ್ ಮಿಲ್, ವಿದ್ಯಾನಗರ, ಬಾಲಾಜಿ ನಗರ, ಜಾಜಿಕಟ್ಟೆ, ಸಂತೇಪೇಟೆ, ಶಿವಾಜಿನಗರ ಹಾಗೂ ಯಲಿಯೂರು ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳು ಮತ್ತು ಶಿರಾ ಸುತ್ತಮುತ್ತಲಿನ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಮನವಿ ಮಾಡಿದ್ದಾರೆ.

# ವಿದ್ಯಾರ್ಥಿನಿಗೆ ಲೈಂಗಿಕ ಕಿರುಕುಳ; 60 ವರ್ಷದ ಮನೆ ಮಾಲೀಕನ ಬಂಧನ

**ಬೆಂಗಳೂರು:** ತನ್ನ ಮನೆಯಲ್ಲಿ ಬಾಡಿಗೆಗಿದ್ದ ಮಗಳ ವಯಸ್ಸಿನ ಕಾಲೇಜು ವಿದ್ಯಾರ್ಥಿನಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದ ಮೇಲೆ 60 ವರ್ಷದ ಮನೆ ಮಾಲೀಕನನ್ನು ಬೆಂಗಳೂರಿನ ಅಶೋಕನಗರ ಪೊಲೀಸರು ಬಂಧಿಸಿದ್ದಾರೆ.?

ಬಂಧಿತ ಆರೋಪಿಯನ್ನು ಕಮಲೇಶ್ ಕುಮಾರ್ ಎಂದು ಗುರುತಿಸಲಾಗಿದ್ದು, ಬಾಡಿಗೆಗೆ ವಾಸವಿದ್ದ 20 ವರ್ಷದ ಕಾಲೇಜು ವಿದ್ಯಾರ್ಥಿನಿ ನೀಡಿದ ದೂರಿನನ್ವಯ ಕ್ರಮ ಕೈಗೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಕಳೆದ ಶನಿವಾರ ಸಂಜೆ 6:25ರ ಸುಮಾರಿಗೆ ಯುವತಿ ವಾಸವಿದ್ದ ಮನೆಯಲ್ಲಿ ಬಾಕಿ ಇದ್ದ ರಿಪೇರಿ ಕೆಲಸಗಳನ್ನು ಪರಿಶೀಲಿಸುವ ನೆಪದಲ್ಲಿ ಕಮಲೇಶ್ ಕುಮಾರ್, ಆಕೆಗೆ ಲೈಂಗಿಕ ಕಿರುಕುಳ ನೀಡಿದ್ದಾನೆ ಎಂದು ಆರೋಪಿಸಲಾಗಿದೆ.

ಆರಂಭದಲ್ಲಿ ಯುವತಿಯ ಕಾಲೇಜು ಮತ್ತು ವಿದ್ಯಾಭ್ಯಾಸದ ಬಗ್ಗೆ ಮಾತುಕತೆ ನಡೆಸಿದ ಆರೋಪಿ, ಬಳಿಕ ಆಕೆಯ ಕೈಯಲ್ಲಿದ್ದ ಮೆಹಂದಿ ನೋಡುವ ನೆಪದಲ್ಲಿ ಕೈ ಹಿಡಿದು ತನ್ನತ್ತ ಎಳೆದುಕೊಂಡಿದ್ದಾನೆ. ತೀವ್ರ ಪ್ರತಿರೋಧ ಒಡ್ಡಿದರೂ ಲೆಕ್ಕಿಸದೆ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ. ಅಷ್ಟೇ ಅಲ್ಲದೆ, ಖಾಸಗಿಯಾಗಿ ಮತ್ತೆ ಭೇಟಿಯಾಗುವಂತೆ ಒತ್ತಾಯಿಸಿ ಅಸಭ್ಯವಾಗಿ ಮಾತನಾಡಿದ್ದಾನೆ ಎಂದು ವಿದ್ಯಾರ್ಥಿನಿ ದೂರಿನಲ್ಲಿ ಆರೋಪಿಸಿದ್ದಾರೆ. ಘಟನೆಯಿಂದ ಆಘಾತಗೊಂಡ ವಿದ್ಯಾರ್ಥಿನಿ ತಕ್ಷಣವೇ ಪೊಲೀಸರಿಗೆ ದೂರು ನೀಡಿದ್ದಾರೆ. ಯುವತಿ ನೀಡಿದ ಲಿಖಿತ ದೂರಿನ ಆಧಾರದ ಮೇಲೆ ಅಶೋಕನಗರ ಪೊಲೀಸ್ ಠಾಣೆಯಲ್ಲಿ ಭಾರತೀಯ ನ್ಯಾಯ ಸಂಹಿತೆ, 2023ರ ಸೆಕ್ಷನ್ 74 ಮತ್ತು 75(2)ರ ಅಡಿಯಲ್ಲಿ ಎಫ್ಐಆರ್ ದಾಖಲಿಸಿಕೊಳ್ಳಲಾಗಿದೆ ಮತ್ತು ಆರೋಪಿಯನ್ನು ಬಂಧಿಸಲಾಗಿದ್ದು, ಹೆಚ್ಚಿನ ತನಿಖೆ ಮುಂದುವರೆಸಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

# ಸಿ.ಎಂ.ಜಿ ಸೋಲಾರ್ ಹೈಮಾಸ್ಟ್ ಲೈಟ್‌ಗೆ ಗುದ್ದಲಿ ಪೂಜೆ



**ಶಿರಾ:** ತಾಲ್ಲೂಕು ಯಾದಲಡಕು ಗ್ರಾಮದಲ್ಲಿ ನಡೆದ ಶ್ರೀ ತಿಮ್ಮಪ್ಪಸ್ವಾಮಿ ಜಾತ್ರಾ ಮಹೋತ್ಸವದಲ್ಲಿ ಜನಪ್ರಿಯ ವಿಧಾನ ಪರಿಷತ್ ಶಾಸಕರು ಹಾಗೂ ಮಧುಗಿರಿ ಸಂಘಟನಾತ್ಮಕ ಜಿಲ್ಲೆಯ ಜಿಲ್ಲಾಧ್ಯಕ್ಷರಾದ ಚಿದಾನಂದ್ ಎಂ. ಗೌಡ ಅವರು ಭಾಗವಹಿಸಿ, ಶ್ರೀ ತಿಮ್ಮಪ್ಪಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ಗ್ರಾಮಸ್ಥರು ಹಾಗೂ ಜಾತ್ರೆಗೆ ಆಗಮಿಸುವ ಭಕ್ತಾದಿಗಳ ಅನುಕೂಲಕ್ಕಾಗಿ ತಮ್ಮ ಸ್ವಂತ ಹಣದಲ್ಲಿ ನಿರ್ಮಿಸಲಾಗುತ್ತಿರುವ ಸಿ.ಎಂ.ಜಿ ಸೋಲಾರ್ ಹೈಮಾಸ್ಟ್ ಲೈಟ್‌ಗೆ ವಿಧಾನ ಪರಿಷತ್ ಶಾಸಕರು ಅಧಿಕೃತವಾಗಿ ಗುದ್ದಲಿ ಪೂಜೆ ನೆರವೇರಿಸಿದರು.

ಗ್ರಾಮದ ಮೂಲಸೌಕರ್ಯ ಹಾಗೂ ಬೆಳಕಿನ ವ್ಯವಸ್ಥೆಗೆ ತಮ್ಮ ಸ್ವಂತ ವೆಚ್ಚದಲ್ಲಿ ಸೋಲಾರ್ ಹೈಮಾಸ್ಟ್ ಲೈಟ್ ಕೊಡುಗೆಯಾಗಿ ನೀಡಿದ MLC ಚಿದಾನಂದ್ ಎಂ. ಗೌಡ ಅವರ

ಈ ಜನಪರ ಕಾರ್ಯಕ್ಕೆ ಯಾದಲಡಕು ಗ್ರಾಮಸ್ಥರು ಹಾಗೂ ಮುಖಂಡರು ತೀವ್ರ ಮೆಚ್ಚುಗೆ ವ್ಯಕ್ತಪಡಿಸಿ ಧನ್ಯವಾದ ಅರ್ಪಿಸಿದರು.

ಈ ಸಂದರ್ಭದಲ್ಲಿ ಗ್ರಾಮಾಂತರ ಮಂಡಲ ಅಧ್ಯಕ್ಷರಾದ ಈರಣ್ಣ ಪಟೇಲ್, ಮುಖಂಡರಾದ ನಾದೂರು ಕುಮಾರ್, ತರೂರು ರೇಣುಕಾ ಪ್ರಸಾದ್, ಮುಖಂಡರಾದ ನಾಗರಾಜ್, ದೇವರಾಜ್ ಕೃಷ್ಣಮೂರ್ತಿ, ಸ್ಥಳೀಯ ಮುಖಂಡರು ಸೇರಿದಂತೆ ಅನೇಕ ಪ್ರಮುಖರು ಉಪಸ್ಥಿತರಿದ್ದರು.

# ಗ್ರಾಹಕರ ಸಮ್ಮಿಲನ ಕಾರ್ಯಕ್ರಮ



**ತುಮಕೂರು:** ಎಲ್ಲರೂ ತಮ್ಮ ಹಣಕಾಸಿನ ಉತ್ತುಮ ವ್ಯವಹಾರಕ್ಕಾಗಿ ನಮ್ಮ ಸೆಂಟ್ರಲ್ ಬ್ಯಾಂಕ್‌ನ ಆಪ್ ಇಂಡಿಯಾದಲಿ ವ್ಯವಹರಿಸಿ ತಮ್ಮ ವ್ಯವಹಾರಗಳನ್ನು ಅಭಿವೃದ್ದಿ ಪಡಿಸಿಕೊಳ್ಳಬೇಕು ಎಂದು ಸೆಂಟ್ರಲ್ ಬ್ಯಾಂಕ್ ಅಪ್ ಇಂಡಿಯಾದ ಬೆಂಗಳೂರು ಪ್ರಾದೇಶಿಕ ವ್ಯವಸ್ಥಾಪಕರಾದ ಸತೀಶ್ ಬಾಬು ತಿಳಿಸಿದರು.

ನಗರದ ಎಸ್. ಎಸ್. ಪುರಂ 1ನೇ ಕ್ರಾಸ್‌ನ ಕನ್ಯಾಕಪರಮೇಶ್ವರಿ ದೇವಾಲಯ ಸಭಾಂಗಣದಲ್ಲಿ ಕೃಷಿ ಸಾಲ ಸಂಪರ್ಕ ಪ್ರಚಾರ ಮತ್ತು ಗ್ರಾಹಕರ ಸಮ್ಮಿಲನ ಕಾರ್ಯಕ್ರಮದಲ್ಲಿ ಮುಖ್ಯ ಅಥಿತಿಗಳಾಗಿ ಪಿ. ಸತೀಶ್ ಬಾಬು ಮಾತನಾಡಿದರು. 1911 ರಲ್ಲಿ ಸ್ಥಾಪಿತವಾದ ಸೆಂಟ್ರಲ್ ಬ್ಯಾಂಕ್ ಇಂದು ದೇಶದಾದ್ಯಂತ 4500 ಹೆಚ್ಚು ಶಾಖೆಗಳನ್ನು ಹೊಂದಿದ್ದು ಎಮ್ ಎಸ್ ಎಂ ಇ ಗಳಿಗೆ ಪ್ರಾಮುಖ್ಯತೆ ನೀಡುವುದರೊಂದಿಗೆ ಹೈನುಗಾರಿಕೆ, ಪೌಲ್ಟ್ರಿ ಸ್ವಯಂ ಉದ್ಯೋಗಕ್ಕೆ ಗ್ರಾಮೀಣ ಭಾಗದಲ್ಲೂ ವಿಶೇಷ ಸಾಲ ಸೌಲಭ್ಯ ನೀಡುವುದರೊಂದಿಗೆ ದೇಶದ ಆರ್ಥಿಕತೆ ಪ್ರಾಮುಖ್ಯತೆ ನೀಡುತ್ತಿದೆ ಎಂದು ತಿಳಿಸಿದರು. ಸೆಂಟ್ರಲ್ ಬ್ಯಾಂಕ್ 100 ಹೆಚ್ಚು ಶಾಖೆಗಳೊಂದಿ ಕರ್ನಾಟಕದಲ್ಲಿ ಎರಡು ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದರು. 2025-26 ಸಾಲಿನ ಆರ್ಥಿಕ ವರ್ಷದಲ್ಲಿ ಸುಮಾರು 8.56 ಲಕ್ಷ ಕೋಟಿ ವ್ಯವಹಾರ ನಿರ್ವಸಿದ್ದು ಹೆಮ್ಮೆಯ ವಿಷಯವಾಗಿದೆ ಎಂದು ತಿಳಿಸಿದರು. ಮಹಿಳೆಯರಿಗಾಗಿ ಪ್ರತ್ಯೇಕ ಯೋಜನೆಗಳನ್ನು ಬ್ಯಾಂಕ್ ರೂಪಿಸಿದ್ದು ಇದರ ಪ್ರಯೋಜನ ಪಡೆದುಕೊಳ್ಳುವಂತೆ ಮಹಿಳೆಯರಿಗೆ ಮನವಿ ಮಾಡಿದರು. ಸಾಲ ಸೌಲಭ್ಯ ಪಡೆಯಲು ಎಲ್ಲರೂ ತಮ್ಮ ಸಿಬಿಲ್ ಸ್ಕೋರ್ ನ್ನು ಉತ್ತಮ ರೀತಿಯಲ್ಲಿ ನಿರ್ವಹಿಸಿಕೊಳ್ಳಬೇಕು ಮತ್ತು ಸಮಯಕ್ಕೆ ಸರಿಯಾಗಿ ಸಾಲ ಮರುಪಾವತಿ ಮಾಡಿ ವ್ಯವಹಾರನ್ನು ಉತ್ತಮ ರೀತಿಯಲ್ಲಿ ಕಾಪಾಡಿಕೊಳ್ಳಬೇಕು ಮತ್ತು ಪ್ರಸ್ತುತ ಡಿಜಿಟಲ್ ಅರೆಸ್ಟ್ ಎಂಬ ಮಾಹಾ ಮಾರಿಗೆ ತುತ್ತಾಗದಂತೆ ಎಚ್ಚರಿಕೆಯಿಂದು ಇರಬೇಕು. ಬ್ಯಾಂಕ್ ಖಾತೆ ಕುರಿತು ಯಾರೇ ಓಟಿಪಿ ಕೇಳಿದರು ನೀಡಬಾರದು ಮತ್ತು ಬ್ಯಾಂಕ್ ಓರತುಪಡಿಸಿ ಯಾವುದೇ ಅನಧಿಕೃತ ಲಿಂಕ್‌ಗಳನ್ನು ಕ್ಲಿಕ್ ಮಾಡಬಾರದು ಇದರಿಂದ ನಿಮ್ಮ ಹಣಕ್ಕೆ ಅಪಾಯ ಎದುರಾಗುತ್ತದೆ ಎಂದು ಬ್ಯಾಂಕ್ ಗ್ರಾಹಕರಿಗೆ ತಿಳಿಸದರು.

ಸೆಂಟ್ರಲ್ ಬ್ಯಾಂಕ್‌ನ ನಿವೃತ್ತ ಶಾಖಾ ವ್ಯವಸ್ಥಾಪಕ ರಾಮಕೃಷ್ಣಯ್ಯ ಕಾಳೇನಹಳ್ಳಿ ಅವರು ಮಾತನಾಡಿ ದೇಶದ ಪ್ರತಿಷ್ಠಿತ ಬ್ಯಾಂಕಿಂಗ್ ಸಂಸ್ಥೆಗಳಲ್ಲಿ ಒಂದಾದ ಸೆಂಟ್ರಲ್ ಬ್ಯಾಂಕ್ ಆಫ್ ಇಂಡಿಯಾ 1911 ಡಿಸೆಂಬರ್ 21 ರಂದು ಸಂಸ್ಥಾಪಕ ಸೊರಾಬ್‌ಜಿ ಪೋಚ್‌ಖಾನಾವಾಲಾ ಅವರ ದೂರದೃಷ್ಟಿಯ ಫಲವಾಗಿ ಸ್ಥಾಪನೆಯಾಯಿತು ಬ್ಯಾಂಕಿಂಗ್ ಕ್ಷೇತ್ರದಲ್ಲಿ ಹಲವು ನವೀನ ಯೋಜನೆಗಳನ್ನು ಪ್ರಥಮ ಬಾರಿಗೆ ಜಾರಿಗೆ ತಂದ ಹಿರಿಮೆ ಸೆಂಟ್ರಲ್ ಬ್ಯಾಂಕ್‌ಗೆ ಸಲ್ಲುತ್ತದೆ. ದೇಶದಲ್ಲೇ ಮೊದಲ ಬಾರಿಗೆ ಉಳಿತಾಯ ಖಾತೆ ಪ್ರತ್ಯೇಕ ಮಹಿಳಾ ವಿಭಾಗ, ಕ್ರೆಡಿಟ್ ಕಾರ್ಡ್ ಸೌಲಭ್ಯ ಹಾಗೂ ಸೇಫ್ ಡಿಪಾಸಿಟ್ ಲಾಕರ್ ವ್ಯವಸ್ಥೆಯನ್ನು ಸಾರ್ವಜನಿಕರಿಗೆ ಪರಿಚಯಿಸಿದ ಕೀರ್ತಿ ಈ ಬ್ಯಾಂಕ್‌ಗಿದೆ ಎಂದು ಸ್ಮರಿಸಿದರು.

ಪಶುಸಂಗೋಪನೆಯ ಜಿಲ್ಲಾ ಅಧಿಕಾರಿ ಮೋಹನ್ ಮತನಾಡಿ ನಾನು ಸೆಂಟ್ರಲ್ ಬ್ಯಾಂಕ್ ನಲ್ಲಿ ಕಳೆದ 20 ವರ್ಷಗಳಿಂದ ವ್ಯವಹಾರ ಮಾಡುತ್ತಿದ್ದೇನೆ. ಗ್ರಾಮೀಣ ಭಾಗದಲ್ಲಿ ರೈತರ ಅಭಿವೃದ್ದಿಗಾಗಿ ಸೆಂಟ್ರಲ್ ಬ್ಯಾಂಕ್ ಆಪ್ ಇಂಡಿಯ ಹಲವು ಯೋಜನೆಗಳನ್ನು ರೂಪಿಸಿದ್ದು ಕಡಿಮೆ ಬಡ್ಡದರದಲ್ಲಿ ಲಾಭದಾಯಕ ಉದ್ಯಮಗಳಾಗಿರುವ ಮತ್ತು ಸರ್ಕಾರದ ಸಬ್ಸಿಡಿ ಯೋಜನೆಗಳಿಗೆ ಅರ್ಹವಾಗಿರುವ ಪಶುಸಂಗೋಪನೆ, ಕುರಿಸಾಕಣಿಕೆ, ಕೋಳಿ ಪಾರಂ ಗಳಿಗೆ ಸಾಲ ಪಡೆದು ರೈತರು ಅಭಿವೃದ್ದಿಯಾಗಿರುವುದು ತುಂಬಾ ಸಂತಸ ತಂದಿದೆ ಎಂದರು.

ಬ್ಯಾಂಕ್ ಗ್ರಾಹಕರಾದ ಬಾಸ್ಕರ್ ಮಾತನಾಡಿ ಬೇರೆ ರಾಷ್ಟ್ರೀಕೃತ ಬ್ಯಾಂಕ್ ಗಳಿಗಿಂತ ಸೆಂಟ್ರಲ್ ಬ್ಯಾಂಕ್ ಅಪ್ ಇಂಡಿಯ ಸೇವೆಗಳು ಅತ್ಯುತ್ತಮವಾಗಿಗೆ ಬ್ಯಾಂಕ್ನ ಸಿಬ್ಬಂದಿಗಳು ಗ್ರಾಹಕರಿಗೆ ಉತ್ತಮ ರೀತಿಯಲ್ಲಿ ಸಹಕಾರ ನೀಡುತ್ತಾರೆ ಅದ್ದರಿಂದ ಎಲ್ಲರೂ ಸೆಂಟ್ರಲ್ ಬ್ಯಾಂಕ್ ಆಪ್ ಇಂಡಿಯಾದಲ್ಲಿ ತಮ್ಮ ವ್ಯವಹಾರ ನಡೆಸಬೇಕೆಂದು ಸಲಹೆ ನೀಡಿದರು.

ವಿಜಯ ಕಾಲೇಜಿನ ಮುಖ್ಯಸ್ಥರಾದ ಮನೀಶ್ ಮಾತನಾಡಿ ಗ್ರಾಹಕರಿಗೆ ಉತ್ತಮ ರೀತಿಯಲ್ಲಿ ಸೇವೆ ನೀಡುತ್ತಿರುವುದರಿಂದ ನಾನು ನಮ್ಮ ಶಾಲೆ ಸಿಬ್ಬಂದಿಗಳ ಎಲ್ಲರ ಖಾತೆಗಳನ್ನು ಸೆಂಟ್ರಲ್ ಬ್ಯಾಂಕ್ ಆಪ್ ಇಂಡಿಯಾದಲ್ಲಿ ಮಾಡಿಸಿದ್ದೇನೆ. ನೀವುಗಳು ಎಲ್ಲರೂ ಸೆಂಟ್ರಲ್ ಬ್ಯಾಂಕ್ ಅಪ್ ಇಂಡಿಯಾದಲಿ ವ್ಯವಾಹರಿಸಿ ಎಂದು ತಿಳಿಸಿದರು. ಅತಿಥಿಯಾಗಿ ಭಾಗವಹಿಸಿದ್ದ ಕುಸುಮಾ ಮಾತನಾಡಿ ಸೆಂಟ್ರಲ್ ಬ್ಯಾಂಕ್ ಆಪ್ ಇಂಡಿಯಾಲ್ಲಿ ಇರುವು ಪ್ರಧಾನ್ ಮಂತ್ರಿ ಸುರಕ್ಷಾ ಯೋಜನೆ, ಪ್ರಧಾನ್ ಮಂತ್ರಿ ಜೀವನ್ ಜ್ಯೋತಿ ಯೋಜನೆ, ಆಟಲ್ ಪೆನ್ಷನ್ ಯೋಜನೆ ಗಳನ್ನು ಬ್ಯಾಂಕ್ ನ ಗ್ರಾಹಕರು ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು. ಯಾವುದೇ ಬ್ಯಾಂಕ್ ಗಳ್ಲೀ ದಾಖಲೆ ರಹಿತ ಬ್ಯಾಂಕ್ ಖಾತೆ ತೆರೆಯಲು ಕಾಲ ಕಾಲಕ್ಕೆ ಬ್ಯಾಂಕ್ ನಿಂದ ಮಾಡಿಸುವ ಇ-ಕೆವೈಸಿ ಯೊಂದಿಗೆ ಸಿಕೆವೈಸಿಯನ್ನು ಮಾಡಿಸಿಕೊಳ್ಳಿ ಎಂದು ತಿಳಿಸಿದರು. ಕಾರ್ಯಕ್ರದಲ್ಲಿ ಕುಸುಮ ಮತ್ತು ಸಾಕಿ ಬಾಯಿ ಪ್ರಾರ್ಥಿಸಿ ನಿರೂಪಿಸಿದರು. ಸೆಂಟ್ರಲ್ ಬ್ಯಾಂಕ್ ನ ಶಶಾಂಕ್, ವ್ಯವಸ್ಥಾಪಕರಾದ ಎಂ ಎನ್ ರಂಗಸ್ವಾಮಿ, ಬಾಸ್ಕರ್ ಕಂಪೆನಿ ಭಾಸ್ಕರ್, ಬ್ಯಾಂಕ್ ಗ್ರಾಹಕರಾದ ಮಂಜುನಾಥ ಶೆಟ್ಟಿ, ಬ್ಯಾಂಕ್ ವ್ಯವಸ್ಥಾಪಕರಾದ ರೇಣುಕಸ್ವಾಮಿ, ಶರಣಪ್ಪ ಬಂಡಾರಿ ಸಿಬ್ಬಂದಿಗಳಾದ ರಮ್ಯಾ, ಅಲೆನ್ ಸೇರಿದಂತೆ ಶಾಖಾ ಸಿಬ್ಬಂಧಿಗಳು ಹಲವಾರು ಗ್ರಾಹಕರು ಭಾಗವಹಿಸಿದ್ದರು.

# ಸಿದ್ಧಾರ್ಥ ಮ್ಯಾನೇಜ್‌ಮೆಂಟ್- ಸುಯಾಂಶ್ ಸಂಸ್ಥೆಗಳ ನಡುವೆ ಒಪ್ಪಂದ



**ತುಮಕೂರು:** ವಿದ್ಯಾರ್ಥಿಗಳಿಗೆ ಕೈಗಾರಿಕಾ ಅನುಭವ, ಅಂತರರಾಷ್ಟ್ರೀಯ ಶಿಕ್ಷಣ ಮತ್ತು ಜಾಗತಿಕ ವೃತ್ತಿ ಅವಕಾಶಗಳನ್ನು ಕಲ್ಪಿಸುವ ಉದ್ದೇಶದಿಂದ ಶ್ರೀ ಸಿದ್ಧಾರ್ಥ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್ ಹಾಗೂ ಲಂಡನ್‌ನ ಸುಯಾಂಶ್ ಪ್ರಾಪರ್ಟೀಸ್ ಲಿಮಿಟೆಡ್ ಹಾಗೂ ಲಂಡನ್‌ನ ಸ್ವಾನ್ವೊರಾ ಲಿಮಿಟೆಡ್ ಮತ್ತು ಬೆಂಗಳೂರಿನ ಸುಯನ್ಸ್ ಸಂಸ್ಥೆಗಳ ನಡುವೆ ಮಹತ್ವದ ಒಪ್ಪಂದಗಳನ್ನು ಮಾಡಿಕೊಳ್ಳಲಾಗಿದೆ.

ನಗರದ ಎಸ್ ಎಸ್ ಐಟಿ ಕ್ಯಾಂಪಸ್ ನಲ್ಲಿರುವ ಕಾಲೇಜಿನ ಸಭಾಂಗಣದಲ್ಲಿ ಏರ್ಪಟ್ಟ ಕಾರ್ಯಕ್ರಮದಲ್ಲಿ ಸ್ವಾನ್ವೊರಾ ಲಿಮಿಟೆಡ್‌ನ ಸ್ಥಾಪಕ ಮತ್ತು ವ್ಯವಸ್ಥಾಪಕ ನಿರ್ದೇಶಕ ಸುಯಾನ್ಸ್ ಗ್ರೂಪ್ ನಿರ್ದೇಶಕರಾದ ಶ್ರೀಮತಿ ನಯನಾ ಪುಟ್ಟಪ್ಪ ಮತ್ತು ಅಂಬೇಡ್ಕರ್ ತಂತ್ರಜ್ಞಾನ ಸಂಸ್ಥೆ ಡಾ. ವಿದ್ಯಾರಾಣಿ ಎಚ್.ಜೆ. ಶ್ರೀ ಸಿದ್ಧಾರ್ಥ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್ ಪ್ರಾಂಶುಪಾಲರಾದ ಡಾ. ಬಿ. ಅಜ್ಮತುಲ್ಲಾ ಹಾಗೂ ಕಾಲೇಜಿನಲ್ಲಿ ಜಾಗತಿಕ ಸಂಪರ್ಕ ಮತ್ತು ಸಂಶೋಧನಾ ವಿಭಾಗದ ಮುಖ್ಯಸ್ಥರು ಡಾ. ಎನ್. ಪವಿತ್ರಾ ಹಾಗೂ ಪ್ರಾಧ್ಯಾಪಕರ ತಂಡ ಪರಸ್ಪರ ಚರ್ಚಿಸಿ, ಒಪ್ಪಂಗಳಿಗೆ ಸಹಿ ಹಾಕಲಾಯಿತು.

ಈ ಒಡಂಬಡಿಕೆಯಿಂದ ವಿದ್ಯಾರ್ಥಿಗಳಿಗೆ ಇಂಟರ್ನ್‌ಶಿಪ್, ಯೋಜನೆಗಳು, ಉದ್ಯಮ ತಜ್ಞರ ಉಪನ್ಯಾಸಗಳು, ವೃತ್ತಿಪರ ತರಬೇತಿ, ಅನ್ವಯಿಕ ಸಂಶೋಧನೆ, ಜಂಟಿ ಪ್ರಮಾಣೀಕರಣ ಮತ್ತು ಯದ್ಯಮಕ್ಕೆ ನಿಯೋಜನೆ ಬೆಂಬಲ ದೊರೆಯಲಿವೆ. ಡೇಟಾ ಅನಾಲಿಟಿಕ್ಸ್, ಐಟಿ ಮತ್ತು ಸುಸ್ಥಿರ ನಿರ್ಮಾಣ ಸೇರಿದಂತೆ ಮುಂತಾದ ಕ್ಷೇತ್ರಗಳಲ್ಲಿ ತರಬೇತಿ ಪಡೆಯುವ ಅವಕಾಶವೂ ಸಿಗಲಿದೆ.

ಸ್ವಾನ್ವೊರಾ ಲಿಮಿಟೆಡ್‌ನ ಅಂತರರಾಷ್ಟ್ರೀಯ ಜಾಲದ ಮೂಲಕ ವಿದ್ಯಾರ್ಥಿ ವಿನಿಮಯ, ವಿದೇಶದಲ್ಲಿ ವ್ಯಾಸಂಗ, ಅಂತರರಾಷ್ಟ್ರೀಯ ಕಾರ್ಯಾಗಾರಗಳು, ವಿದೇಶಿ ಭಾಷಾ ತರಬೇತಿ ಮತ್ತು ಒಮ್ಮೆಗೆ ಎರಡು ಮಾರ್ಗಗಳು ಜೊತೆ ಮುಂತಾದ ಜಾಗತಿಕ ಅವಕಾಶಗಳಿಗೆ ವಿದ್ಯಾರ್ಥಿಗಳಿಗೆ ಸಂಪರ್ಕ ಕಲ್ಪಿಸಲಾಗುವುದು.

ಈ ಸಹಭಾಗಿತ್ವದಿಂದ ಶ್ರೀ ಸಿದ್ಧಾರ್ಥ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್ ವಿದ್ಯಾರ್ಥಿಗಳಿಗೆ ಜಾಗತಿಕ ಅನುಭವ ಮತ್ತು ಉದ್ಯೋಗಾರ್ಹತೆ ಹೆಚ್ಚುವುದರ ಜೊತೆಗೆ, ಪ್ರತಿಭಾವಂತ ವಿದ್ಯಾರ್ಥಿಗಳೊಂದಿಗೆ ಉದ್ಯಮ ಕ್ಷೇತ್ರಗಳಲ್ಲಿ ಕೆಲಸ ಮಾಡುವ ಅವಕಾಶ ದೊರೆಯಲಿದೆ.

ಶ್ರೀ ಸಿದ್ಧಾರ್ಥ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್ ಪ್ರಾಂಶುಪಾಲರಾದ ಡಾ. ಬಿ. ಅಜ್ಮತುಲ್ಲಾ ಹಾಗೂ ಕಾಲೇಜಿನಲ್ಲಿ ಜಾಗತಿಕ ಸಂಪರ್ಕ ಮತ್ತು ಸಂಶೋಧನಾ ವಿಭಾಗದ ಮುಖ್ಯಸ್ಥರು ಡಾ. ಎನ್. ಪವಿತ್ರಾ ಅವರ ಮಾರ್ಗದರ್ಶನದಲ್ಲಿ ನಡೆದ ಒಡಂಬಡಿಕೆ ಸಹಭಾಗಿತ್ವವು ಸಂಸ್ಥೆಯನ್ನು ಮತ್ತಷ್ಟು ಬಲಪಡಿಸುವ ಮಹತ್ವದ ಹೆಜ್ಜೆಯಾಗಿದೆ. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಭಾಗವಹಿಸಿದರು.

# ಇಡೀ ಬ್ರಹ್ಮಾಂಡ ಸ್ವರೂಪವಾದ ಇಷ್ಟಲಿಂಗವನ್ನು ಧರಿಸಿಕೊಂಡು ಸಕಲ ಜೀವಾತ್ಮರಿಗೆ ಲೇಸನ್ನು ಬಯಸುವುದೇ ಬಸವಾದಿ ಶರಣರ ಆಶಯ



**ತುಮಕೂರು:** ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾ ಘಟಕ, ತುಮಕೂರು ಇವರ ಆಶ್ರಯದಲ್ಲಿ ಲಿಂಗಾಯತ ಇತಿಹಾಸ, ಸಿದ್ಧಾಂತ, ಸಂಘಟನೆ ಅಧ್ಯಯನ ಶಿಬಿರವನ್ನು ಗುಬ್ಬಿ ತಾಲ್ಲೂಕು, ಶ್ರೀ ಸಿದ್ಧರಾಮೇಶ್ವರ ಸಮುದಾಯ ಭವನ, ಹೇರೂರು ಇಲ್ಲಿ ದಿನಾಂಕ ಆಗಸ್ಟ್ 8, 9, 2026 ಇಲ್ಲಿ ಆಯೋಜಿಸಲಾಗಿತ್ತು. ದಿವ್ಯಸಾನಿಧ್ಯವನ್ನು ಶ್ರೀ ಮ. ನಿ. ಪ್ರ. ಸ್ವ. ಚಂದ್ರಶೇಖರ ಮಹಾಸ್ವಾಮಿಗಳು ವಹಿಸಿದ್ದರು. ಉದ್ಘಾಟನೆಯನ್ನು ವಿಶ್ರಾಂತ ನ್ಯಾಯಾಧೀಶರಾದ ಎನ್. ಕೆಂಪಗೌಡರು ನೆರವೇರಿಸಿದರು. ಅಧ್ಯಕ್ಷತೆಯನ್ನು ಜಿ.ಬಿ. ನಾಗಭೂಷಣ ಜಾ.ಲಿಂ.ಮ.ಸ. ಜಿಲ್ಲಾಧ್ಯಕ್ಷರು, ತುಮಕೂರು ಮುಖ್ಯಅತಿಥಿಗಳಾಗಿ ಹಾಗೂ ಸಂಪನ್ಮೂಲ ವ್ಯಕ್ತಿಗಳಾಗಿ ಕೋರಣೇಶ್ವರ ಸ್ವಾಮೀಜಿಗಳು ಶ್ರೀ ತೋಂಟದಾರ್ಯಮಠ ಆಳಂದ ಹಾಗೂ ಡಾ|| ಜಿ.ಎಸ್. ಪಾಟೀಲರು ಇತಿಹಾಸಕಾರರು ಭಾಗವಹಿಸಿದ್ದರು. ಇದೇ ಸಂಧರ್ಭದಲ್ಲಿ ಜಾಗತಿಕ ಲಿಂಗಾಯತ ಮಹಾಸಭಾ ತಾಲ್ಲೂಕು (ಗುಬ್ಬಿ) ಘಟಕವನ್ನು ರಚಿಸಿ ಸೇವಾ ಪದವಿ ಸ್ವೀಕಾರವನ್ನು ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು. ತಾಲ್ಲೂಕು ಘಟಕದ ಅಧ್ಯಕ್ಷರಾಗಿ ಬಿ.ಎನ್. ಸಂಗಪ್ಪ, ಉಪಾಧ್ಯಕ್ಷರಾಗಿ ನಂಜುಂಡಪ್ಪ ಹಾಗು ವಿಶ್ವಣ್ಣನವರು, ಪ್ರದಾನ ಕಾರ್ಯದರ್ಶಿಯಾಗಿ ಜಗದೀಶ್ ಮತ್ತು ಸಂಘಟನಾ ಕಾರ್ಯದರ್ಶಿಯಾಗಿ ರೇಣುಕಾರಾಧ್ಯರು ಇನ್ನಿತರ ಒಟ್ಟು 16 ಸದಸ್ಯರನ್ನು ಒಳಗೊಂಡ ಸಂಘ ರಚನೆಯಾಯಿತು.

ಸಾನಿಧ್ಯ ವಹಿಸಿದ್ದ ಶ್ರೀ ಚಂದ್ರಶೇಖರ ಮಹಾಸ್ವಾಮಿಗಳು ಮಾತನಾಡುತ್ತಾ ಇಡೀ ಬ್ರಹ್ಮಾಂಡ ಸ್ವರೂಪವಾದ ಇಷ್ಟಲಿಂಗವನ್ನು ಧರಿಸಿಕೊಂಡು ಸಕಲ ಜೀವಾತ್ಮರಿಗೆ ಲೇಸನ್ನು ಬಯಸುವುದೇ ಬಸವಾದಿ ಶರಣರ ಆಶಯವಾಗಿತ್ತು ಎಂದು ತಿಳಿಸಿದರು. ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಜಿ.ಎಸ್. ಪಾಟೀಲರು ಲಿಂಗಾಯತ ಧರ್ಮದ ಇತಿಹಾಸ ಹಾಗೂ ಸಿದ್ಧಾಂತವನ್ನು ಕುರಿತು ಮಾತನಾಡುತ್ತಾ ಬಸವಪೂರ್ವ, ಬಸವಯುಗ ಹಾಗೂ ಬಸವೋತ್ತರ ಯುಗಗಳಲ್ಲಿ ಅನೇಕ ಧರ್ಮಗಳ ಉಗಮ, ಅದರ ನೈತಿಕತೆಗಳ ಬಗ್ಗೆ ವಿಚಾರವನ್ನು ಮಂಡಿಸಿದರು. ಲಿಂಗಾಯತ ಧರ್ಮ ಉಳಿಯಬೇಕಾದರೆ ಎಲ್ಲರೂ ಆಚಾರವಂತರಾಗಬೇಕು ಎಂದು ತಿಳಿಸಿದರು. ನಂತರ ಕೋರಣೇಶ್ವರ ಸ್ವಾಮಿಗಳು ಲಿಂಗಾಯತ ಧರ್ಮದ ಸಂಘಟನೆ ಕುರಿತು ಮಾತನಾಡುತ್ತಾ ಬಸವಾದಿ ಶರಣರಿಂದ ಸ್ಥಾಪಿತವಾದ ಲಿಂಗಾಯತ ಧರ್ಮವನ್ನು ಮನೆ-ಮನಗಳಲ್ಲಿ ತಲುಪಿಸಬೇಕು ಎಂದು ವಿಚಾರ ಮಂಡಿಸಿದರು. ಇಡೀ ಶಿಬಿರದ ವ್ಯವಸ್ಥೆಯನ್ನು ಸಚ್ಚಿದಾನಂದ ಸದಾನಂದ ರಾಂಪುರ ಹಾಗು ಅವರ ಕುಟುಂಬದವರು ಜವಾಬ್ದಾರಿಯನ್ನು ವಹಿಸಿಕೊಂಡು ನೆರವೇರಿಸಿಕೊಟ್ಟರು. ಧರ್ಮಬಾಂಧವರು, ತುಮಕೂರು ಹಾಗೂ ಬೆಂಗಳೂರಿನಿಂದ ಅನೇಕ ಶಿಬಿರಾರ್ಥಿಗಳು ಆಗಮಿಸಿದ್ದರು.

# ಸ್ವಾತಂತ್ರ್ಯೋತ್ಸವದ ಸಂಭ್ರಮಕ್ಕೆ ರೋಟರಿ ಸೇವಾ ಸ್ಪರ್ಶ

# 2,000 ನೋಟ್‌ಬುಕ್, ಲೇಖನಿಗಳ ವಿತರಣೆ

## ವಿದ್ಯಾರ್ಥಿಗಳ ಶಿಕ್ಷಣಕ್ಕೆ ಸಂಸ್ಥೆಯ ಕಾಳಜಿಗೆ ಮೆಚ್ಚುಗೆ



**ಕೊರಟಗೆರೆ:** ಸ್ವಾತಂತ್ರ್ಯೋತ್ಸವದ ಸಂಭ್ರಮದಲ್ಲಿ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಉತ್ತೇಜನ ನೀಡುವ ಮೂಲಕ ಕೊರಟಗೆರೆ ರೋಟರಿ ಸಂಸ್ಥೆ ಅರ್ಥಪೂರ್ಣವಾಗಿ ಸಹಭಾಗಿತ್ವ ವಹಿಸಿತು.

ಕೊರಟಗೆರೆಯಲ್ಲಿ ನಡೆದ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದ ಅಂಗವಾಗಿ ಕೊರಟಗೆರೆ ರೋಟರಿ ಕ್ಲಬ್ ಅಧ್ಯಕ್ಷ ವಿಕೆ ನರಸಿಂಹಮೂರ್ತಿ ಹಾಗೂ ಕಾರ್ಯದರ್ಶಿ ಹೊನ್ನೇಶ್ ನೇತೃತ್ವದಲ್ಲಿ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಗೆ 2,000 ನೋಟ್‌ಬುಕ್‌ಗಳು ಹಾಗೂ ಲೇಖನಿಗಳನ್ನು ವಿತರಿಸಲಾಯಿತು.

ಇದರೊಂದಿಗೆ ವಿದ್ಯಾರ್ಥಿಗಳಿಗೆ ಸಿಹಿ ಹಂಚಿ ಸ್ವಾತಂತ್ರ್ಯೋತ್ಸವದ ಸಂಭ್ರಮವನ್ನು ಮತ್ತಷ್ಟು ಹೆಚ್ಚಿಸಲಾಯಿತು.

ಶಿಕ್ಷಣವೇ ಸಮಾಜದ ಪ್ರಗತಿಯ ಪ್ರಮುಖ ಅಡಿಪಾಯ ಎಂಬ ಆಶಯದೊಂದಿಗೆ ರೋಟರಿ ಸಂಸ್ಥೆಯು ವಿದ್ಯಾರ್ಥಿಗಳ ಶೈಕ್ಷಣಿಕ ಅಗತ್ಯಗಳಿಗೆ ಸ್ಪಂದಿಸಿರುವುದು ವಿಶೇಷ ಗಮನ ಸೆಳೆಯಿತು. ಶಾಲಾ ಹಂತದಲ್ಲಿಯೇ ಮಕ್ಕಳಲ್ಲಿ ಕಲಿಕೆಯ ಆಸಕ್ತಿ, ಶಿಸ್ತು ಹಾಗೂ ದೇಶಪ್ರೇಮ ಬೆಳೆಸುವ ನಿಟ್ಟಿನಲ್ಲಿ ಇಂತಹ ಸೇವಾ ಚಟುವಟಿಕೆಗಳು ಮಹತ್ವದ ಪಾತ್ರ ವಹಿಸುತ್ತವೆ ಎಂಬ ಅಭಿಪ್ರಾಯವೂ ಕಾರ್ಯಕ್ರಮದಲ್ಲಿ ವ್ಯಕ್ತವಾಯಿತು.

ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಮಕ್ಕಳಿಗೂ ಅಗತ್ಯ ಶೈಕ್ಷಣಿಕ ಸಾಮಗ್ರಿಗಳು ದೊರೆಯುವಂತಾಗಬೇಕು ಎಂಬ ಉದ್ದೇಶದಿಂದ ನೋಟ್‌ಬುಕ್ ಮತ್ತು ಲೇಖನಿಗಳನ್ನು ನೀಡಿರುವ ರೋಟರಿ ಸಂಸ್ಥೆಯ ಕಾರ್ಯಕ್ಕೆ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಮೆಚ್ಚುಗೆ ವ್ಯಕ್ತಪಡಿಸಿದರು.

ಸ್ವಾತಂತ್ರ್ಯೋತ್ಸವವನ್ನು ಕೇವಲ ಧ್ವಜಾರೋಹಣ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಸೀಮಿತಗೊಳಿಸದೆ, ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಸೇವಾ ಕಾರ್ಯದೊಂದಿಗೆ ಆಚರಿಸಿರುವುದು ಕಾರ್ಯಕ್ರಮದ ವಿಶೇಷತೆಯಾಗಿತ್ತು.

ರೋಟರಿ ಸಂಸ್ಥೆಯ ಅಧ್ಯಕ್ಷ ವಿಕೆ ನರಸಿಂಹಮೂರ್ತಿ ಮತ್ತು ಕಾರ್ಯದರ್ಶಿ ಹೊನ್ನೇಶ್ ಅವರ ನೇತೃತ್ವದಲ್ಲಿ ನಡೆದ ಈ ಸೇವಾ ಕಾರ್ಯಕ್ಕೆ ಕ್ಲಬ್‌ನ ಸದಸ್ಯರು ಸಹಕಾರ ನೀಡಿದರು. ವಿದ್ಯಾರ್ಥಿಗಳ ಮುಖದಲ್ಲಿ ಸಂತಸ ಮೂಡಿಸಿದ ಈ ಕಾರ್ಯಕ್ರಮವು ಸ್ವಾತಂತ್ರ್ಯೋತ್ಸವದ ಆಶಯಕ್ಕೆ ಮತ್ತಷ್ಟು ಅರ್ಥ ತುಂಬಿತು.

**ರೋಟರಿ ಸಂಸ್ಥೆಯ ಶಿಕ್ಷಣ ಕಾಳಜಿಗೆ ಶ್ಲಾಘನೆ:** ವಿದ್ಯಾರ್ಥಿಗಳ ಶಿಕ್ಷಣದ ಬಗ್ಗೆ ರೋಟರಿ ಸಂಸ್ಥೆ ಹೊಂದಿರುವ ಕಾಳಜಿ ಹಾಗೂ ಸಾಮಾಜಿಕ ಬದ್ಧತೆಯನ್ನು ಕಂಡು ಕೊರಟಗೆರೆ ತಾಲ್ಲೂಕು ದಂಡಾಧಿಕಾರಿಗಳು ಕ್ಲಬ್‌ನ ಅಧ್ಯಕ್ಷರು, ಕಾರ್ಯದರ್ಶಿ ಸೇರಿದಂತೆ ಎಲ್ಲಾ ಸದಸ್ಯರಿಗೆ ಹೃದಯಪೂರ್ವಕ ಅಭಿನಂದನೆ ಸಲ್ಲಿಸಿದರು. ಶಿಕ್ಷಣ ಕ್ಷೇತ್ರಕ್ಕೆ ಇಂತಹ ಸಂಸ್ಥೆಗಳು ನೀಡುವ ನಿರಂತರ ಸಹಕಾರವು ಗ್ರಾಮೀಣ ಹಾಗೂ ಪಟ್ಟಣ ಪ್ರದೇಶದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ನೆರವಾಗಲಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಸ್ವಾತಂತ್ರ್ಯೋತ್ಸವದ ಸಂದರ್ಭದಲ್ಲಿ ಮಕ್ಕಳ ಕೈಗೆ ನೋಟ್‌ಬುಕ್, ಲೇಖನಿಗಳನ್ನು ನೀಡಿ ಅವರ ಕಲಿಕೆಯ ಪಯಣಕ್ಕೆ ಪುಟ್ಟ ಬೆಂಬಲ ನೀಡಿದ ಕೊರಟಗೆರೆ ರೋಟರಿ ಸಂಸ್ಥೆಯ ಈ ಕಾರ್ಯವು 'ಸೇವೆಯ ಮೂಲಕ ಸಮಾಜದ ಅಭಿವೃದ್ಧಿ' ಎಂಬ ರೋಟರಿಯ ಆಶಯಕ್ಕೆ ತಕ್ಕ ಮಾದರಿ ಕಾರ್ಯವಾಗಿ ಗಮನ ಸೆಳೆಯಿತು.

# 'ಸ್ವಾತಂತ್ರ್ಯ ದಿನದೊಂದಿಗೆ ವನಮಹೋತ್ಸವಕ್ಕೆ ಒತ್ತು'



**ತುಮಕೂರು:** ನಗರದ ಹೃದಯ ಭಾಗದಲ್ಲಿರುವ ಕೋತಿ ತೋಪಿನ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಪರಿವರ್ತನಾ ಕಲಾ ಮತ್ತು ಕ್ರೀಡಾ ಯುವಕರ ಸಂಘ (ರಿ) ರ ವತಿಯಿಂದ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಸಂಘದ ಅಧ್ಯಕ್ಷ ಕೃಷ್ಣ ಹಾಗೂ ಕಾರ್ಯದರ್ಶಿ ಮೋಹನ್ ಟಿ.ಆರ್. ಅವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಶಾಲಾ ವಿದ್ಯಾರ್ಥಿಗಳು ರಾಷ್ಟ್ರಧ್ವಜ ಹಿಡಿದು ದೇಶಭಕ್ತಿ ಗೀತೆಗಳೊಂದಿಗೆ ಭಾಗವಹಿಸಿದರು. ಶಿಕ್ಷಕರು ಮತ್ತು ಅತಿಥಿಗಳು ವಿದ್ಯಾರ್ಥಿಗಳಿಗೆ ರಾಷ್ಟ್ರಪ್ರೇಮ, ಸ್ವಚ್ಛತೆ ಹಾಗೂ ಪರಿಸರ ಸಂರಕ್ಷಣೆಯ ಮಹತ್ವದ ಕುರಿತು ಅರಿವು ಮೂಡಿಸಿದರು.

ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿ ಶಾಲಾ ಆವರಣದಲ್ಲಿ ಹಲವು ಬಗೆಯ ಸಸಿಗಳನ್ನು ನೆಡಲಾಯಿತು. ಪ್ರತಿ ಸಸಿಯ ಸಂರಕ್ಷಣೆಯ ಜವಾಬ್ದಾರಿಯನ್ನು ವಿದ್ಯಾರ್ಥಿಗಳಿಗೆ ವಹಿಸಲಾಯಿತು.

ಸ್ವಾತಂತ್ರ್ಯದ ಸಂಭ್ರಮದೊಂದಿಗೆ ಹಸಿರು ಪರಿಸರ ನಿರ್ಮಾಣವೂ ನಮ್ಮೆಲ್ಲರ ಕರ್ತವ್ಯ. ಪರಿಸರವನ್ನು ಉಳಿಸುವುದು ಮುಂದಿನ ಪೀಳಿಗೆಗೆ ನಾವು ನೀಡುವ ಅತ್ಯುತ್ತಮ ಕೊಡುಗೆ? ಎಂದು ಸಂಘದ ಪದಾಧಿಕಾರಿಗಳು ತಿಳಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯ ಶಿಕ್ಷಕರಾದ ದೊಡ್ಡ ಚಿಕ್ಕಣ್ಣ, ಸಹ ಶಿಕ್ಷಕರು, ಶಾಲೆಯ ಖಆಒಃ ಅಧ್ಯಕ್ಷರಾದ ಶ್ರೀಮತಿ ರಂಗಮ್ಮ, ಸ್ಥಳೀಯರು, ಪೋಷಕರು ಹಾಗೂ ಹಳೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಎಲ್ಲರೂ ಒಟ್ಟಾಗಿ ಸಸಿ ನೆಟ್ಟು, ಸ್ವಾತಂತ್ರ್ಯ ದಿನವನ್ನು ಸ್ಮರಣೀಯವಾಗಿಸಿದರು.

ಪರಿವರ್ತನಾ ಕಲಾ ಮತ್ತು ಕ್ರೀಡಾ ಯುವಕರ ಸಂಘವು ಪ್ರತಿ ವರ್ಷವೂ ಸಾಮಾಜಿಕ ಮತ್ತು ರಾಷ್ಟ್ರೀಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದು, ಈ ಬಾರಿಯ ವನಮಹೋತ್ಸವದ ಆಚರಣೆ ವಿದ್ಯಾರ್ಥಿಗಳಲ್ಲಿ ಪರಿಸರ ಕಾಳಜಿ ಮೂಡಿಸುವಲ್ಲಿ ಯಶಸ್ವಿಯಾಯಿತು.

# ಆಗಸ್ಟ್ 15ರಿಂದ ಸೆಪ್ಟೆಂಬರ್ 15ರವರೆಗೆ ವಿಬಿ ಜಿ ರಾಮ್ ಜಿ ಯೋಜನೆಯಡಿ ಜಾಬ್ ಕಾರ್ಡ್ ಮೇಳ



**ತುಮಕೂರು:** ಗ್ರಾಮೀಣ ಪ್ರದೇಶದ ಅರ್ಹ ಕುಟುಂಬಗಳಿಗೆ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ವಿಬಿ ಜಿ ರಾಮ್ ಜಿ (VB-G RAM G) ಯೋಜನೆಯಡಿ ಗ್ರಾಮೀಣ ರೋಜ್ಗಾರ್ ಗ್ಯಾರಂಟಿ ಕಾರ್ಡ್ ವಿತರಿಸುವ ಜಾಬ್ ಕಾರ್ಡ್ ಮೇಳವನ್ನು ಆಗಸ್ಟ್ 15ರಿಂದ ಸೆಪ್ಟೆಂಬರ್ 15ರವರೆಗೆ ತಾಲ್ಲೂಕಿನದ್ಯಾಂತ ಆಯೋಜಿಸಲಾಗಿದೆ ಎಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮೀನಾರಾಯಣ ಸ್ವಾಮಿ ರವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಅರ್ಹ ಕುಟುಂಬಗಳು ಜಾಬ್ ಕಾರ್ಡ್ ಪಡೆಯಲು ಈ ಅವಧಿಯಲ್ಲಿ ನಡೆಯುವ ಮೇಳದಲ್ಲಿ ಭಾಗವಹಿಸಿ ನೋಂದಣಿ ಮಾಡಿಕೊಳ್ಳಬೇಕು.

ಜಾಬ್ ಕಾರ್ಡ್ ಹೊಂದಿಲ್ಲದ ಅರ್ಹ ಕುಟುಂಬಗಳಿಗೆ ಸ್ಥಳದಲ್ಲೇ ಪರಿಶೀಲಿಸಿ ಹೊಸ ಉದ್ಯೋಗ ಚೀಟಿ ವಿತರಿಸಲಾಗುವುದು.

ಈಗಾಗಲೇ ಜಾಬ್ ಕಾರ್ಡ್ ಹೊಂದಿದ್ದು, ಇ-ಕೆ ವೈ ಸಿ ಪ್ರಕ್ರಿಯೆ ಬಾಕಿ ಇರುವವರು ಈ ಅಭಿಯಾನದ ಮೂಲಕ ಇ-ಕೆ ವೈ ಸಿ ಪೂರ್ಣಗೊಳಿಸಬಹುದು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ತಾಲ್ಲೂಕು ಐ ಇ ಸಿ ಸಂಯೋಜಕರು ಗ್ರಾ ಪಂ ಸಿಬ್ಬಂದಿ ಮನೆ ಮನೆಗೆ ಭೇಟಿ ನೀಡಿ ಯೋಜನೆ ಕುರಿತು ಜಾಗೃತಿ ಮೂಡಿಸಲಿದ್ದಾರೆ. ಸದರಿ ಯೋಜನೆಯಡಿ ಅಕುಶಲ ಕೂಲಿ ಅವಧಿಯನ್ನು 100 ರಿಂದ 125 ದಿನಗಳಿಗೆ ಹೆಚ್ಚಿಸಿ, ಪ್ರತಿದಿನಕ್ಕೆ ಕೂಲಿ ಮೊತ್ತವನ್ನು 370 ರೂ.ಯಿಂದ 382 ರೂ ಗೆ ಹೆಚ್ಚಿಸಲಾಗಿದೆ.

ಆಗಸ್ಟ್ 15ರಿಂದ ಸೆಪ್ಟೆಂಬರ್ 15ರವರೆಗೆ ನಡೆಯುವ ಈ ಜಾಬ್ ಕಾರ್ಡ್ ಮೇಳದ ಸದುಪಯೋಗ ಪಡೆದುಕೊಂಡು ಹೆಚ್ಚಿನ ಸಂಖ್ಯೆಯಲ್ಲಿ ಅರ್ಹರು ಜಾಬ್ ಕಾರ್ಡ್ ಪಡೆದುಕೊಳ್ಳಬೇಕು ಎಂದು ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ

# ಸೈನಿಕರಿಗೆ ಪ್ರತಿಯೊಬ್ಬರೂ ಗೌರವ ಸಲ್ಲಿಸಬೇಕು-ಟಿ.ಎಸ್.ಮೋಹನ್ ಕುಮಾರ್

## ರಾಷ್ಟ್ರನಾಯಕರು, ಮಡಿದ ವೀರಯೋಧರಿಗೆ ನಮನ, ಮಾಜಿ ಸೈನಿಕರಿಗೆ ಅಭಿನಂದನೆ



**ತುಮಕೂರು:** ದೇಶದ ಜನರಿಗೆ ಅನ್ನ ಹಾಕುವ ರೈತರು,ಹಗಲು ರಾತ್ರಿ ದೇಶದ ಗಡಿ ಕಾದು ನಮ್ಮನ್ನು ಸದಾ ಶತೃಗಳಿಂದ ಕಾಪಾಡುತ್ತಿರುವ ವೀರ ಸೈನಿಕರು ಪ್ರಾತಃಸ್ಮರಣೀಯರು,ರೈತರು,ಸೈನಿಕರ ಬಗ್ಗೆ ಎಲ್ಲರೂ ಅಭಿಮಾನ ಮತ್ತು ಗೌರವ ಸಲ್ಲಿಸಬೇಕು ಅಂತಹ ಸಂಸ್ಕಾರ ನಮಗೆ ಮತ್ತು ಇಂದಿನ ಮಕ್ಕಳಿಗೆ ಬರಬೇಕು,ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡಿ ಲಕ್ಷಾಂತರ ಜನ ವೀರಮರಣವನ್ನು ಹೊಂದಿದ್ದಾರೆ,ಗಡಿ ಕಾಯುತ್ತಾ ಶತೃ ರಾಷ್ಟ್ರದ ಗುಂಡಿಗೆ ಬಲಿಯಾದ ವೀರ ಯೋಧರನ್ನು ನಾವು ಪ್ರತಿ ದಿನ ಸ್ಮರಿಸಬೇಕು ಎಂದು ಸಂಕಲ್ಪ ಗ್ರಾಮೀಣ ಮತ್ತು ನಗರಾಭಿವೃದ್ಧಿ ಸಂಘ(ರಿ)ನ ಅಧ್ಯಕ್ಷರಾದ ಟಿ.ಎಸ್.ಮೋಹನ್ ಕುಮಾರ್ ರವರು ತಿಳಿಸಿದರು.

ಅವರು ಜಯನಗರದ ಬನಶಂಕರಿ ದೇವಾಲಯದ ಸಭಾಂಗಣದಲ್ಲಿ ಆಯೋಜಿಸಿದ್ದ 80ನೇ ಸ್ವಾಂತಂತ್ರ್ಯ ದಿನಾಚರಣೆ ಮತ್ತು ಮಾಜಿ ಸೈನಿಕರಿಗೆ ಸನ್ಮಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದ ಕೆ.ಜಿ.ರಂಗಸ್ವಾಮಿರವರು ನಮ್ಮ ದೇಶದ ಆಸ್ತಿ ರೈತ ಮತ್ತು ಸೈನಿಕ,ಸೈನಿಕರಿಗೆ ಸರ್ಕಾರ ವಿಶಾಲ ಹೃದಯದಿಂದ ಕೊಡುಗೆಗಳನ್ನು ನೀಡಬೇಕು,ಸದಾ ಕಾಲ ಶತೃಗಳಿಂದ ನಮ್ಮನ್ನು ಕಾಪಾಡುತ್ತಿರುವ ಸೈನಿಕರು ನಮ್ಮ ನಿಜವಾದ ಹೀರೋಗಳು ಎಂದು ತಿಳಿಸಿದರು. ನಿರ್ಭಯ ಮಹಿಳಾ ಜಾಗೃತಿ ವೇದಿಕೆಯ ಉಪಾಧ್ಯಕ್ಷರಾದ ಶ್ರೀಮತಿ ಸುನಂದಮ್ಮನವರು ಮಾತನಾಡುತ್ತಾ ಕೊರೆಯುವ ಚಳಿಯಲ್ಲಿ ದಿನದ 24 ಗಂಟೆಗಳ ಕಾಲ ಎಚ್ಚರವಿದ್ದು ದೇಶದ ಗಡಿ ಕಾಯುವ ಸೈನಿಕರು ನಮ್ಮ ಆಸ್ತಿ,ಅವರ ನಿಸ್ವಾರ್ಥಸೇವೆ,ಸೇವಾ ಮನೋಭಾವನೆ ನಮ್ಮ ಯುವಜನರಿಗೆ ಸ್ಪೂರ್ತಿ,ತಾಯಿಗೆ ಕೊಡುವ ಗೌರವವನ್ನು ನಮ್ಮ ಸೈನಿಕರಿಗೆ ಕೊಡಿ,ದೇಶದ ಯುವಕರು,ಯುವತಿಯರು ಸೈನ್ಯಕ್ಕೆ ಮತ್ತು ಪೋಲೀಸ್ ಇಲಾಖೆಗೆ ಹೆಚ್ಚಾಗಿ ಸೇರಿ ದೇಶ ಸೇವೆ ಮಾಡಿ ಎಂದು ಕರೆ ನೀಡಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಮಾಜಿ ಸೈನಿಕರಾದ ಜಿ.ಆರ್.ಸಿದ್ಧಗಂಗಯ್ಯನವರು ರಾಜ್ಯದ ಯುವಕರು ಹೆಚ್ಚಾಗಿ ಸೈನ್ಯಕ್ಕೆ ಸೇರಬೇಕು,ತುಮಕೂರಿನಲ್ಲಿ ನಮ್ಮ ಮಾಜಿ ಸೈನಿಕರ ಸಂಘದಿಂದ 3 ತಿಂಗಳುಗಳ ಕಾಲ ಊಟ,ವಸತಿ ಸೇರಿದಂತೆ ತರಬೇತಿ ನೀಡುತ್ತಿದ್ದೇವೆ ಯುವಕರು,ಯುವತಿಯವರು ಇದನ್ನು ಸದುಪಯೋಗ ಪಡಿಸಿಕೊಂಡಿ ಸೈನ್ಯ ಮತ್ತು ಪೋಲೀಸ್ ಇಲಾಖೆಗೆ ಸೇರಿ ಎಂದು ಮನವಿ ಮಾಡಿದರು. ಮಾಜಿ ಸೈನಿಕರಾದ ಅನಂತಪದ್ಮನಾಭರವರು ಮಾತನಾಡುತ್ತಾ ನಾನು ಏರ್ ವಿಂಗ್ ನಲ್ಲಿ ಸೇವೆ ಸಲ್ಲಿಸಿ ನಿವೃತ್ತನಾದ ನಂತರವೂ 7 ಬಹುರಾಷ್ಟ್ರೀಯ ಕಂಪೆನಿಗಳಲ್ಲಿ ಅಧಿಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದೇವೆ,ಸೈನ್ಯದಲ್ಲಿ ಉತ್ತಮ ಸಂಬಳ,ಪಿಂಚಣಿ ಎಲ್ಲವೂ ಇದೆ ಯುವಕರು ಭೂಸೇವೆ,ವಾಯುಸೇವೆ,ನೌಕಾಸೇನೆಗೆ ಸೇರಿ ದೇಶ ಸೇವೆ ಮಾಡಿ ಪೋಷಕರು ಮಕ್ಕಳನ್ನು ಸೈನ್ಯಕ್ಕೆ ಸೇರಿಸಿ ಎಂದು ಮನವಿ ಮಾಡಿದರು.

ಶ್ರೀಮತಿ ಗೀತಾನಾಗೇಶ್ ರವರು ಪ್ರಾಸ್ತಾವಿಕ ನುಡಿಗಳನ್ನಾಡಿದರು,ಶ್ರೀಮತಿ ಜ್ಯೋತಿಆಚಾರ್ಯ ನಿರೂಪಿಸಿದರು,ಶ್ರೀಮತಿ ನಂದಿನಿ ಸ್ವಾಗತಿಸಿ,ಚೇತನ್ ರವರು ವಂದಿಸಿದರು.ಈ ಸಂದರ್ಭದಲ್ಲಿ ಶೈಲಜಾ,ಅಭಿಷೇಕ್,ಭಕ್ತವತ್ಸಲ,ಲತಾ,ಮಂಜುಳಾರಾವ್ ಮುಂತಾದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಕಲೆಯ ಉಳಿವು, ಕಲಾವಿದರ ಬದುಕಿಗೆ ಭದ್ರತೆ ಮುಖ್ಯ: ಈಶ್ವರ ಖಂಡ್ರೆ



**ಬೆಂಗಳೂರು:** ನಮ್ಮ ನಾಡಿನ ಕಲೆ, ಸಂಸ್ಕೃತಿ ಹಾಗೂ ಜಾನಪದ ಪರಂಪರೆಯನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ. ಕಲಾವಿದರಿಗೆ ಆರ್ಥಿಕ ಭದ್ರತೆ ಕಲ್ಪಿಸುವುದರ ಜೊತೆಗೆ ಅವರ ಪ್ರತಿಭೆಗೆ ಸೂಕ್ತ ಪ್ರೋತ್ಸಾಹ ನೀಡಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಹೇಳಿದರು.

ನಗರದ ಪೂಜ್ಯ ಚನ್ನಬಸವ ಪಟ್ಟದ್ದೇವರು ಜಿಲ್ಲಾ ರಂಗಮಂದಿರದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಿದ್ದ ?ಹರ್ ಘರ್ ತಿರಂಗಾ? ಹಾಗೂ ಸ್ವಾತಂತ್ರ್ಯ ?ಿ ದಿನಾಚರಣೆ ಅಂಗವಾಗಿ ಸಾಂಸ್ಕೃತಿಕ ಕಾರ್ಯಕ್ರಮ ಮತ್ತು ಜಿಲ್ಲೆಯ ಕಲಾವಿದರಿಗೆ ಗುರುತಿನ ಚೀಟಿ ವಿತರಣೆ ಸಮಾರಂಭವನ್ನು ಸಾಂಪ್ರದಾಯಿಕವಾಗಿ ಜಾನಪದ ಶೈಲಿಯಲ್ಲಿ ಡೊಳ್ಳು ಬಾರಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಜಾನಪದ ಸಾಹಿತ್ಯವು ನಮ್ಮ ಪೂರ್ವಜರಿಂದ ಬಾಯಿಂದ ಬಾಯಿಗೆ, ತಲೆಮಾರಿನಿಂದ ತಲೆಮಾರಿಗೆ ಹರಿದುಬಂದಿರುವ ಅಮೂಲ್ಯ ಪರಂಪರೆಯಾಗಿದೆ. ನಮ್ಮ ಹಿರಿಯರು ಹಂತಿ ಪದ, ಸೋಬಾನ ಪದ, ತತ್ವಪದ ಸೇರಿದಂತೆ ಹಲವು ಜಾನಪದ ಸಾಹಿತ್ಯ ಪ್ರಕಾರಗಳನ್ನು ರಚಿಸಿ, ಹಾಡುವ ಮೂಲಕ ಸಂಸ್ಕೃತಿಯನ್ನು ಜೀವಂತವಾಗಿಟ್ಟಿದ್ದಾರೆ. ಪ್ರತಿಯೊಬ್ಬರೂ ಕಲಾವಿದರಾಗಲು ಸಾಧ್ಯವಿಲ್ಲ. ಕಲೆ ಎಂಬುದು ದೇವರು ಕೊಟ್ಟ ವರವಾಗಿದ್ದು, ಅಂತಹ ಕಲಾವಿದರನ್ನು ಗೌರವಿಸಿ ಪ್ರೋತ್ಸಾಹಿಸುವುದು ಸಮಾಜದ ಜವಾಬ್ದಾರಿಯಾಗಿದೆ ಎಂದರು.

ಜಿಲ್ಲೆಯಲ್ಲಿ 1,406 ಕಲಾವಿದರಿಗೆ ಗುರುತಿನ ಚೀಟಿ ವಿತರಿಸುವ ಕಾರ್ಯ ಶ್ಲಾಘನೀಯವಾಗಿದೆ. ಇದರಿಂದ ಜಿಲ್ಲೆಯ ಕಲಾವಿದರನ್ನು ಗುರುತಿಸುವುದರ ಜೊತೆಗೆ ಸರ್ಕಾರದ ವಿವಿಧ ಸೌಲಭ್ಯಗಳನ್ನು ಅರ್ಹ ಕಲಾವಿದರಿಗೆ ತಲುಪಿಸಲು ಸಹಕಾರಿಯಾಗಲಿದೆ ಎಂದು ಸಚಿವರು ಹೇಳಿದರು. ಆಧುನಿಕತೆಯ ಭರಾಟೆಯಲ್ಲಿ ಯುವಕರು, ಯುವತಿಯರು ಸೇರಿದಂತೆ ಬಹುತೇಕರು ಆಧುನಿಕ ಜೀವನಶೈಲಿಯತ್ತ ಹೆಚ್ಚು ಆಕರ್ಷಿತರಾಗುತ್ತಿದ್ದಾರೆ.

ಇದರ ಪರಿಣಾಮವಾಗಿ ನಮ್ಮ ಸಾಂಪ್ರದಾಯಿಕ ಕಲೆ, ಸಂಸ್ಕೃತಿ ಹಾಗೂ ಮೌಲ್ಯಗಳು ನಿಧಾನವಾಗಿ ಮರೆಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಇದನ್ನು ತಡೆಯಲು ಜಾನಪದ ಗೀತೆಗಳು, ತತ್ವಪದಗಳು ಹಾಗೂ ಸತ್ವಗುಣದಂತಹ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಜನರು ಹೆಚ್ಚು ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ವಸತಿ ಸೌಲಭ್ಯವಿಲ್ಲದ ಕಲಾವಿದರು ಅರ್ಜಿ ಸಲ್ಲಿಸಬೇಕು. ಕಲಾವಿದರ ಬಹುದಿನಗಳ ಬೇಡಿಕೆಯಾಗಿರುವ ?ಕಲಾವಿದರ ಬಡಾವಣೆ? ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದು. ಕಲಾವಿದರ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಬದ್ಧವಾಗಿದೆ ಎಂದು ಈಶ್ವರ ಖಂಡ್ರೆ ಭರವಸೆ ನೀಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಲಬುರಗಿ ವಿಭಾಗದ ಜಂಟಿ ನಿರ್ದೇಶಕ ಬಸವರಾಜ ಹೂಗಾರ ಮಾತನಾಡಿ, ಕರ್ನಾಟಕ ಸರ್ಕಾರ ರಚಿಸಿರುವ 32 ಟ್ರಸ್ಟ್‌ಗಳ ಪೈಕಿ ಬೀದರ್ ಜಿಲ್ಲೆಯಲ್ಲಿ ಜಯದೇವಿ ತಾಯಿ ಲಿಗಾಡೆ ಹಾಗೂ ಪ್ರಭುರಾವ್ ಕಂಬಳಿವಾಲೆ ಟ್ರಸ್ಟ್‌ಗಳು ರಚನೆಯಾಗಿರುವುದು ಜಿಲ್ಲೆಯ ಜನತೆಗೆ ಹೆಮ್ಮೆಯ ಸಂಗತಿಯಾಗಿದೆ ಎಂದರು. ಬೀದರ್ ಶರಣರ ನಾಡಾಗಿದ್ದು, ವಚನ ಸಾಹಿತ್ಯ ಹಾಗೂ ಶರಣ ಪರಂಪರೆಗೆ ಜಿಲ್ಲೆಯಲ್ಲಿ ವಿಶೇಷ ಸ್ಥಾನವಿದೆ.

ಈ ಶ್ರೀಮಂತ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಹಾಗೂ ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಸರ್ಕಾರ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಉದ್ದೇಶಿಸಿದೆ ಎಂದು ಹೇಳಿದರು.

ಸಾಮಾಜಿಕ ಚಳವಳಿಯ ಮೂಲಕ ವಚನ ಸಾಹಿತ್ಯದ ಸಂದೇಶವನ್ನು ಜನರಿಗೆ ತಲುಪಿಸುವ ಅಗತ್ಯವಿದೆ. ಈ ಹಿನ್ನೆಲೆಯಲ್ಲಿ ಮುಂದಿನ ದಿನಗಳಲ್ಲಿ ಬೀದರ್ ಜಿಲ್ಲೆಯಲ್ಲಿ ?ವಚನ ಸಂಗೀತ ಉತ್ಸವ? ಆಯೋಜಿಸಲು ಸರ್ಕಾರ ಉದ್ದೇಶಿಸಿದೆ.

ವಚನಗಳ ಸಾರವನ್ನು ಸಂಗೀತದ ಮೂಲಕ ಜನರಿಗೆ ತಲುಪಿಸುವುದರ ಜೊತೆಗೆ ಯುವಜನರನ್ನು ಸಾಹಿತ್ಯ, ಸಂಸ್ಕೃತಿ ಹಾಗೂ ಶರಣ ಪರಂಪರೆಯತ್ತ ಸೆಳೆಯುವುದು ಉತ್ಸವದ ಉದ್ದೇಶವಾಗಿದೆ ಎಂದು ತಿಳಿಸಿದರು.

# ಶೀಘ್ರದಲ್ಲೇ ಸಂಚಾರ ಆರಂಭಿಸಲಿವೆ 50 ವಂದೇ ಭಾರತ್ ರೈಲುಗಳು



**ನವದೆಹಲಿ:** ಐವತ್ತಕ್ಕೂ ಹೆಚ್ಚು ವಂದೇ ಭಾರತ್ ಸ್ಲೀಪರ್ ರೈಲುಗಳ ಸೇವೆಯನ್ನು ಆರಂಭಿಸಲು ಭಾರತೀಯ ರೈಲ್ವೆ ಇಲಾಖೆ ತೀರ್ಮಾನಿಸಿದೆ. ಚೆನ್ನೈನ ಇಂಟಿಗ್ರಲ್ ಕೋಚ್ ಫ್ಯಾಕ್ಟರಿ (ಐಸಿಎಫ್) ಯಲ್ಲಿ 24 ಬೋಗಿಗಳನ್ನು ಒಳಗೊಂಡಿರುವ 50 ವಂದೇ ಭಾರತ್ ಸ್ಲೀಪರ್ ರೈಲುಸೆಟ್‌ಗಳನ್ನು ತಯಾರಿಸಲಾಗುತ್ತಿದೆ.

ರಾತ್ರಿ ಪ್ರಯಾಣ ಮತ್ತು ಇಂಟರ್‌ಸಿಟಿ ಪ್ರಯಾಣಗಳನ್ನು ಕೈಗೊಳ್ಳುವ ಪ್ರಯಾಣಿಕರಿಗೆ ವೇಗವಾದ, ಹೆಚ್ಚು ಆರಾಮದಾಯಕ ಮತ್ತು ಆಧುನಿಕ ಪ್ರಯಾಣ ಆಯ್ಕೆಗಳನ್ನು ನೀಡುವ ಭಾರತೀಯ ರೈಲ್ವೆಯ ವಿಶಾಲ ಪ್ರಯತ್ನದ ಭಾಗವಾಗಿ ಈ ಕ್ರಮ ವಹಿಸಲಾಗಿದೆ.

ಯೋಜಿತ ವಿಸ್ತರಣೆಯೊಂದಿಗೆ, ವಂದೇ ಭಾರತ್ ಸ್ಲೀಪರ್ ರೈಲುಗಳು ದೇಶದ ಪ್ರೀಮಿಯಂ ರೈಲು ಪ್ರಯಾಣ ವಿಭಾಗದಲ್ಲಿ ದೊಡ್ಡ ಪಾತ್ರವನ್ನು ವಹಿಸುವ ನಿರೀಕ್ಷೆಯಿದೆ.ಐಸಿಎಫ್ ಜನರಲ್ ಮ್ಯಾನೇಜರ್ ಮನೀಶ್ ಅಗರ್ವಾಲ್ ಅವರ ಪ್ರಕಾರ, ಸ್ಥಳೀಯ 24–ಬೋಗಿಗಳ ವಂದೇ ಭಾರತ್ ಸ್ಲೀಪರ್ ರೈಲುಸೆಟ್‌ಗಳ ಉತ್ಪಾದನಾ ರೇಖಾಚಿತ್ರಗಳು ಪೂರ್ಣಗೊಂಡಿವೆ. ಈ ವಿನ್ಯಾಸಗಳು ಕೋಚ್ ರಚನೆ, ಕೋಚ್‌ಗಳನ್ನು ಸಂಪರ್ಕಿಸಲು ಬಳಸುವ ವ್ಯವಸ್ಥೆಗಳು ಮತ್ತು ಅವುಗಳ ಕೆಳಗೆ ಅಳವಡಿಸಲಾಗುವ ಉಪಕರಣಗಳನ್ನು ಒಳಗೊಂಡಿವೆ.

50 ರೈಲು ಸೆಟ್‌ಗಳನ್ನು ಯೋಜಿಸಲಾಗಿದೆ:ಐಸಿಎಫ್ ಚೆನ್ನೈ 50 ವಂದೇ ಭಾರತ್ ಸ್ಲೀಪರ್ ರೈಲು ಸೆಟ್‌ಗಳನ್ನು ತಯಾರಿಸಲಿದೆ.ಪ್ರತಿ ರೈಲಿನಲ್ಲಿ 24 ಕೋಚ್‌ಗಳು: ಮುಂಬರುವ ರೈಲು ಸೆಟ್‌ಗಳು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ 16–ಕೋಚ್ ಸ್ಲೀಪರ್ ರೈಲಿಗೆ ಹೋಲಿಸಿದರೆ 24 ಕೋಚ್‌ಗಳನ್ನು ಹೊಂದಿರುತ್ತವೆ.

ಹೆಚ್ಚಿನ ಪ್ರಯಾಣಿಕರ ಸಾಮರ್ಥ್ಯ:24–ಕೋಚ್ ರೈಲು 16–ಕೋಚ್ ರೈಲಿಗಿಂತ ಸುಮಾರು 1.5 ಪಟ್ಟು ಹೆಚ್ಚು ಪ್ರಯಾಣಿಕರನ್ನು ಸಾಗಿಸುವ ನಿರೀಕ್ಷೆಯಿದೆ.

ಉತ್ಪಾದನಾ ರೇಖಾಚಿತ್ರಗಳು ಸಿದ್ಧವಾಗಿವೆ:ಕೋಚ್ ರಚನೆ, ಕೋಚ್ ಸಂಪರ್ಕಗಳು ಮತ್ತು ಅಂಡರ್‌ಫ್ರೇಮ್ ಉಪಕರಣಗಳನ್ನು ಒಳಗೊಂಡ ವಿನ್ಯಾಸಗಳು ಪೂರ್ಣಗೊಂಡಿವೆ.ಹೆಚ್ಚಿನ ಮಾರ್ಗಗಳನ್ನು ನಿರೀಕ್ಷಿಸಲಾಗಿದೆ: ಹೆಚ್ಚುವರಿ ರೈಲು ಸೆಟ್‌ಗಳು ರೈಲ್ವೆಗಳು ಹೆಚ್ಚು ದೂರದ ಮಾರ್ಗಗಳಲ್ಲಿ ವಂದೇ ಭಾರತ್ ಸ್ಲೀಪರ್ ಸೇವೆಗಳನ್ನು ಪರಿಗಣಿಸಲು ಅನುವು ಮಾಡಿಕೊಡುತ್ತದೆ.

ಸ್ಲೀಪರ್ ವಸತಿ ಸೌಕರ್ಯವು ರಾತ್ರಿಯ ಮತ್ತು ದೀರ್ಘ ಪ್ರಯಾಣಕ್ಕಾಗಿ ವೇಗವಾದ ಮತ್ತು ಹೆಚ್ಚು ಆರಾಮದಾಯಕ ಆಯ್ಕೆಯನ್ನು ಒದಗಿಸುವ ಗುರಿಯನ್ನು ಹೊಂದಿದೆ.ಕೋಚ್ ಸಂಯೋಜನೆ ದೃಢಪಟ್ಟಿಲ್ಲ: ಭಾರತೀಯ ರೈಲ್ವೆ ಇನ್ನೂ ಅಧಿಕೃತವಾಗಿ ಅಂತಿಮ ಕೋಚ್ ಸಂಯೋಜನೆಯನ್ನು ಘೋಷಿಸಿಲ್ಲ.

# ಭಾರತದ ವೋಟರ್ ಐಡಿ ಮಾದರಿಗೆ ಡೊನಾಲ್ಡ್ ಟ್ರಂಪ್ ಫಿದಾ



**ನವದೆಹಲಿ:** ಭಾರತದಲ್ಲಿ ನಾಗರಿಕರಿಗೆ ನೀಡಲಾಗಿರುವ ಮತದಾರರ ಗುರುತಿನ ಚೀಟಿ ಬಗ್ಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಫಿದಾ ಆಗಿದ್ದಾರೆ. ಅಮೆರಿಕದಲ್ಲಿ ಮತದಾನಕ್ಕೆ ಕಡ್ಡಾಯ ಫೋಟೋ ಗುರುತಿನ ಚೀಟಿ ಹಾಗೂ ಮತದಾರರ ನೋಂದಣಿಗೆ ಪೌರತ್ವದ ದಾಖಲೆ ಅಗತ್ಯವಿರಬೇಕು ಎಂದು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಮ್ಮ ಟ್ರೂಥ್ ಸೋಷಿಯಲ್ ಮೀಡಿಯಾ ಪೋಸ್ಟ್‌ನಲ್ಲಿ ಒತ್ತಾಯಿಸಿದ್ದಾರೆ. ಭಾರತದ ಚುನಾವಣಾ ವ್ಯವಸ್ಥೆಯನ್ನು ಉಲ್ಲೇಖಿಸಿರುವ ಟ್ರಂಪ್, ಅಮೆರಿಕದಲ್ಲಿ ಚುನಾವಣಾ ಪ್ರಕ್ರಿಯೆಯನ್ನು ಇನ್ನಷ್ಟು ಬಿಗಿಗೊಳಿಸುವ ಸೇವ್ ಅಮೆರಿಕಾ ಆ?ಯಕ್ಟ್ ಜಾರಿಗೆ ತರಲು ಅಮೆರಿಕ ಸಂಸತ್‌ಗೆ ಕರೆ ನೀಡಿದ್ದಾರೆ.

ಭಾರತದ ಕಳೆದ ಲೋಕಸಭಾ ಚುನಾವಣೆಯ ಉದಾಹರಣೆ ನೀಡಿರುವ ಟ್ರಂಪ್, ಸುಮಾರು 64.6 ಕೋಟಿ ಮತದಾರರು ಮತ ಚಲಾಯಿಸಿದ್ದು, ಶೇಕಡಾ ಒಂದಕ್ಕಿಂತಲೂ ಕಡಿಮೆ ಮತದಾರರು ಅಂಚೆ ಮತಪತ್ರದ ಮೂಲಕ ಮತ ಚಲಾಯಿಸಿದ್ದರು ಎಂದು ಹೇಳಿದ್ದಾರೆ. ಅಲ್ಲದೆ, ಮತದಾರರು ಮಾನ್ಯ ಫೋಟೋ ಗುರುತಿನ ದಾಖಲೆ ಹೊಂದಿದ್ದರು ಎಂದು ಅವರು ತಮ್ಮ ಪೋಸ್ಟ್‌ನಲ್ಲಿ ಉಲ್ಲೇಖಿಸಿದ್ದಾರೆ.

ಟ್ರಂಪ್ ಅವರ ಪ್ರಕಾರ ಭಾರತದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು, ಅಮೆರಿಕದ ಚುನಾವಣೆಯಲ್ಲಿ ಮಾನ್ಯ ಫೋಟೋ ಐಡಿ ಇಲ್ಲದೆ ಹೇಗೆ ಮತದಾನ ನಡೆಯುತ್ತದೆ ಎಂಬ ಪ್ರಶ್ನೆಯನ್ನು ಅಮೆರಿಕದ ಆಡಳಿತದ ಮುಂದಿಟ್ಟಿದ್ದರು. ಈ ವಿಚಾರವನ್ನು ಉಲ್ಲೇಖಿಸಿರುವ ಟ್ರಂಪ್, ಅಮೆರಿಕದಲ್ಲೂ ಮತದಾರರ ಗುರುತನ್ನು ಖಚಿತಪಡಿಸುವ ವ್ಯವಸ್ಥೆ ಅಗತ್ಯ ಎಂದು ಪ್ರತಿಪಾದಿಸಿದ್ದಾರೆ. ಸೇವ್ ಅಮೆರಿಕಾ ಆ?ಯಕ್ಟ್ ಎನ್ನುವುದು ಅಮೆರಿಕದ ಫೆಡರಲ್ ಚುನಾವಣೆಗಳಲ್ಲಿ ಮತದಾರರ ಅರ್ಹತೆಯನ್ನು ಮತ್ತಷ್ಟು ಕಟ್ಟುನಿಟ್ಟಾಗಿಸುವ ಉದ್ದೇಶ ಹೊಂದಿರುವ ಮಸೂದೆಯಾಗಿದೆ. ಮತದಾರರು ನೋಂದಣಿ ಮಾಡಿಕೊಳ್ಳುವ ಸಂದರ್ಭದಲ್ಲಿ ಅಮೆರಿಕದ ಪೌರತ್ವದ ಪುರಾವೆ ನೀಡಬೇಕು ಹಾಗೂ ಫೆಡರಲ್ ಚುನಾವಣೆಯಲ್ಲಿ ಮತ ಚಲಾಯಿಸುವಾಗ ಮಾನ್ಯ ಗುರುತಿನ ದಾಖಲೆ ತೋರಿಸಬೇಕು ಎಂಬುದು ಮಸೂದೆಯ ಪ್ರಮುಖ ಅಂಶವಾಗಿದೆ. ಮಸೂದೆಯು ಮತದಾರರ ಪಟ್ಟಿಗಳಿಂದ ಅಮೆರಿಕದ ನಾಗರಿಕರಲ್ಲದವರ ಹೆಸರುಗಳನ್ನು ತೆಗೆದುಹಾಕಲು ರಾಜ್ಯಗಳಿಗೆ ನಿರ್ದೇಶನ ನೀಡುವ ಪ್ರಸ್ತಾವವನ್ನೂ ಒಳಗೊಂಡಿದೆ.ಅಂಚೆ ಮತದಾನದ ಮೇಲೆ ನಿರ್ಬಂಧ ವಿಧಿಸುವ ಪ್ರಸ್ತಾವ. ಅಂಚೆ ಮತದಾನದ ಮೇಲೂ ನಿರ್ಬಂಧ ವಿಧಿಸುವ ಪ್ರಸ್ತಾವವಿದೆ. ಅನಾರೋಗ್ಯ, ಅಂಗವೈಕಲ್ಯ, ಮಿಲಿಟರಿ ಸೇವೆ ಅಥವಾ ಪ್ರಯಾಣದಂತಹ ನಿರ್ದಿಷ್ಟ ಸಂದರ್ಭಗಳಲ್ಲಿ ಮಾತ್ರ ಅಂಚೆ ಮತದಾನಕ್ಕೆ ಅವಕಾಶ ನೀಡುವ ಉದ್ದೇಶವನ್ನು ಮಸೂದೆ ಹೊಂದಿದೆ ಎಂದು ಶ್ವೇತಭವನ ಹೇಳಿದೆ.

ಟ್ರಂಪ್ ಅವರ ನಿಲುವಿಗೆ ಅಮೆರಿಕದ ಭಾರತದ ರಾಯಭಾರಿ ಸೆರ್ಗಿಯೋ ಗೋರ್ ಕೂಡ ಬೆಂಬಲ ವ್ಯಕ್ತಪಡಿಸಿದ್ದಾರೆ. ಭಾರತದ 2024ರ ಲೋಕಸಭಾ ಚುನಾವಣೆಯನ್ನು ಮತದಾರರ ಗುರುತಿನ ದೃಢೀಕರಣದ ಉದಾಹರಣೆಯಾಗಿ ಪ್ರಸ್ತಾಪಿಸಿರುವ ಅವರು, ಭಾರತದಲ್ಲಿ ಕೋಟ್ಯಂತರ ಮತದಾರರಿಗೆ ಗುರುತಿನ ದಾಖಲೆ ಕಡ್ಡಾಯವಾಗಿತ್ತು ಎಂದು ಹೇಳಿದ್ದಾರೆ.

# ವಿಧಾನಸಭೆ ಡೆಪ್ಯೂಟಿ ಸ್ಪೀಕರ್ ಆಗಿ ಮಂಕಾಳ ವೈದ್ಯ ಪರಿಷತ್ ಉಪಸಭಾಪತಿಯಾಗಿ ಉಮಾಶ್ರೀ ಅವಿರೋಧ ಆಯ್ಕೆ

**ಬೆಂಗಳೂರು:** ರಾಜ್ಯ ವಿಧಾನಸಭೆಯ ಡೆಪ್ಯೂಟಿ ಸ್ಪೀಕರ್ ಆಗಿ ಭಟ್ಕಳ ಶಾಸಕ ಮಂಕಾಳ ವೈದ್ಯ ಮತ್ತು ವಿಧಾನಪರಿಷತ್ ಉಪಸಭಾಪತಿಯಾಗಿ ಉಮಾಶ್ರೀ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ನಿನ್ನೆ ಉಪಸಭಾಧ್ಯಕ್ಷ ಸ್ಥಾನಕ್ಕೆ ಮಂಕಾಳ ವೈದ್ಯ ಮತ್ತು ಉಪಸಭಾಪತಿ ಸ್ಥಾನಕ್ಕೆ ಉಮಾಶ್ರೀ ಮಾತ್ರ ನಾಮಪತ್ರ ಸಲ್ಲಿಸಿದ್ದರು. ಬೇರೆ ಯಾರೊಬ್ಬರು ನಾಮಪತ್ರ ಸಲ್ಲಿಸದ ಕಾರಣ ಇಬ್ಬರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಇಂದು ಬೆಳಗ್ಗೆ ವಿಧಾನಸಭೆಯಲ್ಲಿ ಉಪಸಭಾಧ್ಯಕ್ಷ ಸ್ಥಾನಕ್ಕೆ ಶಾಸಕ ಮಂಕಾಳ ವೈದ್ಯ ಅವರ ಹೆಸರನ್ನು ಪ್ರಸ್ತಾಪಿಸಲಾಯಿತು. ಬಳಿಕ ಸಿಎಂ ಡಿ.ಕೆ.ಶಿವಕುಮಾರ್ ಮತ್ತು ಸಚಿವ ಲಕ್ಷ್ಮಣ್ ಸವದಿ ಅವರು ಮಂಕಾಳು ವೈದ್ಯ ಅವರ ಹೆಸರನ್ನು ಅನುಮೋದಿಸಿದರು.

ಬಳಿಕ ಸದನ ಎಲ್ಲಾ ಸದಸ್ಯರ ಸರ್ವಾನುಮತದಿಂದ ಮಂಕಾಳ ವೈದ್ಯ ಅವರು ಉಪಸಭಾಧ್ಯಕ್ಷರಾಗಿ ಆಯ್ಕೆಯಾದರು. ಸ್ಪೀಕರ್ ಜಿ.ಎಸ್. ಪಾಟೀಲ್ ಅವರು ಧ್ವನಿ ಮತದ ನಂತರ ವೈದ್ಯ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಿದ್ದಾರೆ ಎಂದು ಘೋಷಿಸಿದರು.

ಉತ್ತರ ಕನ್ನಡ: ಉಪಸಭಾಪತಿ ಸ್ಥಾನ ಕೊಟ್ಟರೂ ತಣಿಯದ ಮಂಕಾಳ ವೈದ್ಯ ಅಸಮಾಧಾನ! ಕೆಲವು ದಿನಗಳ ಹಿಂದೆ





ಶಿವಕುಮಾರ್ ನೇತೃತ್ವದ ಸಚಿವ ಸಂಪುಟ ವಿಸ್ತರಣೆಯಲ್ಲಿ ರುದ್ರಪ್ಪ ಲಮಾಣಿ ಅವರು ಸೇರ್ಪಡೆಗೊಂಡ ನಂತರ ರಾಜೀನಾಮೆ ನೀಡಿದ ನಂತರ ಉಪಸಭಾಪತಿ ಸ್ಥಾನ ಖಾಲಿಯಾಗಿತ್ತು. ಈ ಹಿಂದೆ ಕಾಂಗ್ರೆಸ್ ಶಾಸಕ ಎ.ಎಸ್. ಪೊನ್ನಣ್ಣ ಅವರನ್ನು ಉಪಸಭಾಪತಿ ಹುದ್ದೆಗೆ ಪಕ್ಷದ ನಾಮನಿರ್ದೇಶಿತರನ್ನಾಗಿ ಹೆಸರಿಸಿತ್ತು. ಆದರೆ ನಂತರ ಅವರನ್ನು ಕ್ಯಾಬಿನೆಟ್ ಸಚಿವರ ಸ್ಥಾನಮಾನದೊಂದಿಗೆ ಸಿಎಂ ಅವರ ರಾಜಕೀಯ ಕಾರ್ಯದರ್ಶಿಯಾಗಿ ನೇಮಿಸಲಾಯಿತು.. ನಂತರ ಸಿಎಂ ಮತ್ತು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಉಪ ಸಭಾಧ್ಯಕ್ಷರ ಪೀಠದಲ್ಲಿ ಕೂರಿಸಿದರು.ಕರ್ನಾಟಕ ವಿಧಾನ ಪರಿಷತ್ತಿನ ಉಪಾಧ್ಯಕ್ಷೆಯಾಗಿ ಕಾಂಗ್ರೆಸ್ ಎಂಎಲ್‌ಸಿ ಉಮಾಶ್ರೀ ಮಂಗಳವಾರ ಸರ್ವಾನುಮತದಿಂದ ಆಯ್ಕೆಯಾದರು. ಉಮಾಶ್ರೀ ಸೋಮವಾರ ನಾಮಪತ್ರ ಸಲ್ಲಿಸಿದ್ದರು. ಉಮಾಶ್ರೀ ತುಮಕೂರು ಜಿಲ್ಲೆಯ ತಿಪಟೂರು ತಾಲ್ಲೂಕಿನ ನವನಕರ್ ಗ್ರಾಮದವರಾಗಿದ್ದಾರೆ. 1957 ರಲ್ಲಿ ಜನಿಸಿದ ಉಮಾಶ್ರೀ ತೀವ್ರ ಬಡತನದ ಹಿನ್ನೆಲೆಯಿಂದ ಬಂದವರು, ಎಸ್‌ಎಸ್‌ಎಲ್‌ಸಿ ವರೆಗೆ ಮಾತ್ರ ಅಧ್ಯಯನ ಮಾಡಿದ್ದರು,, ಆದರೆ ನಂತರ ರಾಜ್ಯಶಾಸ್ತ್ರದಲ್ಲಿ ಎಂಎಸ್ಸಿ ಪಡೆದರು. ವಿಧಾನ ಪರಿಷತ್ ಉಪಸಭಾಪತಿ ಹುದ್ದೆಗೆ ಎಂಎಲ್‌ಸಿ ಉಮಾಶ್ರೀ ನಾಮಪತ್ರ ಸಲ್ಲಿಕೆ!

ಅವರು 2001 ರಲ್ಲಿ ವಿಧಾನ ಪರಿಷತ್ತಿಗೆ ನಾಮನಿರ್ದೇಶನಗೊಂಡರು ಮತ್ತು 2007 ರವರೆಗೆ ಸೇವೆ ಸಲ್ಲಿಸಿದರು. ಅವರು 2008 ರ ವಿಧಾನಸಭಾ ಚುನಾವಣೆಯಲ್ಲಿ ತೇರದಾಳದಿಂದ ಸ್ಪರ್ಧಿಸಿ ಸೋತರು, ನಂತರ 2013 ರಲ್ಲಿ ಗೆದ್ದು ಸಿದ್ದರಾಮಯ್ಯ ಸಂಪುಟದಲ್ಲಿ ಸಚಿವರಾದರು. ಉಮಾಶ್ರೀ ಅವರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಅಂಗವಿಕಲರ ಸಬಲೀಕರಣ, ಹಿರಿಯ ನಾಗರಿಕರ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಖಾತೆಗಳನ್ನು ನಿರ್ವಹಿಸಿದರು ಮತ್ತು 2016 ರಲ್ಲಿ ಅವರ ಇಲಾಖೆಯ ಕಾರ್ಯಕ್ಷಮತೆಗಾಗಿ ಅವರನ್ನು ಗೌರವಿಸಲಾಯಿತು.

ಪರಿಷತ್ತಿನಲ್ಲಿ ಉಮಾಶ್ರೀ ಅವರನ್ನು ಅಭಿನಂದಿಸಿದ ಸಭಾನಾಯಕಿ ಯತೀಂದ್ರ ಸಿದ್ದರಾಮಯ್ಯ, ಬಡತನ ಮತ್ತು ಹಲವಾರು ಸವಾಲುಗಳನ್ನು ಮೆಟ್ಟಿ ನಿಂತ ನಟಿ ಮತ್ತು ರಾಜಕಾರಣಿಯಾಗಿ ತಮ್ಮನ್ನು ತಾವು ಸ್ಥಾಪಿಸಿಕೊಂಡ ಮಹಿಳೆಯರಿಗೆ ಅವರು ಮಾದರಿ ಎಂದು ಬಣ್ಣಿಸಿದರು.

ಉಮಾಶ್ರೀ ಜೀವನೋಪಾಯಕ್ಕಾಗಿ ರಂಗಭೂಮಿಯತ್ತ ತಿರುಗಿದರು ಆದರೆ ಅಂತಿಮವಾಗಿ ಭಾರತೀಯ ಚಿತ್ರರಂಗದ ಅತ್ಯುತ್ತಮ ನಟಿಯರಲ್ಲಿ ಒಬ್ಬರಾಗಿ ಹೊರಹೊಮ್ಮಿದರು ಎಂದು ಯತೀಂದ್ರ ಹೇಳಿದರು.

# ತುಮಕೂರಿಗೆ ಏರ್ ಪೋರ್ಟ್, ಮೆಡಿಕಲ್ ಕಾಲೇಜಿಗಾಗಿ ಶೀಘ್ರ ಸಿಎಂ ಭೇಟಿ: ಡಿಸಿಎಂ ಡಾ.ಜಿ. ಪರಮೇಶ್ವರ್

**ತುಮಕೂರು:** ಬೃಹತ್ ಕೈಗಾರಿಕಾ ಪ್ರದೇಶ, ರೈಲ್ವೆ, ಹೆದ್ದಾರಿ ಸಂಪರ್ಕ ಜಾಲ ಹೊಂದಿರುವ ತುಮಕೂರು ಜಿಲ್ಲೆಯಲ್ಲಿ 2ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪನೆ ಮಾಡಬೇಕೆಂದು ಶೀಘ್ರ ಮುಖ್ಯಮಂತ್ರಿಗಳನ್ನು ಜಿಲ್ಲೆಯ ಜನಪ್ರತಿನಿಧಿಗಳೊಂದಿಗೆ ಭೇಟಿಯಾಗಿ ಮನವಿ ಮಾಡಲಾಗುವುದು ಎಂದು ಉಪ ಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್ ತಿಳಿಸಿದರು.

ಅವರು ಸ್ವಾತಂತ್ರ್ಯ ದಿನಾಚರಣೆ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, 18 ಜಿಲ್ಲೆಗಳ ಪ್ರವೇಶದ್ವಾರವಾಗಿ ಮಧ್ಯ ಕರ್ನಾಟಕ, ಉತ್ತರ ಕರ್ನಾಟಕ, ಕಲ್ಯಾಣ ಕರ್ನಾಟಕಕ್ಕೆ ಸಂಪರ್ಕ ಕೊಂಡಿಯಾಗಿರುವ ತುಮಕೂರಿನಲ್ಲಿ ವಿಮಾನ ನಿಲ್ದಾಣ ಮಾಡಬೇಕೆಂಬುದು ನಮ್ಮ ಬೇಡಿಕೆಯಾಗಿದೆ. ಕೇಂದ್ರ ಸಚಿವ ವಿ.ಸೋಮಣ್ಣ ಅವರು ಈ ಸಂಬಂಧ ವಿಮಾನಯಾನ ಸಚಿವರಿಗೆ ಪತ್ರ ಬರೆದಿದ್ದು, ಸಿಎಂ ಭೇಟಿಯಾಗಿ ರಾಜ್ಯ ಸರ್ಕಾರದಿಂದ ಪ್ರಸ್ತಾವನೆ ಸಲ್ಲಿಸುವಂತೆ ಕೋರಲಾಗುವುದು ಎಂದರು.

ತುಮಕೂರಿನವರೆಗೆ ಮೆಟ್ರೋ ಸಂಬಂಧ ಡಿಪಿಆರ್ ಸಂಪೂರ್ಣವಾಗಿದ್ದು, ಪಿಪಿಪಿ ಮಾಡೆಲ್‌ನಲ್ಲಿ ಅನುಷ್ಠಾನಗೊಳಿಸಲಾಗುವುದು. ಹೆದ್ದಾರಿ ಮೀಡಿಯೇಷನ್ ಮೇಲೆ ಮೆಟ್ರೋ ಹಳೆಯ ಪಿಲ್ಲರ್ ಹಳಿ ಬರಬೇಕಿರುವುದರಿಂದ ಕೇಂದ್ರದ ಹೆದ್ದಾರಿ ಪ್ರಾಧಿಕಾರ ದ ಅನುಮತಿ ಅಗತ್ಯ. 20 ಸಾವಿರ ಕೋಟಿಗೂ ಅಧಿಕ ಹಣ ಮೆಟ್ರೋಗೆ ವೆಚ್ಚರಾಗಿದ್ದು, ಬಂಡವಾಳ ಹೂಡುವ ಸಂಸ್ಥೆಗಳಿಗೆ ಆಯಕಟ್ಟಿನ ಕಡೆ ವಾಣಿಜ್ಯ ಬಳಕೆಗೆ ಅವಕಾಶ ಮಾಡಿಕೊಟ್ಟು, ಆ ಮೂಲಕ ಆದಾಯ ದೊರೆಯುವಂತೆ ಮಾಡಲಾಗುವುದು ಎಂದರು.

**ಜೇನ್ ಜಿ ಪೀಳಿಗೆ ಉತ್ತಮ ಭವಿಷ್ಯಕ್ಕಾಗಿ ಸರ್ಕಾರ ಕ್ರಮ:** ನಮ್ಮ ಸರ್ಕಾರ ಜಾರಿಗೊಳಿಸಿದ



ಪಂಚಗ್ಯಾರಂಟಿ ಯೋಜನೆಗಳು ಇಡೀ ದೇಶದಲ್ಲಿ ಮೆಚ್ಚುಗೆಗೊಳಿಸುವ ಜೊತೆಗೆ ವಿಶ್ವ ಮಟ್ಟದ ಸಂಸ್ಥೆಗಳ ಪ್ರಶಂಸೆಗೆ ಪಾತ್ರವಾಗಿದೆ. ಡಿಸಿಎಂ ಅವರು ಸಿಎಂ ಆದ ಬಳಿಕ ಯುವಜನರನ್ನು ಕೇಂದ್ರೀಕರಿಸಿ ಅವರಲ್ಲಿ ಭವಿಷ್ಯತ್ ಪ್ರಗತಿ, ನಾಯಕತ್ವ, ಸಹಭಾಗಿತ್ವದ ಗುಣ ಬೆಳೆಸಿಕೊಳ್ಳಲು 10 ಸಾವಿರ ಭಾರತ್ ಜೋಡೋ ಸಂಘ ನೋಂದಣಿಗೆ ಚಾಲನೆ ಕೊಟ್ಟಿದ್ದು, ನೋಂದಣಿ ಆರಂಭಿಸಿದ ಒಂದೇ ದಿನದಲ್ಲಿ 50 ಸಾವಿರ ಅರ್ಜಿಗಳು ಬಂದಿವೆ. 18 ರಿಂದ 35 ವರ್ಷ ವಯೋಮಾನದ ಜೇನ್ ಜಿ ಜನರೇಷನ್‌ನವರು ಧರ್ಮ, ಜಾತಿ, ಪ್ರಾದೇಶಿಕತೆಯನ್ನು ಮೀರಿ ಉತ್ತಮ ಭವಿಷ್ಯಕ್ಕಾಗಿ ಹೋರಾಡುತ್ತಿದ್ದಾರೆ. ಇಂತಹ ಯುವಜನರ ಜೀವನ ಭದ್ರತೆಗಾಗಿ ನಮ್ಮ ಸರ್ಕಾರ ಕಾಳಜಿ ವಹಿಸಿ 73 ಸಾವಿರ ಹುದ್ದೆ ಭರ್ತಿಗೆ ಕ್ರಮವಹಿಸಿದೆ ಎಂದರು.

ಜಿಲ್ಲಾ ಗಣಿಬಾಧಿತ ಪ್ರದೇಶಗಳ ಪರಿಹಾರ ನಿಧಿಯಡಿ ನಿವೃತ್ತ ನ್ಯಾಯಾಧೀಶರ ಸಮಿತಿ ಅನುಮೋದನೆಯೊಂದಿಗೆ 132 ಕೋಟಿ ಅನುದಾನ ಪಡೆದು, ಸುಸಜ್ಜಿತ ಜಿಲ್ಲಾಸ್ಪತ್ರೆ ಹೊಸ ಕಟ್ಟಡ ನಿರ್ಮಾಣಕ್ಕೆ ನಿರ್ಮಾಣ ಕಾರ್ಯಕ್ಕೆ ಚಾಲನೆ ನೀಡಲಾಗಿದೆ. ಅಲ್ಲಿಯವರೆಗೆ ಟ್ರೌಮಾ ಕೇರ್ ಸೆಂಟರ್‌ನಲ್ಲಿ ರೋಗಿಗಳಿಗೆ ಆರೈಕೆ ಮಾಡಲಾಗುತ್ತಿದ್ದು, ಹೊಸ ಆಸ್ಪತ್ರೆ ಕಟ್ಟಡದೊಂದಿಗೆ ಸರ್ಕಾರಿ ಮೆಡಿಕಲ್ ಕಾಲೇಜನ್ನು ಆರಂಭಿಸಲು ಬಜೆಟ್ ಘೋಷಣೆ ಮಾಡುವಂತೆ ಸಿಎಂಗೆ ಮನವಿ ಮಾಡಲಾಗುವುದು ಎಂದರು.

ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶದ ಹಿನ್ನೆಲೆಯಲ್ಲಿ ತಮಿಳುನಾಡಿಗೂ 12.50 ಕ್ಯೂಸೆಕ್ ನೀರು ಹರಿಸಬೇಕಾದ ಅನಿವಾರ್ಯತೆ ಎದುರಾಗಿದೆ. ತುಮಕೂರಿಗೆ ಹೇಮಾವತಿ ನೀರು ಹರಿಸುವ ಸಂಬಂಧ ಶೀಘ್ರ ಐಸಿಸಿ ಸಮಿತಿ ಸಭೆ ಕರೆಯಲಾಗುವುದು. ಮಳೆ ಕೊರತೆಯಿಂದ ಜಿಲ್ಲೆಯಲ್ಲಿ ಬಿತ್ತನೆ ಪ್ರಮಾಣ ಶೇ.20ಕ್ಕೆ ಕುಸಿದಿರುವುದನ್ನು ಪ್ರತ್ಯಕ್ಷ ಕಂಡಿದ್ದೇನೆ. ಇಡೀ ರಾಜ್ಯದ ಬೆಳೆ ನಷ್ಟದ ವಾಸ್ತವಾಂಶದ ಸಮೀಕ್ಷಾ ವರದಿ ತರಿಸಿಕೊಂಡು ಕೇಂದ್ರ ಸರ್ಕಾರಕ್ಕೆ ಪರಿಹಾರದ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದರು.

ರೈತರಿಂದ ರಾಗಿ ಖರೀದಿ ಬಾಬು ಬಾಕಿಯಿರುವ ಸಂಗತಿ ಸರ್ಕಾರದ ಗಮನಕ್ಕೂ ಇದ್ದು ಶೀಘ್ರ ಬಿಡುಗಡೆಗೆ ಸಿಎಂ ಜೊತೆ ಚರ್ಚಿಸಲಾಗುವುದು ಎಂದ ಅವರು, ಅರಣ್ಯ ಇಲಾಖೆಯಿಂದ ಒತ್ತುವರಿ ತೆರವು ಕ್ರಮ ನಿಯಮಾನುಸಾರವೇ ಆಗಿರುತ್ತದೆ. ರೈತರನ್ನು ಅನಗತ್ಯವಾಗಿ ಒಕ್ಕಲೆಬ್ಬಿಸುವ ಯತ್ನ ಮಾಡುವುದಿಲ್ಲ. ಅಕ್ರಮ ಸಾಗುವಳಿದಾರರ ಮೇಲೆ ಕ್ರಮವಾಗುತ್ತದೆ ಎಂದರು.

ತುಮಕೂರು ವಸಂತ ನರಸಾಪುರ ಕೈಗಾರಿಕಾ ಪ್ರದೇಶದಲ್ಲಿ ಕೇಂದ್ರ ಸರ್ಕಾರದ ಅನುದಾನದಲ್ಲಿ ಎಲ್ ಅಂಡ್ ಟಿ ಕಂಪನಿಯಿಂದ ಇಂಡಸ್ಟ್ರಿಯಲ್ ಟೌನ್‌ಶಿಪ್ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದ್ದು, ಐಟಿ ಸಾಫ್ಟ್‌ವೇರ್ ಕಂಪನಿಗಳು ಡೇಟಾ ಸೆಂಟರ್ ತಲೆ ಎತ್ತಲಿದೆ ಹಾಗೂ 25 ಸಾವಿರ ಉದ್ಯೋಗಾವಕಾಶಗಳು ಲಭ್ಯವಾಗುವ ಗ್ರೀನ್ ಹೈಡ್ರೋಜನ್ ಸಂಸ್ಥೆ ಘಟಕವೂ ಬರಲಿದೆ ಎಂದು ಮಾಹಿತಿ ನೀಡಿದರು.

ಖೇಲೋ ಇಂಡಿಯಾ ಆಯೋಜನೆ: ತುಮಕೂರು ಕ್ರೀಡಾ ಹಬ್ ಆಗಿ ಬೆಳೆಯಬೇಕೆಂದು ಅನೇಕ ರಾಷ್ಟ್ರೀಯ ಅಂತಾರಾಷ್ಟ್ರೀಯ ಕ್ರೀಡಾಪಂದ್ಯಾವಳಿ ಆತಿಥ್ಯ ವಹಿಸುವ ಅವಕಾಶವನ್ನು ತುಮಕೂರು ನೀಡಿದ್ದು, ಖೇಲೋ ಇಂಡಿಯಾ ವಾರ್ಷಿಕ ಕ್ರೀಡಾಕೂಟವನ್ನು ತುಮಕೂರಿನಲ್ಲಿ ಆಯೋಜಿಸುವಂತೆ ಪತ್ರ ಬರೆಯಲಾಗಿದೆ. ಕೆಎಸ್‌ಸಿಎ ನೂತನ ಕ್ರಿಕೆಟ್ ಸ್ಟೇಡಿಯಂ ಕಾಮಗಾರಿಗೆ ಶೀಘ್ರ ಚಾಲನೆ ಕೊಡುವಂತೆ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಜೊತೆಗೆ ಸಮಾಲೋಚಿಸಿರುವುದಾಗಿ ಕ್ರೀಡಾ ಸಚಿವರಾದ ಡಾ ಜಿ ಪರಮೇಶ್ವರ್ ತಿಳಿಸಿದರು.

ತುಮಕೂರು ನಗರದ ಕುಡಿಯುವ ನೀರು, ಚರಂಡಿ, ರಸ್ತೆ ವ್ಯವಸ್ಥೆಗೆ ವಿಶೇಷ ಅನುದಾನ ಕೋರಲಾಗಿದೆ ಎಂದ ಡಿಸಿಎಂ ಅವರು ನಗರದಲ್ಲಿ ನಡೆಯುತ್ತಿರುವ ಒತ್ತುವರಿ ತೆರವು ಕೋರ್ಟ್‌ಆದೇಶ ಪಾಲನೆಯ ಜೊತೆಗೆ ಪಾದಚಾರಿಗಳು, ರಸ್ತೆ ಸಂಚಾರಕ್ಕೆ ಅಡ್ಡಿಯಾಗಿದ್ದರ ವಿರುದ್ಧದ ಕ್ರಮವಾಗಿದೆ. ಆರಂಭದಲ್ಲಿ ವ್ಯಾಪಾರಿಗಳಿಗೆ ಸ್ವಲ್ಪ ತೊಂದರೆಯಾಗಿದೆ. ಸೂಕ್ತ ಪರ್ಯಾಯ ವ್ಯವಸ್ಥೆ ಹಂತಹಂತವಾಗಿ ಸಿಗಲಿದೆ ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು. ಸುದ್ದಿಗೋಷ್ಠಿಯಲ್ಲಿ ಬಿಎಂಟಿಸಿ ಉಪಾಧ್ಯಕ್ಷ ನಿಕೇತ್‌ರಾಜ್, ಕಾಡುಗೊಲ್ಲ ನಿಗಮದ ಅಧ್ಯಕ್ಷ ಮಹೇಶ್ ಪಾಲೇಗೌಡ, ಗ್ಯಾರಂಟಿ ಅನುಷ್ಠಾನದ ಅಧ್ಯಕ್ಷ ಚಂದ್ರಶೇಖರಗೌಡ, ಡಿಸಿ ಶುಭಕಲ್ಯಾಣ್, ಎಸ್ಪಿ ಕೆ.ವಿ.ಅಶೋಕ್, ಎಡಿಸಿ ತಿಪ್ಪೇಸ್ವಾಮಿ, ಎಸಿ ನಫೀಜಾ ಬಾನು, ತಹಸೀಲ್ದಾರ್ ರಾಜೇಶ್ವರಿ, ಸಿಂಡಿಕೇಟ್ ಸದಸ್ಯ ಫರ್ಹಾನ್ ಬೇಗ್ ಹಾಜರಿದ್ದರು.

# ತುಮಕೂರು ಜಿಲ್ಲಾ ಕಾಫಿ ಟೇಬಲ್ ಬುಕ್ ವೆಬ್‌ಸೈಟ್ ಬಿಡುಗಡೆ



**ತುಮಕೂರು:** ಜಿಲ್ಲಾಡಳಿತ, ತುಮಕೂರು ವತಿಯಿಂದ ಜಿಲ್ಲೆಯ ಸಮಗ್ರ ಮಾಹಿತಿ, ಅಭಿವೃದ್ಧಿ ಚಟುವಟಿಕೆಗಳು, ಪ್ರವಾಸಿ ತಾಣಗಳು, ಐತಿಹಾಸಿಕ ಹಾಗೂ ಸಾಂಸ್ಕೃತಿಕ ವೈಶಿಷ್ಟ್ಯಗಳನ್ನು ಒಳಗೊಂಡ ತುಮಕೂರು ಜಿಲ್ಲಾ ಕಾಫಿ ಟೇಬಲ್ ಬುಕ್ ವೆಬ್‌ಸೈಟ್ https://tumkurinfo.comಅನ್ನು ಮಾನ್ಯ ಉಪ ಮುಖ್ಯಮಂತ್ರಿ ಡಾ ಜಿ ಪರಮೇಶ್ವರ್ ಅವರು ಬಿಡುಗಡೆಗೊಳಿಸಿದರು.

ಜಿಲ್ಲೆಯ ಪ್ರಮುಖ ಸಾಧನೆಗಳು, ವಿವಿಧ ಅಭಿವೃದ್ಧಿ ಕಾರ್ಯಗಳು ಹಾಗೂ ಆಡಳಿತಾತ್ಮಕ ಮಾಹಿತಿಯನ್ನು ಒಂದೇ ವೇದಿಕೆಯಲ್ಲಿ ಸಾರ್ವಜನಿಕರಿಗೆ ಪರಿಚಯಿಸುವ ಉದ್ದೇಶದಿಂದ ಕಾಫಿ ಟೇಬಲ್ ಬುಕ್ ಅನ್ನು ಸಿದ್ಧಪಡಿಸಲಾಗಿದೆ. ಜಿಲ್ಲೆಯ ಸಮಗ್ರ ಬೆಳವಣಿಗೆ ಹಾಗೂ ವಿಶೇಷತೆಗಳನ್ನು ಆಕರ್ಷಕವಾಗಿ ದಾಖಲಿಸುವ ಪ್ರಯತ್ನ ಇದಾಗಿದೆ.

ತುಮಕೂರು ಜಿಲ್ಲೆಯ ಐತಿಹಾಸಿಕ ಹಿನ್ನೆಲೆ, ಸಾಂಸ್ಕೃತಿಕ ಪರಂಪರೆ, ಪ್ರವಾಸಿ ತಾಣಗಳು, ನೈಸರ್ಗಿಕ ಸೌಂದರ್ಯ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಜಿಲ್ಲೆ ಸಾಧಿಸಿರುವ ಪ್ರಗತಿಯ ಮಾಹಿತಿಯನ್ನು ಕಾಫಿ ಟೇಬಲ್ ಬುಕ್‌ನಲ್ಲಿ ಒಳಗೊಂಡಿದೆ. ಇದರ ಮೂಲಕ ಜಿಲ್ಲೆಯ ವೈಶಿಷ್ಟ್ಯಗಳನ್ನು ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಪರಿಚಯಿಸಲು ಸಹಕಾರಿಯಾಗಲಿದೆ.

ಕಾಫಿ ಟೇಬಲ್ ಬುಕ್ ಸಾರ್ವಜನಿಕರು, ಪ್ರವಾಸಿಗರು, ವಿದ್ಯಾರ್ಥಿಗಳು, ಸಂಶೋಧಕರು, ಉದ್ಯಮಿಗಳು ಹಾಗೂ ಜಿಲ್ಲೆಯ ಕುರಿತು ಮಾಹಿತಿ ತಿಳಿದುಕೊಳ್ಳಲು ಆಸಕ್ತಿ ಹೊಂದಿರುವ ವಿವಿಧ ವರ್ಗದವರಿಗೆ ಉಪಯುಕ್ತ ದಾಖಲೆಯಾಗಿ ರೂಪುಗೊಂಡಿದೆ. ಜಿಲ್ಲೆಯ ಸಮಗ್ರ ಚಿತ್ರಣವನ್ನು ಸುಲಭವಾಗಿ ತಲುಪಿಸುವ ನಿಟ್ಟಿನಲ್ಲಿ ವೆಬ್‌ಸೈಟ್‌ನ್ನು ವಿನ್ಯಾಸಗೊಳಿಸಲಾಗಿದೆ.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ ವಿ ಅಶೋಕ್, ಉಪವಿಭಾಗಾಧಿಕಾರಿ ನಾಹಿದಾ ಜಮ್ ಜಮ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಇಂಡಿಪೆಂಡೆನ್ಸ್ ಡೇ ಸೇಲ್: ಒಂದೇ ದಿನ ದಾಖಲೆಯ 35 ಲಕ್ಷ ರೂ. ವಹಿವಾಟು: ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ!

**ಹಾಸನ:** ಸ್ವಾತಂತ್ರ್ಯ ದಿನಾಚರಣೆಯ ದಿನದಂದು ಹೆಚ್ ಎಂಟಿ ಕೈಗಡಿಯಾರಗಳ ಮಾರಾಟ ದಾಖಲೆಯ ಪ್ರಮಾಣದಲ್ಲಿ ಆಗಿದ್ದು ಒಂದೇ ದಿನ ಸುಮಾರು ?35 ಲಕ್ಷಕ್ಕೂ ಹೆಚ್ಚು ವಹಿವಾಟು ನಡೆದಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ತಿಳಿಸಿದರು.

ಹಾಸನ ಜಿಲ್ಲೆಯ ಹೊಳೆನರಸೀಪುರದಲ್ಲಿ ಮಾತನಾಡಿದ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ, ಸ್ವಾತಂತ್ರ್ಯ ದಿನದ ಪ್ರಯುಕ್ತ ಹೆಚ್‌ಎಂಟಿ ಕಂಪನಿಯು ವಿಶೇಷ ಆವೃತ್ತಿಯ ಕೆಲ ಅಪರೂಪದ ಕೈಗಡಿಯಾರಗಳನ್ನು ಮಾರುಕಟ್ಟೆಗೆ ಬಿಡುಗಡೆ ಮಾಡಿತ್ತು. ಅಂದು ವಾಚುಗಳ ಖರೀದಿಗೆ ಮುಗಿಬಿದ್ದ ಗ್ರಾಹಕರು ಸುಮಾರು ಎರಡುವರೆ ಕಿಲೋಮೀಟರ್ ಗೂ ಹೆಚ್ಚು ದೂರ



ಸಾಲಿನಲ್ಲಿ ನಿಂತು ಖರೀದಿ ಮಾಡಿದ್ದಾರೆ ಎಂದು ಹೇಳಿದರು.

ಅಂದು ನಮ್ಮ ಕಡೆಯಿಂದ ಸಾವಿರಾರು ಕೈ ಗಡಿಯಾರಗಳು ಮಾರಾಟವಾಗಿದ್ದು, ಒಂದೇ 35 ಲಕ್ಷ ರೂ. ವಹಿವಾಟು ನಡೆದಿರುವುದು ಕಂಪನಿಯನ್ನು ಪುನಶ್ಚೇತನಗೊಳಿಸುವ ನಮ್ಮ ಉದ್ದೇಶಕ್ಕೆ ಮತ್ತಷ್ಟು ಬಲ ನೀಡಿದೆ ಎಂದರು.

ಹೆಚ್‌ಎಂ.ಟಿ ಗಡಿಯಾರಗಳ ಬಗ್ಗೆ ಜನರಲ್ಲಿ ಇವತ್ತಿಗೂ ಅಭಿಮಾನ ಗೌರವ ಇದೆ. ಹಿಂದೆ ಹೆಚ್ ಎಂಟಿ ಗಡಿಯಾರ ಕಟ್ಟುವುದು ಎಂದರೆ ಹೆಮ್ಮೆ ಮತ್ತು ಪ್ರತಿಷ್ಠೆಯ ಸಂಗತಿಯಾಗಿತ್ತು. ಆ ವೈಭವವನ್ನು ಮರಳಿ ತರುವುದು ನಮ್ಮ ಉದ್ದೇಶವಾಗಿದೆ. ಅದಕ್ಕಾಗಿ ಗಂಭೀರ ಪ್ರಯತ್ನಗಳನ್ನು ಮಾಡುತ್ತಿದ್ದೇವೆ ಎಂದು ಹೆಚ್ ಡಿ ಕುಮಾರಸ್ವಾಮಿ ತಿಳಿಸಿದರು.

ಕಾರ್ಖಾನೆಗೆ ಮರುಜೀವ ನೀಡುವ ನಿಟ್ಟಿನಲ್ಲಿ ಎರಡು ವರ್ಷಗಳಿಂದ ನಿರಂತರ ಪ್ರಯತ್ನ ಮಾಡುತ್ತಿದ್ದೇವೆ. ಈ ಕುರಿತು ಯೋಜನಾ ಆಯೋಗದ ಸದಸ್ಯರಾದ ವಿ.ಕೆ. ಸಾರಸ್ವತ ಅವರ ಅಧ್ಯಕ್ಷತೆಯಲ್ಲಿ ಉನ್ನತ ಮಟದ ಸಮಿತಿಯನ್ನು ರಚಿಸಲಾಗಿತ್ತು. ಈಗಾಗಲೇ ಸಮಿತಿ ವರದಿಯನ್ನು ನೀಡಿ ಕೆಲವು ಮಹತ್ವದ ಶಿಫಾರಸ್ಸುಗಳನ್ನು ಮಾಡಿದೆ. ಅದರಂತೆಯೇ ಕಾರ್ಖಾನೆಗೆ ಮರುಜೀವ ನೀಡಲು ಈಗಾಗಲೇ ಕೇಂದ್ರದ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರೊಂದಿಗೂ ಕೂಡ ಮಾತಕತೆ ನಡೆಸಿದ್ದೇನೆ ಎಂದು ಹೆಚ್ ಡಿ ಕುಮಾರಸ್ವಾಮಿ ಮಾಹಿತಿ ನೀಡಿದರು.

ಯುವಕರಿಗೆ ಕೃತಜ್ಞತೆ ಸಲ್ಲಿಸಿದ ಹೆ?ಚ್ ಡಿಕೆ: ದೊಡ್ಡ ಪ್ರಮಾಣದಲ್ಲಿ ಯುವಕರು ಸ್ವಾತಂತ್ರ್ಯ ದಿನ ವಾಚ್ ಗಳನ್ನು ಖರೀದಿ ಮಾಡಿದ್ದಾರೆ. ವಯಸ್ಸಿನ ಹಂಗಿಲ್ಲದೆ ಹಿರಿಯರು ಕಿರಿಯರು ಮಕ್ಕಳು ಕೂಡ ಸಾಲಿನಲ್ಲಿ ನಿಂತು ಗಡಿಯಾರಗಳನ್ನು ಖರೀದಿ ಮಾಡಿದ್ದಾರೆ. ಎಚ್‌ಎಂಟಿಯ ಮೇಲೆ ಅವರೆಲ್ಲರೂ ಇರಿಸಿರುವ ಅಭಿಮಾನಕ್ಕೆ ಧನ್ಯವಾದ ಹೇಳಲು ಬಯಸುತ್ತೇನೆ.

ಮುಖ್ಯವಾಗಿ ಯುವಜನತೆ ನಮ್ಮ ಗಡಿಯಾರಗಳಿಗೆ ಅತಿಹೆಚ್ಚು ಅಭಿಮಾನ ತೋರುತ್ತಿದ್ದಾರೆ, ಅವರ ಬೆಂಬಲ ಹೀಗೆಯೇ ಇರಲಿ ಎಂದು ಹೆಚ್ ಡಿ ಕುಮಾರಸ್ವಾಮಿ ಹೇಳಿದರು.

Printed by: H.S.PARAMESH, Printed at SRI LAKSHMINARASIMHA OFFSET PRINTERS, 7TH CROSS, SRIRAMANAGARA, TUMAKURU, TUMAKURU DIST., KARNATAKA PIN-572101 Published & owned by RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI TALUK, TUMAKURU DIST. KARNATAKA PIN-572132, and published at TUMAKURU. BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU. DIST. KARNATAKA PIN-572132 Editor: RADHIKA A.R. “KARNATAKA SUCCESS NO 1 ” KANNADA Daily News Paper